ಸಂಪಾದಕರು :
ಎಂ.ಎಸ್. ವಿಕಾಸ್

# ಜನತಾವಾಣಿ

ಮಧ್ಯ ಕರ್ನಾಟಕದ ಆಪ್ತ ಒಡನಾಡಿ

1974 50 2023

ಗುರುವಾರ, ಏಪ್ರಿಲ್ 04, 2024
ದಾವಣಗೆರೆ, ಪುಟ : 6 ರೂ : 5
ಸಂಪುಟ : 50 ಸಂಚಿಕೆ : 324 RNI : 27369/75

janathavani@mac.com
www.janathavani.com
08192 254736 91642 99999

ಮದುವೆ ಹಾಗೂ ಶುಭಸಮಾರಂಭಗಳಿಗೆ ರಾಜ್ಯದಲ್ಲಿಯೇ ಪ್ರಸಿದ್ಧವಾದ ಬಟ್ಟೆ ಅಂಗಡಿ
BSC B.S. CHANNABASAPPA & SONS Since - 1938
ಬಿ.ಎಸ್.ಚನ್ನಬಸಪ್ಪ & ಸನ್ಸ್
ಕಾಳಿಕಾದೇವಿ ರಸ್ತೆ | ಪಿ ಜೆ ಬಡಾವಣೆ | ಡೆಂಟಲ್ ಕಾಲೇಜ್ ರಸ್ತೆ ದಾವಣಗೆರೆ


## 6ಕ್ಕೆ ಬಿಜೆಪಿ-ಜೆಡಿಎಸ್ ಸಮ್ಮಿಲನ ಸಮಾವೇಶ



**ಸಂಸದ ಸಿದ್ದೇಶ್ವರ ಹಾಗೂ ಮಾಜಿ ಶಾಸಕ ಹೆಚ್.ಎಸ್. ಶಿವಶಂಕರ್ ಜಂಟಿ ಪತ್ರಿಕಾಗೋಷ್ಠಿಯಲ್ಲಿ ಮಾಹಿತಿ**

ದಾವಣಗೆರೆ, ಏ. 3 – ಏಪ್ರಿಲ್ 6ರ ಸಂಜೆ 4 ಗಂಟೆಗೆ ಹರಿಹರದ ಸಿದ್ದೇಶ್ವರ ಪ್ಯಾಲೇಸ್‌ನಲ್ಲಿ ಬಿಜೆಪಿ - ಜೆಡಿಎಸ್ ಪಕ್ಷಗಳಿಂದ 'ಸಮ್ಮಿಲನದ ಸಮಾವೇಶ' ನಡೆಯಲಿದೆ ಎಂದು ಸಂಸದ ಸಿದ್ದೇಶ್ವರ ಹಾಗೂ ಮಾಜಿ ಶಾಸಕ ಹೆಚ್.ಎಸ್. ಶಿವಶಂಕರ್ ತಿಳಿಸಿದ್ದಾರೆ.

ಬಿಜೆಪಿ ಹಾಗೂ ಜೆಡಿಎಸ್ ಪಕ್ಷಗಳ ಜಂಟಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಬಾರಿಯ ಚುನಾವಣೆಯಲ್ಲಿ ಬಿಜೆಪಿ - ಜೆಡಿಎಸ್‌ಗಳು ಎನ್.ಡಿ.ಎ. ಮೈತ್ರಿಕೂಟವಾಗಿ ಸ್ಪರ್ಧಿಸಲಿವೆ. ಬಿಜೆಪಿ ಅಭ್ಯರ್ಥಿಯಾದ ಗಾಯತ್ರಿ ಸಿದ್ದೇಶ್ವರ್ ಹೆಚ್ಚಿನ ಬಹುಮತದಿಂದ ಗೆಲುವು ಸಾಧಿಸಲಿದ್ದಾರೆ ಎಂದರು.

ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು ದೇಶಕ್ಕೆ ಸೂಕ್ತವಾಗಿದ್ದಾರೆ. ದೇಶದ ರಕ್ಷಣೆ ಹಾಗೂ ಅಭಿವೃದ್ಧಿ ದೃಷ್ಟಿಯಿಂದ ಬಿಜೆಪಿಗೆ ಜೆಡಿಎಸ್ ಬೆಂಬಲ ನೀಡಿದೆ. ಸೀಟು ಹಂಚಿಕೆ ಮಾಡುವಾಗ ಇದ್ದ ಗೊಂದಲ ಈಗ ಬಗೆಹರಿದಿದೆ. ಬಿಜೆಪಿ ಹಾಗೂ ಜೆಡಿಎಸ್ ಈಗ ಒಂದೇ ವೇದಿಕೆಗೆ ಬಂದಿದ್ದೇವೆ ಎಂದು ಜೆಡಿಎಸ್ ಮುಖಂಡ ಶಿವಶಂಕರ್ ಹೇಳಿದರು.

ಕಾಂಗ್ರೆಸ್ ಸರ್ಕಾರ ರಾಜ್ಯದಲ್ಲಿ ಎರಡು ಬಜೆಟ್ ಮಂಡಿಸಿದರೂ, ಜಿಲ್ಲೆಯ ಅಭಿವೃದ್ಧಿಗೆ ಬಿಡಿಗಾಸೂ ನೀಡಿಲ್ಲ. ಯಾವ ಮುಖ ಇಟ್ಟುಕೊಂಡು ಆ ಪಕ್ಷ ಮತ ಕೇಳುತ್ತಿದೆ? ಎಂದೂ ಅವರು ಪ್ರಶ್ನಿಸಿದರು.

ಸಂಸದ ಸಿದ್ದೇಶ್ವರ ಮಾತನಾಡಿ, ಜೆಡಿಎಸ್ ಹಾಗೂ ಬಿಜೆಪಿ ಹೊಂದಾಣಿಕೆಯಿಂದ ಲೋಕಸಭಾ ಚುನಾವಣೆಗೆ ಪ್ರಚಾರ ಕೈಗೊಳ್ಳುತ್ತಿದ್ದೇವೆ. ಎರಡೂ ಪಕ್ಷಗಳ ಕಾರ್ಯಕರ್ತರು ಜೊತೆಯಾಗಿ ಕ್ಷೇತ್ರಾದ್ಯಂತ ಕಾರ್ಯ ನಿರ್ವಹಿಸಲಿದ್ದೇವೆ ಎಂದು ತಿಳಿಸಿದರು. (2ನೇ ಪುಟಕ್ಕೆ)

## ಚುನಾವಣಾ ಸ್ಪರ್ಧೆಯಿಂದ ಹಿಂದೆ ಸರಿದ ಸುಮಲತಾ



ಬೆಂಗಳೂರು, ಏ. 3 - ಲೋಕಸಭಾ ಚುನಾವಣಾ ಸ್ಪರ್ಧೆಯಿಂದ ಹಿಂದೆ ಸರಿದಿರುವ ಸಂಸದೆ ಸುಮಲತಾ ಅಂಬರೀಷ್, ಮಂಡ್ಯದಲ್ಲಿ ಎನ್‌ಡಿಎ ಅಭ್ಯರ್ಥಿ, ಮಾಜಿ ಮುಖ್ಯಮಂತ್ರಿ ಹೆಚ್.ಡಿ. ಕುಮಾರಸ್ವಾಮಿ ಅವರನ್ನು ಬೆಂಬಲಿಸುವುದಾಗಿ ಘೋಷಣೆ ಮಾಡಿದ್ದಾರೆ.

ಚುನಾವಣಾ ಕಣಕ್ಕಿಳಿಯುವ ಬಗ್ಗೆ ಕಳೆದ ಆರು ತಿಂಗಳಿಂದ ಗೊಂದಲದಲ್ಲಿದ್ದ ಸುಮಲತಾ ದೆಹಲಿ ಬಿಜೆಪಿ ನಾಯಕರ ಮಾತಿಗೆ ಮಣಿದು ಈ ತೀರ್ಮಾನ ಕೈಗೊಂಡಿದ್ದಾರೆ.

ಸ್ಪರ್ಧಾ ಕಣದಿಂದ ಹಿಂದೆ ಸರಿಯುವುದಕ್ಕೂ ಮುನ್ನ ತಮ್ಮ ಆಪ್ತರು ಮತ್ತು ಬೆಂಬಲಿಗರ ಸಭೆ ನಡೆಸಿ, ಈ ಚುನಾವಣೆಯಲ್ಲಿ ಕಣಕ್ಕಿಳಿಯುವುದಿಲ್ಲ ಬಿಜೆಪಿಯನ್ನು ಬೆಂಬಲಿಸುತ್ತೇನೆ ಎಂದು ತಿಳಿಸಿದ್ದಾರೆ.

ಹಾಗೆಂದು ಮುಂದಿನ ಚುನಾವಣೆಯಲ್ಲಿ ಕಣಕ್ಕಿಳಿಯುವುದಿಲ್ಲ ಎಂಬರ್ಥ ಅಲ್ಲ, ಸದ್ಯದ ಪರಿಸ್ಥಿತಿಯಲ್ಲಿ ಈ ತೀರ್ಮಾನ ಕೈಗೊಂಡಿದ್ದೇನೆ.

ಕಳೆದ ಚುನಾವಣೆಯಲ್ಲಿ ಮಂಡ್ಯದ ಮತದಾರರು ನನ್ನನ್ನು ಪಕ್ಷೇತರ ಅಭ್ಯರ್ಥಿಯಾಗಿ (2ನೇ ಪುಟಕ್ಕೆ)

## ಸಚಿವರು ಕಣಕ್ಕಿಳಿದಿದ್ದರೆ 20 ಕ್ಷೇತ್ರಗಳಲ್ಲಿ ಗೆಲುವು

**ಚುನಾವಣಾ ತಂತ್ರ ನಿಪುಣ ಸುನೀಲ್ ಕನಗೋಳ್ ಎಐಸಿಸಿಗೆ ಸಮೀಕ್ಷಾ ವರದಿ**

ಬೆಂಗಳೂರು, ಏ. 3 - ಸಂಪುಟದ ಕೆಲವು ಸಚಿವರನ್ನು ಕಣಕ್ಕಿಳಿಸಿದ್ದರೆ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ 19 ರಿಂದ 20 ಕ್ಷೇತ್ರಗಳಲ್ಲಿ ಜಯ ಗಳಿಸುತ್ತಿತ್ತು.


ಸಚಿವರನ್ನು ಕಣಕ್ಕಿಳಿಸದ ಕಾರಣ 14 ರಿಂದ 15 ಕ್ಷೇತ್ರಗಳಲ್ಲಿ ಅಭ್ಯರ್ಥಿಗಳು ಜಯಭೇರಿ ಭಾರಿಸಲಿದ್ದಾರೆ ಎಂದು ಚುನಾವಣಾ ತಂತ್ರ ನಿಪುಣ ಸುನೀಲ್ ಕನಗೋಳ್ ಎಐಸಿಸಿಗೆ ಸಮೀಕ್ಷಾ ವರದಿ ನೀಡಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಗ್ಯಾರಂಟಿ ಯೋಜನೆಗಳೇ ಕಾಂಗ್ರೆಸ್ ಪಕ್ಷವನ್ನು ಕೈಹಿಡಿದಿದ್ದು, ಇಷ್ಟು ದೊಡ್ಡ ಸಂಖ್ಯೆಯಲ್ಲಿ ಗೆಲುವಿಗೆ, ಜನರ ಮನೆ ಬಾಗಿಲಿಗೆ ಪಂಚ ಯೋಜನೆಗಳು ತಲುಪಿರುವುದೇ ಕಾರಣ ಎಂದು ವರದಿಯಲ್ಲಿ ತಿಳಿಸಲಾಗಿದೆ.

ರಾಜ್ಯದ 28 ಕ್ಷೇತ್ರಗಳ ಪ್ರಚಾರ ಸಂದರ್ಭದಲ್ಲೂ ಗ್ಯಾರಂಟಿ ಯೋಜನೆಗಳನ್ನೇ ಮುಂದಿಟ್ಟುಕೊಳ್ಳಿ, ಬರದ ವಿಷಯದಲ್ಲಿ ಕೇಂದ್ರದ ಮಲತಾಯಿ ಧೋರಣೆಯನ್ನು ಜನರ ಮುಂದೆ ಎಳೆ ಎಳೆಯಾಗಿ ಬಿಡಿಸಿಡಿ ಎಂದು ಹೇಳಿದ್ದಾರೆ.

ಕಳೆದ ವಿಧಾನಸಭಾ ಚುನಾವಣೆಯಲ್ಲಿ ಕನಗೋಳ್ ಅವರೇ ಐದು ಗ್ಯಾರಂಟಿ ಯೋಜನೆಗಳನ್ನು ರೂಪಿಸಿದ್ದಲ್ಲದೆ, ಐದು ಯೋಜನೆಗಳನ್ನು ಹಂತ ಹಂತವಾಗಿ ಮತದಾರರ ಮುಂದಿಟ್ಟು ಕಾಂಗ್ರೆಸ್ ಗೆಲುವಿಗೆ ರೂವಾರಿಯಾಗಿದ್ದರು.

## ಉತ್ತರ-ದಕ್ಷಿಣಕ್ಕೆ ಶೇ. 85ಕ್ಕೂ ಹೆಚ್ಚು ಮತದಾನದ ಟಾರ್ಗೆಟ್



**ಲೋಕಸಭಾ ಚುನಾವಣೆ**

ದಾವಣಗೆರೆ ಏ.3- ದಾವಣಗೆರೆ ಉತ್ತರ ಮತ್ತು ದಕ್ಷಿಣ ವಿಧಾನಸಭಾ ಕ್ಷೇತ್ರದಲ್ಲಿ 2019ರ ಲೋಕಸಭಾ ಚುನಾವಣೆಯಲ್ಲಿ ಕ್ಷೇತ್ರದ ಸರಾಸರಿಗಿಂತ ಕಡಿಮೆ ಮತದಾನವಾಗಿದ್ದು, ಈ ಬಾರಿ ಚುನಾವಣೆಯಲ್ಲಿ ಶೇ. 85ಕ್ಕಿಂತ ಹೆಚ್ಚು ಮತದಾನವಾಗುವಂತೆ ನೋಡಿ ಕೊಳ್ಳಬೇಕೆಂದು ಜಿಲ್ಲಾ ಪಂಚಾಯತ್ ಸಿಇಓ ಹಾಗೂ ಸ್ವೀಪ್ ಸಮಿತಿ ಅಧ್ಯಕ್ಷ ಸುರೇಶ್ ಬಿ.ಇಟ್ನಾಳ್ ತಿಳಿಸಿದರು.

ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಇಂದು, ದಾವಣಗೆರೆ ಉತ್ತರ, ದಕ್ಷಿಣ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಮತಗಟ್ಟೆ ಅಧಿಕಾರಿಗಳೊಂದಿಗೆ ನಡೆಸಿದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕಳೆದ 2019 ರಲ್ಲಿ ನಡೆದ ಲೋಕಸಭಾ ಚುನಾವಣೆಯಲ್ಲಿ ದಾವಣಗೆರೆ ಕ್ಷೇತ್ರದಲ್ಲಿ ಶೇ. 72.96 ರಷ್ಟು ಮತದಾನವಾಗಿತ್ತು. ಆದರೆ ಅತ್ಯಂತ ಕಡಿಮೆ ಮತದಾನವಾಗಿದ್ದು, (2ನೇ ಪುಟಕ್ಕೆ)

## ಹರಿಹರ ನದಿಗೆ ಹರಿದು ಬಂದ ಭದ್ರೆ ನೀರು



**ಜನತೆಗೆ ಕುಡಿವ ನೀರಿಗೆ ತೊಂದರೆ ಆಗದು.**
**- ಪೌರಾಯುಕ್ತ ಬಸವರಾಜ್**

ಹರಿಹರ, ಏ.3- ಮುಂದಿನ ದಿನಗಳಲ್ಲಿ ನಗರದ ಜನತೆಗೆ ಕುಡಿಯುವ ನೀರಿನ ತೊಂದರೆ ಆಗದಂತೆ ನೋಡಿಕೊಳ್ಳಲಾಗುವುದು ಎಂದು ಪೌರಾಯುಕ್ತ ಐಗೂರು ಬಸವರಾಜ್ ತಿಳಿಸಿದರು.

ತುಂಗಭದ್ರಾ ನದಿಯಲ್ಲಿ ಡ್ಯಾಂನಿಂದ ಬಿಟ್ಟಿರುವ ನೀರು ಹರಿಯತ್ತಿದ್ದು, ನದಿಯಲ್ಲಿ ಮರಳಿನ ಚೀಲಗಳನ್ನಿಟ್ಟು ನೀರು ಶೇಖರಣೆ ಮಾಡುವುದಕ್ಕೆ ಜಿಲ್ಲಾಧಿಕಾರಿಗಳು ಅನುಮತಿ ನೀಡಿದ್ದಾರೆ. ಶನಿವಾರದ ನಂತರ ನೀರು ಸಂಗ್ರಹಣೆ ಮಾಡುವುದಾಗಿ ತಿಳಿಸಿದರು.

ನಗರಸಭೆ ಆವರಣದಲ್ಲಿ ಮಾತನಾಡಿದ ಪೌರಾಯುಕ್ತರು, ಬೇಸಿಗೆಯಲ್ಲಿ ನದಿಯಲ್ಲಿ ನೀರಿನ ಪ್ರಮಾಣ ಕಡಿಮೆ ಆಗಿದ್ದರಿಂದ, ಕಳೆದ ಎರಡು ತಿಂಗಳಲ್ಲಿ ಹರಿಹರ ಜನತೆಗೆ ಕುಡಿಯುವ ನೀರು ಸರಬರಾಜು ಸರಿಯಾದ ರೀತಿಯಲ್ಲಿ ಆಗದೇ ಇದ್ದ ಪರಿಣಾಮ ಎಲ್ಲಾ ವಾರ್ಡಿನಲ್ಲಿ ಕುಡಿಯುವ ನೀರಿನ ಸಮಸ್ಯೆ ನಿಭಾಯಿಸುವುದೇ ಒಂದು ದೊಡ್ಡ ಸವಾಲಾಗಿತ್ತು. ಆದಾಗ್ಯೂ ಸಹ ನಮ್ಮ ಇಲಾಖೆ ಜೊತೆಗೆ ಜಲಸಿರಿ ಇಲಾಖೆ ಅಧಿಕಾರಿಗಳು ಮತ್ತು ನಗರಸಭೆ ಸಿಬ್ಬಂದಿಗಳು ಜೊತೆಗೆ ಪ್ರತಿಯೊಂದು ವಾರ್ಡಿನ ಸದಸ್ಯರು, ಹಗಲು ರಾತ್ರಿ ಎನ್ನದೇ ಬೋರ್ ನೀರು ಸರಬರಾಜು ಮಾಡುವಲ್ಲಿ ಶ್ರಮಿಸಿದ್ದಾರೆ.

ಈಗ ಶೇಖರಣಾ ಕೇಂದ್ರದಿಂದ ತುಂಗಭದ್ರಾ ನದಿಗೆ ನೀರು ಹರಿದು ಬಂದಿದ್ದು, ಸಾರ್ವಜನಿಕರು ನೀರನ್ನು ಕಾಯಿಸಿ ಆರಿಸಿ ಕುಡಿಯಬೇಕು ಎಂದು ಹೇಳಿದರು.

ನಗರದ ಜನತೆಗೆ ಬೇಸಿಗೆಯಲ್ಲಿ ನೀರಿನ ಕೊರತೆ ಬರದಂತೆ ತಡೆಯಲು ಮೊನ್ನೆ ನಡೆದ ನಗರಸಭೆ ವಾರ್ಷಿಕ ಬಜೆಟ್ ಮಂಡನೆ ಸಮಯದಲ್ಲಿ ನಗರದ ಯಾವುದೇ ಭಾಗದಲ್ಲಿ ಜಮೀನನ್ನು ಖರೀದಿಸಿ, ಆ ಸ್ಥಳದಲ್ಲಿ ನೀರು ಶೇಖರಣಾ ಘಟಕ ಸ್ಥಾಪಿಸುವುದಕ್ಕೆ ಸದಸ್ಯರು ಸಹಮತ ವ್ಯಕ್ತಪಡಿಸಿದ್ದು ಅದನ್ನು ಜಿಲ್ಲಾಧಿಕಾರಿ ಡಾ.ಎಂ.ವಿ. ವೆಂಕಟೇಶ್ ಹಾಗೂ ಶಾಸಕರಾದ ಬಿ.ಪಿ. ಹರೀಶ್ ರವರ ಗಮನಕ್ಕೆ (3ನೇ ಪುಟಕ್ಕೆ)

## ತೈವಾನ್‌ನಲ್ಲಿ ತೀವ್ರ ಭೂಕಂಪ



**9 ಜನರ ಸಾವು, 24 ಕಡೆ ಭೂಕುಸಿತ**

ತೈಪೈ ಸಿಟಿ, ಏ. 3- ತೈವಾನ್‌ನಲ್ಲಿ ಕಳೆದ 25 ವರ್ಷಗಳಲ್ಲೇ ಅತ್ಯಂತ ತೀವ್ರವಾದ ಭೂಕಂಪ ಸಂಭವಿಸಿದ್ದು, ಒಂಭತ್ತು ಜನ ಸಾವನ್ನಪ್ಪಿದ್ದಾರೆ. ಭೂಕಂಪದ ನಂತರ ಸುನಾಮಿ ಎಚ್ಚರಿಕೆ ನೀಡಲಾಗಿತ್ತಾದರೂ, ನಂತರ ಅದನ್ನು ವಾಪಸ್ ಪಡೆಯಲಾಗಿದೆ.

ಹುವಾಲೀನ್ ಕೌಂಟಿ ಪ್ರದೇಶದಲ್ಲಿ ಭೂಕಂಪ ಕೇಂದ್ರೀಕೃತವಾಗಿತ್ತು. ರಿಕ್ಟರ್ ಮಾಪಕದಲ್ಲಿ ಭೂಕಂಪದ ತೀವ್ರತೆ 7.2ರಷ್ಟಿತ್ತು. ಈ ಪ್ರದೇಶದಲ್ಲಿ ಕೆಲ ಕಟ್ಟಡಗಳು 45 ಡಿಗ್ರಿಯಷ್ಟು ವಾಲಿಕೊಂಡಿವೆ. ತೈವಾನ್‌ನಲ್ಲಿ ಆಗಾಗ ಭೂಕಂಪ ಸಂಭವಿಸುತ್ತಿರುತ್ತದೆ. ತೈವಾನ್ ವಿಶ್ವದಲ್ಲೇ ಮುಂಚೂಣಿ ಮುನ್ನೆಚ್ಚರಿಕೆ ವ್ಯವಸ್ಥೆ ಹೊಂದಿದೆ. ಆದರೆ, ಈ ಬಾರಿ ಲಘು ಭೂಕಂಪದ ನಿರೀಕ್ಷೆ ಇತ್ತು, ಹೀಗಾಗಿ ಮುನ್ನೆಚ್ಚರಿಕೆ ಸಂದೇಶ ನೀಡಿರಲಿಲ್ಲ ಎಂದು ಅಧಿಕಾರಿಗಳು ಹೇಳಿದ್ದಾರೆ. ಭೂಕಂಪದಲ್ಲಿ ಒಂಭತ್ತು (2ನೇ ಪುಟಕ್ಕೆ)

## ಬಾಪೂಜಿ ಬ್ಯಾಂಕ್‌ಗೆ 16.09 ಕೋಟಿ ರೂ. ಲಾಭ

**ಬ್ಯಾಂಕಿನ ಅಧ್ಯಕ್ಷ ಶಾಮನೂರು ಶಿವಶಂಕರಪ್ಪ, ಉಪಾಧ್ಯಕ್ಷ ಎಸ್.ಎಸ್. ಮಲ್ಲಿಕಾರ್ಜುನ್ ಸಂತಸ**




ದಾವಣಗೆರೆ,ಏ.3- ಜಿಲ್ಲೆಯ ಪ್ರತಿಷ್ಠಿತ ಬ್ಯಾಂಕು ಗಳಲ್ಲೊಂದಾದ ನಗರದ ಬಾಪೂಜಿ ಕೋ-ಆಪರೇಟಿವ್ ಬ್ಯಾಂಕ್ 2023-24 ನೇ ಸಾಲಿನ ಹಣಕಾಸು ವರ್ಷದಲ್ಲಿ ಒಟ್ಟಾರೆ 16.09 ಕೋಟಿ ಲಾಭ ಗಳಿಸಿದೆ ಎಂದು ಬ್ಯಾಂಕಿನ ಅಧ್ಯಕ್ಷರು ಹಾಗೂ ಶಾಸಕ ಶಾಮನೂರು ಶಿವಶಂಕರಪ್ಪ, ಉಪಾಧ್ಯಕ್ಷರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್. ಮಲ್ಲಿಕಾರ್ಜುನ್ ಹಾಗೂ ನಿರ್ದೇಶಕ ಮಂಡಲಿಯ ಸದಸ್ಯರುಗಳು ಸಂತೋಷ ವ್ಯಕ್ತಪಡಿಸಿದ್ದಾರೆ.

ಆದಾಯ ತೆರಿಗೆ ಮತ್ತು ಇತರೆ ಅವಕಾಶಗಳನ್ನು ಕಲ್ಪಿಸಿದ ನಂತರ ರೂ. 9.74 ಕೋಟಿ ನಿವ್ವಳ ಲಾಭ ಆಗಿದ್ದು, ಕಳೆದ ಸಾಲಿಗಿಂತ ಈ ವರ್ಷ ರೂ. 1.65 ಕೋಟಿ ಹೆಚ್ಚಿನ ಲಾಭ ಗಳಿಸಿದೆ ಎಂದು ಅವರು ತಿಳಿಸಿದ್ದಾರೆ.

ಬ್ಯಾಂಕು 10785 ಸದಸ್ಯರುಗಳನ್ನು ಹೊಂದಿದ್ದು ಷೇರು ಬಂಡವಾಳ ರೂ. 20.69 ಕೋಟಿ, ಆಪದ್ಧನ ಮತ್ತು ಇತರೆ ನಿಧಿಗಳು ರೂ. 135.20 ಕೋಟಿ ಗಳು, ರೂ. 443.03 ಕೋಟಿ ವಿವಿಧ ಲಾಭದಾಯಕ ಭದ್ರತೆಗಳಲ್ಲಿ ತೊಡಗಣೆ ಮಾಡಿದೆ, ದುಡಿಯುವ ಬಂಡವಾಳ ರೂ. 1012.33 ಕೋಟಿ, ಠೇವಣಿ ರೂ. 845.75 ಕೋಟಿ ಸಂಗ್ರಹವಾಗಿದ್ದು, ರೂ. 495.89 ಕೋಟಿ ಸಾಲ ಸೌಲಭ್ಯವನ್ನು, ಭಾರತೀಯ ರಿಜರ್ವ್ ಬ್ಯಾಂಕಿನ ಆದೇಶದಂತೆ ಆದ್ಯತಾ ರಂಗ ಮತ್ತು ದುರ್ಬಲ ವರ್ಗದವರನ್ನೊಳಗೊಂಡು ಸದಸ್ಯರಿಗೆ ಕಲ್ಪಿಸಲಾಗಿದೆ. ಬ್ಯಾಂಕಿನ ಠೇವಣಿದಾರರ ಸುರಕ್ಷತೆಯ ದೃಷ್ಟಿಯಿಂದ ರೂಪಾಯಿ 5 ಲಕ್ಷದವರೆಗಿನ ಠೇವಣಿಗಳಿಗೆ ಡಿಪಾಜಿಟ್ ಇನ್ಸೂರೆನ್ಸ್ ಸ್ಕಿಮ್ ಚಾಲ್ತಿಯಲ್ಲಿರುತ್ತದೆ.

ಬ್ಯಾಂಕಿನ ಷೇರುದಾರರಿಗೆ 2016-17ನೇ ಸಾಲಿನಿಂದ ಸತತವಾಗಿ ಶೇ. 18 ಡಿವಿಡೆಂಡ್ ನೀಡುತ್ತಾ ಬಂದಿದ್ದು, ಈ ವರ್ಷವೂ ಸಹ 18% ಡಿವಿಡೆಂಡ್ ನೀಡಲು ಉದ್ದೇಶಿಸಲಾಗಿದೆ ಮತ್ತು ಕರ್ನಾಟಕ ರಾಜ್ಯ ಸರ್ಕಾರದ ಯಶಸ್ವಿನಿ ನಗರ ಸಹಕಾರಿ ಆರೋಗ್ಯ ರಕ್ಷಣಾ ಯೋಜನೆಯನ್ನು ಕೂಡ ಬ್ಯಾಂಕು (2ನೇ ಪುಟಕ್ಕೆ)

## ಬಿಸಿಗಾಳಿ ಎದುರಿಸಲು ಸನ್ನದ್ಧರಾಗಲು ರಾಜ್ಯಗಳಿಗೆ ಸೂಚನೆ


ನವದೆಹಲಿ, ಏ. 3 – ಲೋಕಸಭಾ ಚುನಾವಣೆಯ ಸಂದರ್ಭದಲ್ಲಿ ನಡೆಯುವ ಸಮಾವೇಶಗಳ ಹಿನ್ನೆಲೆಯಲ್ಲಿ ಬಿಸಿಗಾಳಿ ಎದುರಿಸಲು ಯೋಜನೆ ರೂಪಿಸುವಂತೆ ರಾಜ್ಯಗಳಿಗೆ ಕೇಂದ್ರ ಆರೋಗ್ಯ ಸಚಿವ ಮನ್‌ಸುಖ್ ಮಾಂಡವೀಯ ತಿಳಿಸಿದ್ದಾರೆ.

ಬಿಸಿ ಗಾಳಿಯ ಕುರಿತು ಜನರಿಗೆ ಮುಂಚೂಣಿಯಾಗಿ ಮಾಹಿತಿ ನೀಡಬೇಕು. ಇದರಿಂದ ಬಿಸಿ ಗಾಳಿಯ ಪ್ರಕೋಪದ ತೀವ್ರತೆ ತಗ್ಗಿಸಲು ಸಾಧ್ಯವಾಗುತ್ತದೆ ಎಂದವರು ಹೇಳಿದ್ದಾರೆ.

ಲೋಕಸಭಾ (2ನೇ ಪುಟಕ್ಕೆ)

## ಶಿವ ಬ್ಯಾಂಕಿಗೆ 6.88 ಕೋಟಿ ಲಾಭ

**ಬ್ಯಾಂಕಿನ ಅಧ್ಯಕ್ಷ ಸಂಗಮೇಶ್ವರಗೌಡ್ರು, ಉಪಾಧ್ಯಕ್ಷ ಚಂದ್ರಶೇಖರ್ ಹರ್ಷ**




ದಾವಣಗೆರೆ, ಏ. 3 - ಜಿಲ್ಲೆಯ ಪ್ರತಿಷ್ಠಿತ ಸಹಕಾರಿ ಬ್ಯಾಂಕುಗಳಲ್ಲೊಂದಾದ ನಗರದ ಶಿವ ಸಹಕಾರಿ ಬ್ಯಾಂಕ್ 2024, ಮಾರ್ಚ್ ಅಂತ್ಯಕ್ಕೆ 6.88 ಕೋಟಿ ಲಾಭ ಗಳಿಸಿದೆ ಎಂದು ಬ್ಯಾಂಕಿನ ಅಧ್ಯಕ್ಷ ಎಂ.ಬಿ ಸಂಗಮೇಶ್ವರಗೌಡರು ಮತ್ತು ಉಪಾಧ್ಯಕ್ಷರೂ ಆಗಿರುವ ವ್ಯವಸ್ಥಾಪನಾ ಸಮಿತಿ ಅಧ್ಯಕ್ಷ ಐಗೂರು ಸಿ. ಚಂದ್ರಶೇಖರ್ ಸಂತಸ ವ್ಯಕ್ತಪಡಿಸಿದರು.

2023-24ನೇ ಸಾಲಿನ ಅಂತ್ಯಕ್ಕೆ ಬ್ಯಾಂಕು 331.21 ಕೋಟಿ ಠೇವಣಿ ಸಂಗ್ರಹಿಸಿದ್ದು, ಸದಸ್ಯರ ಅಭಿವೃದ್ಧಿಗೆ ಪೂರಕವಾಗುವಂತೆ ವಿವಿಧ ಉದ್ದೇಶಗಳಿಗೆ 210.32 ಕೋಟಿ ಸಾಲ ನೀಡಿರುತ್ತದೆ. ಇದರಲ್ಲಿ ಅನುತ್ಪಾದಕ ಸಾಲದ ಪ್ರಮಾಣ ಕನಿಷ್ಟ ಮಟ್ಟದಲ್ಲಿದೆ ಮತ್ತು ಸದರಿ ಸಾಲಿನಲ್ಲಿ 5.97 ಕೋಟಿ ಷೇರು ಬಂಡವಾಳ, 38.41 ಕೋಟಿ ಕಾಯ್ದಿರಿಸಿದ ನಿಧಿಗಳನ್ನು ಹೊಂದಿರುತ್ತದೆ ಹಾಗೂ 380.79 ಕೋಟಿ ದುಡಿಯುವ ಬಂಡವಾಳ ಹೊಂದಿದೆ ಎಂದು ತಿಳಿಸಿದರು.

ಸದರಿ ಸಾಲಿನಲ್ಲಿ ಗಳಿಸಿರುವ 6.88 ಕೋಟಿ ಲಾಭದಲ್ಲಿ ಆದಾಯ ತೆರಿಗೆ 1.55 ಕೋಟಿ ಮತ್ತು ಇತರೆ ಅವಕಾಶಗಳನ್ನು ಕಾಯ್ದಿರಿಸಿದ ನಂತರ 3.27 ಕೋಟಿ ಲಾಭ ಗಳಿಸಿದೆ ಎಂದು ಹರ್ಷ ವ್ಯಕ್ತಪಡಿಸಿದರು. ಬ್ಯಾಂಕಿನ ಪ್ರಧಾನ ಕಛೇರಿ ಮತ್ತು ಎ.ಪಿ.ಎಂ.ಸಿ. ಶಾಖೆಯ ಕಟ್ಟಡದ ಮೇಲೆ ಸೌರ (2ನೇ ಪುಟಕ್ಕೆ)

## ಹೆಚ್. ಆಂಜನೇಯ, ಆಲ್ ಇಂಡಿಯಾ ಕಾಂಗ್ರೆಸ್ ಕಮಿಟಿ ರಾಜ್ಯ ಉಪಾಧ್ಯಕ್ಷ




ದಾವಣಗೆರೆ, ಏ.3- ಕಾಂಗ್ರೆಸ್ ಪಕ್ಷದ ರಾಜ್ಯ ಉಪಾಧ್ಯಕ್ಷರನ್ನಾಗಿ ಮಾಜಿ ಸಚಿವ ಹೆಚ್.ಆಂಜನೇಯ ಅವರನ್ನು ನೇಮಕ ಮಾಡಲಾಗಿದೆ ಎಂದು ಪಕ್ಷದ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಕೆ.ಸಿ. ವೇಣುಗೋಪಾಲ್ ತಿಳಿಸಿದ್ದಾರೆ.

**ಡಿಬಿ ಕಾರ್ಯದರ್ಶಿ :** ಕೆಪಿಸಿಸಿ ಪ್ರಧಾನ ಕಾರ್ಯದರ್ಶಿಯನ್ನಾಗಿ ಜಿಲ್ಲೆಯ ಹಿರಿಯ ಕಾಂಗ್ರೆಸ್ ಮುಖಂಡ ಡಿ. ಬಸವರಾಜ್ ಅವರನ್ನು ನೇಮಕ ಮಾಡಲಾಗಿದೆ ಎಂದು ಅವರು ಹೇಳಿದ್ದಾರೆ.

## ಲಕ್ಷದ್ವೀಪದಲ್ಲಿ ನೌಕಾ ದಳದ ಸಾಗರ ಕವಚ್ ಕಸರತ್ತು


ನವದೆಹಲಿ, ಏ. 3 – ನೌಕಾ ದಳದ ಎಲ್ಲಾ ವಿಭಾಗಗಳ ಭದ್ರತಾ ಸಿಬ್ಬಂದಿ ಒಳಗೊಂಡ 2 ದಿನಗಳ ಸಾಗರ ಕವಚ್ ಕಸರತ್ತನ್ನು ಲಕ್ಷದ್ವೀಪದಲ್ಲಿ ಕೈಗೊಳ್ಳಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಏಪ್ರಿಲ್ 1 ಹಾಗೂ 2ರಂದು ಈ ಕಸರತ್ತು ನಡೆಸಲಾಗಿದೆ. ಕರಾವಳಿಯಲ್ಲಿ ಪೂರ್ವ ಸಿದ್ಧತಾ ಕ್ರಮಗಳನ್ನು ಮತ್ತಷ್ಟು ಬಲಗೊಳಿಸಲು ಈ ಕ್ರಮ ತೆಗೆದುಕೊಳ್ಳಲಾಗಿದೆ.

**ಸವಿನೆನಪು**



ನಿಧನ : 05.04.2021
ಶ್ರೀಮತಿ ಲೀಲಾದೇವಿ
ನೀವು ನಮ್ಮನ್ನಗಲಿ ಇಂದಿಗೆ 3 ವರ್ಷಗಳಾದವು.
ನೀವು ಹಾಕಿಕೊಟ್ಟ ಮಾರ್ಗದರ್ಶನದಲ್ಲೇ ಮುನ್ನಡೆಯುತ್ತಾ,
ಸದಾ ನಿಮ್ಮ ಸ್ಮರಣೆಯಲ್ಲಿರುವ...
ಅರವಿಂದ್ ಮೆಟಲ್ಸ್, ವಿಜಯಲಕ್ಷ್ಮಿ ರಸ್ತೆ, ದಾವಣಗೆರೆ
ಅಭೂಷಣ್ ಜ್ಯೂಯಲರ್ಸ್
ಮೊ : 94482 93012, 94482 93015

**ಹದಿನೈದನೇ ವರ್ಷದ ಪುಣ್ಯಸ್ಮರಣೆ**



ದಿ|| ಮಾಗಾನಹಳ್ಳಿ ಸಚ್ಚಿದಾನಂದಪ್ಪನವರು
ಜನನ : 27.07.1936 ಮರಣ : 04.04.2009
ನೀವು ನಮ್ಮನ್ನಗಲಿ ಇಂದಿಗೆ ಹದಿನೈದು ವರ್ಷಗಳಾದವು.
ಸದಾ ನಿಮ್ಮ ಸ್ಮರಣೆಯಲ್ಲಿರುವ,
ಶ್ರೀಮತಿ ಎಂ.ಎಸ್. ಶಾಂತಾ, ಮಗಳು, ಅಳಿಯ,
ಸೊಸೆಯಂದಿರು, ಮೊಮ್ಮಕ್ಕಳು, ಮರಿಮೊಮ್ಮಕ್ಕಳು :
ತನ್ವಿ, ಅದ್ವಿಕ್, ಗೌರವ, ವಿದ್ಯಾ, ಅರ್ಥವ ಮಾಗಾನಹಳ್ಳಿ, ಕಶ್ವಿ, ವೈಗಾ ಅಂಗಡಿ

## ಶಾಮನೂರಿನ ಬೂದಿಹಾಳ್ ರಾಮಚಂದ್ರಪ್ಪ ನಿಧನ



ಜನನ : 01.04.1946, ಮರಣ : 03.04.2024

ದಾವಣಗೆರೆ ಸಿಟಿ ಶಾಮನೂರು ವಾಸಿ **ಶ್ರೀ ಬೂದಿಹಾಳ್ ರಾಮಚಂದ್ರಪ್ಪ** ಅವರು ದಿನಾಂಕ 03-04-2024ರ ಬುಧವಾರ ಮಧ್ಯಾಹ್ನ 12.50ಕ್ಕೆ ನಿಧನರಾದರೆಂದು ತಿಳಿಸಲು ವಿಷಾದಿಸುತ್ತೇವೆ.

ಮೃತರಿಗೆ 78 ವರ್ಷ ವಯಸ್ಸಾಗಿತ್ತು. ಪತ್ನಿ, ಇಬ್ಬರು ಪುತ್ರರು, ಇಬ್ಬರು ಪುತ್ರಿಯರು, ಅಳಿಯಂದಿರು, ಸೊಸೆಯಂದಿರು ಮತ್ತು ಆರು ಜನ ಮೊಮ್ಮಕ್ಕಳು ಹಾಗೂ ಅಪಾರ ಬಂಧು-ಬಳಗವನ್ನು ಅಗಲಿರುವ ಮೃತರ ಅಂತ್ಯಕ್ರಿಯೆಯನ್ನು ದಿನಾಂಕ 04-04-2024ರ ಗುರುವಾರ ಬೆಳಿಗ್ಗೆ 11 ಗಂಟೆಗೆ ಶಾಮನೂರು ಗ್ರಾಮದ ನಾಗನೂರು ರಸ್ತೆಯಲ್ಲಿರುವ ಮೃತರ ಜಮೀನಿನಲ್ಲಿ ನೆರವೇರಿಸಲಾಗುವುದು.

ದುಃಖತಪ್ತ ಕುಟುಂಬ ವರ್ಗ, ಬೂದಿಹಾಳ್ ವಂಶಸ್ಥರು
ಮೊಬೈಲ್ : 9916277746, 9538444615

# ದಾವಣಗೆರೆ ಕ್ಷೇತ್ರ ಕೇವಲ ಎರಡು ಕುಟುಂಬಗಳ ಸ್ವತ್ತಾಗಿದೆ

**ಹರಪನಹಳ್ಳಿ ತಾಲ್ಲೂಕಿನ ಸಭೆಯಲ್ಲಿ ಕಿಡಿ ಕಾರಿದ ಜಿ.ಬಿ. ವಿನಯ್‌ಕುಮಾರ್**

ಹರಪನಹಳ್ಳಿ, ಏ. 3 - ದಾವಣಗೆರೆ ಲೋಕಸಭಾ ಕ್ಷೇತ್ರ ಕೇವಲ ಎರಡು ಕುಟುಂಬಗಳ ಸ್ವತ್ತಾಗಿದೆ. ಇಲ್ಲಿ ಹಿಂದುಳಿದ ವರ್ಗದ ಜನರ ಧ್ವನಿಗೆ ಬೆಲೆ ಇಲ್ಲದಂತಾಗಿದೆ. ಹಾಗಾಗಿ ಇದರ ವಿರುದ್ಧ ನಾನು ಸ್ವಾಭಿಮಾನದ ಹೋರಾಟಕ್ಕೆ ಮುಂದಾಗಿದ್ದೇನೆ ಎಂದು ಕಾಂಗ್ರೆಸ್ ಟಿಕೆಟ್ ವಂಚಿತ ಜಿ.ಬಿ. ವಿನಯ್‌ಕುಮಾರ್ ಹೇಳಿದರು.



ತಾಲ್ಲೂಕಿನ ಹಲವಾಗಲು, ಅರಸನಾಳು, ತೊಗರಿಕಟ್ಟೆ, ಅರೇಮಜ್ಜಿಗೇರಿ ಸೇರಿದಂತೆ ವಿವಿಧ ಗ್ರಾಮಗಳಿಗೆ ಬುಧವಾರ ಭೇಟಿ ನೀಡಿ, ಲೋಕಸಭಾ ಚುನಾವಣೆಯಲ್ಲಿ ಪಕ್ಷೇತರ ಅಭ್ಯರ್ಥಿಯಾಗಿ ಸ್ಪರ್ಧಿಸುವ ಬಗ್ಗೆ ಮತದಾರರ ಅಭಿಪ್ರಾಯ ಸಂಗ್ರಹಿಸಿ ಅವರು ಮಾತನಾಡಿದರು.

ದಾವಣಗೆರೆ ಜಿಲ್ಲೆಯಲ್ಲಿ ಎರಡು ಪ್ರಬಲ ಕುಟುಂಬಗಳ ಸರ್ವಾಧಿಕಾರದ ಧೋರಣೆಗಳಿಂದ ಇತರೆ ಸಮುದಾಯದ ಜನರಿಗೆ ಆವಕಾಶಗಳು ಸಿಗುತ್ತಿಲ್ಲ. ಆದ್ದರಿಂದ ಸಾಮಾಜಿಕ ಕಳಕಳಿ ಇರುವ ನನ್ನಂತಹ ಯುವ ನಾಯಕರ ಅವಶ್ಯಕತೆ ಈ ಕ್ಷೇತ್ರಕ್ಕೆ ಬೇಕಿದೆ. ಆದರೆ, ರಾಜಕೀಯ ವ್ಯವಸ್ಥೆಯಲ್ಲಿ ನಮ್ಮಂತ ಶೋಷಿತ ಹಿಂದುಳಿದ ಸಮುದಾಯಗಳ ನಾಯಕರು ಆವಕಾಶದಿಂದ ವಂಚಿತರಾಗುತ್ತಿದ್ದೇವೆ ಎಂದು ಬೇಸರ ವ್ಯಕ್ತಪಡಿಸಿದರು.

ನಾವು ಸ್ವಾಭಿಮಾನಿಗಳು ಇನ್ನೊಬ್ಬರಿಗೆ ಹೆದರಿ ಜೀವನ ಮಾಡುವುದು ಬದುಕಿದ್ದೂ ಸತ್ತಂತೆ. ಆದ್ದರಿಂದ ನಮ್ಮ ಸ್ವಾಭಿಮಾನಕ್ಕೆ ಎಂದೂ ಕೂಡ ಧಕ್ಕೆ ಬಾರದ ರೀತಿಯಲ್ಲಿ ನಡೆದುಕೊಳ್ಳಬೇಕು. ಹಾಗಾಗಿ ನಾನು ಸ್ವಾಭಿಮಾನದ ಹೋರಾಟ ಮಾಡಲು ಮುಂದಾಗಿದ್ದೇನೆ, ನನಗೆ ಕೈ ಜೋಡಿಸಿ ಎಂದು ಮತದಾರರಲ್ಲಿ ಮನವಿ ಮಾಡಿಕೊಂಡರು.

ಈ ಸಂದರ್ಭದಲ್ಲಿ ಹಲವಾಗಲು ನಾಗರಾಜ, ಬೀರಪ್ಪ, ಸುನೀಲ್, ಮಜ್ಜಿಗೇರಿ ಗುಡ್ಡಪ್ಪ, ಕರಿಯಪ್ಪ, ಹಾಲೇಶ, ಬಸವರಾಜ, ಹನುಮಂತಪ್ಪ, ಕರಿಯಲ್ಲಪ್ಪ, ರಾಮಪ್ಪ, ದಿಳ್ಳೆಪ್ಪ, ಶರತ್‌ಕುಮಾರ್, ರಿಯಾಜ್ ಅಹ್ಮದ್, ಚನ್ನವೀರ, ನೀಲಪ್ಪ ರಂಗಸ್ವಾಮಿ ಸೇರಿದಂತೆ ಇತರರು ಇದ್ದರು.

# ಹಾಲಿವಾಣ ಜಾತ್ರೆ : ಟ್ರಾಫಿಕ್ ಜಾಮ್



**ಬಾಡೂಟಕ್ಕೆ ಬಂದಿದ್ದ ಬಂಧು-ಮಿತ್ರರಿಂದ ತುಂಬಿದ ಗ್ರಾಮ**

ಮಲೇಬೆನ್ನೂರು, ಏ. 3 - ಹಾಲಿವಾಣ ಗ್ರಾಮದಲ್ಲಿ ಗ್ರಾಮದೇವತೆ ಶ್ರೀ ಏಳೂರು ಕರಿಯಮ್ಮದೇವಿಯ ಜಾತ್ರಾ ಮಹೋತ್ಸವವು ಮಂಗಳವಾರ ಮತ್ತು ಬುಧವಾರ ಸಂಭ್ರಮದಿಂದ ಜರುಗಿತು.

ಮಂಗಳವಾರ ತಡರಾತ್ರಿ ಆರಂಭವಾದ ಮೆರವಣಿಗೆಯು ಬುಧವಾರ ಬೆಳಗಿನ ಜಾವ ದೇವಸ್ಥಾನಕ್ಕೆ ವೈಭವದೊಂದಿಗೆ ಬಂದು ನೆಲೆಗೊಂಡಿತು. ನಂತರ ಓಕುಳಿ ತುಂಬಿದ ಹಿಟ್ಟಿನ ಕೋಣಗಳ ಬಲಿದಾನ ನೆರವೇರಿಸಿ, ಬೆಳಿಗ್ಗೆ 6 ಗಂಟೆಗೆ ಗ್ರಾಮದಲ್ಲಿ ಚರಗ ಹಾಕಲಾಯಿತು. ಬೆಳಿಗ್ಗೆಯಿಂದ ಸಂಜೆಯವರೆಗೂ ಭಕ್ತರು ಭೇವಿನ ಉಡುಗೆ, ದೀಡು ನಮಸ್ಕಾರ, ಬಾಯಿ ಬೀಗ, ಜವಳ ಕಾಯಿತೂಕ, ಉರುಳು ಸೇವೆ ಸೇರಿದಂತೆ ಇತ್ಯಾದಿ ಹರಕೆ ಸೇವೆಗಳನ್ನು ದೇವಿಗೆ ಅರ್ಪಿಸಿದರು. ಬುಧವಾರ ಕೂಡಾ ಮಹಿಳೆಯರು ಅಮ್ಮನಿಗೆ ಉಡಿ ತುಂಬಿ ಭಕ್ತಿ ಸಮರ್ಪಿಸಿದರು.

**ಬಾಡೂಟ** : ಬುಧವಾರ ಮಧ್ಯಾಹ್ನದಿಂದಲೇ ಗ್ರಾಮದ ಹಾಗೂ ಗ್ರಾಮದ ಸುತ್ತ-ಮುತ್ತ, ತೋಟ-ಗದ್ದೆಗಳಲ್ಲಿ ಹೊರಗಿನ ಭಕ್ತರು ಹಾಕಿದ್ದ ಬೀಡಾಗಳಲ್ಲಿ ಬಾಡೂಟದ ಸಂಭ್ರಮ ಜೋರಾಗಿತ್ತು.

ಸಂಜೆ 7ರಿಂದ ರಾತ್ರಿ 11 ರವರೆಗೂ ಹಾಲಿವಾಣ ಗ್ರಾಮದ ಬಾಡೂಟಕ್ಕೆ ಬಂದಿದ್ದ ಬಂಧು-ಮಿತ್ರರಿಂದ ತುಂಬಿ ತುಳುಕಿತು. ಸುಮಾರು 3 ತಾಸು ಟ್ರಾಫಿಕ್ ಜಾಮ್ ಅಗಿ ಗ್ರಾಮದ ಮುಖ್ಯ ರಸ್ತೆಯಲ್ಲಿ ಜನ ವಾಹನಗಳಲ್ಲಿ ಕಾಲ ಕಳೆಯುವಂತಾಯಿತು. ಟ್ರಾಫಿಕ್ ಜಾಮ್ ತೆರವುಗೊಳಿಸಲು ಪೋಲೀಸರು ಹರಸಾಹಸ ಪಟ್ಟರು. ಗುರುವಾರ ಕೂಡಾ ಬಾಡೂಟ ನಡೆಯಲಿದೆ.

**ಸಿಡಿ ಉತ್ಸವ :** ಗುರುವಾರ ಸಾಯಂಕಾಲ 4 ಗಂಟೆಗೆ ಸಿಡಿ ಉತ್ಸವ ನಡೆಯಲಿದ್ದು. ರಾತ್ರಿ 8 ಗಂಟೆಗೆ ಭದ್ರಾವತಿಯ ಚಂದನ ಮ್ಯೂಜಿಕಲ್ ನೈಟ್ಸ್ ಆರ್ಕೆಸ್ಟ್ರಾ ಇವರಿಂದ ರಸಮಂಜರಿ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಶುಕ್ರವಾರ ಬೆಳಗ್ಗೆ ದೇವಿಗೆ ವಿಶೇಷ ಪೂಜೆ, ಸಾಯಂಕಾಲ 4 ರಿಂದ ಚಿಲ್ಲದ ಬಂಡಿ ಉತ್ಸವ ಓಕುಳಿ ಮತ್ತು ಸಂಜೆ 6 ಗಂಟೆಗೆ ದೇವಿಗೆ ಮಹಾಮಂಗಳಾರತಿ ನೆರವೇರಿಸಿ ಕಂಕಣ ವಿಸರ್ಜನೆಯೊಂದಿಗೆ ಜಾತ್ರಾ ಮಹೋತ್ಸವಕ್ಕೆ ತೆರೆ ಎಳೆಯಲಾಗುವುದು ಎಂದು ಜಾತ್ರಾ ಸಮಿತಿ ಅಧ್ಯಕ್ಷ ಎಸ್.ಜಿ. ಪರಮೇಶ್ವರಪ್ಪ ತಿಳಿಸಿದ್ದಾರೆ.

# ಮಹಿಳೆಯರ ಕೌಶಲ್ಯಗಳಿಗೆ ಪ್ರಾಧಾನ್ಯತೆ ನೀಡಿ



ದಾವಣಗೆರೆ, ಏ.3- ಇಲ್ಲಿನ ಜೈನ್ ತಾಂತ್ರಿಕ ಮಹಾವಿದ್ಯಾಲಯದಲ್ಲಿ ಇತ್ತೀಚೆಗೆ ಅಂತರರಾಷ್ಟ್ರೀಯ ಮಹಿಳಾ ದಿನ ಆಚರಿಸಿದರು. ಮಹಿಳೆಯರ ಕೌಶಲ್ಯಗಳಿಗೆ ಬೇಕಾಗುವ ತಂತ್ರಜ್ಞಾನ ಮತ್ತು ಇತರೆ ಸಲಕರಣೆಗಳನ್ನು ಒದಗಿಸಿದಾಗ ದೇಶದಲ್ಲಿನ ಶೇ. 50ರಷ್ಟು ಮಹಿಳೆಯರು ಸಾಮಾಜಿಕ ಮತ್ತು ಆರ್ಥಿಕವಾಗಿ ಸದೃಢರಾಗುತ್ತಾರೆ ಎಂದು ಪದ್ಮಶ್ರೀ ಪುರಸ್ಕತ ನಿಲೀಮ ಮಿಶ್ರ ತಿಳಿಸಿದರು. ಕಾಲೇಜಿನ ಪ್ರಾಚಾರ್ಯ ಡಾ. ಡಿ.ಬಿ. ಗಣೇಶ್, ಮಧು, ಜೆ. ನಟರಾಜ್, ಸಲಹೆಗಾರ ಡಾ. ಮಂಜಪ್ಪ ಸಾರಥಿ ಮತ್ತು ಇತರರಿದ್ದರು.

# ಸ್ಪರ್ಧೆಯಿಂದ ಹಿಂದೆ ಸರಿದ ಸುಮಲತಾ

**(1ನೇ ಪುಟದಿಂದ)** ಸಂಸತ್‌ಗೆ ಕಳುಹಿಸಿಕೊಟ್ಟರು, ಅವರಿಗೆ ನಾನು ಋಣಿಯಾಗಿದ್ದೇನೆ, ನಾನು ಎಂದಿಗೂ ಈ ಜಿಲ್ಲೆಯಲ್ಲೇ ರಾಜಕಾರಣ ಮಾಡುವವಳು. ನಾನು ಪಕ್ಷೇತರರಾಗಿದ್ದರೂ ಪ್ರಧಾನಿ ನರೇಂದ್ರ ಮೋದಿ ಅವರು ನನ್ನ ಕ್ಷೇತ್ರಕ್ಕೆ 4,000 ಕೋಟಿ ರೂ. ಅನುದಾನ ನೀಡಿದ್ದಾರೆ, ಅವರಿಗೆ ನಾನು ಚಿರಋಣಿ.

ಕಳೆದ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿಯನ್ನು ಬೆಂಬಲಿಸಿದ್ದೆ, ಮುಂದೆ ಆ ಪಕ್ಷದ ಜೊತೆ ಇರುತ್ತೇನೆ ಎನ್ನುವ ಮೂಲಕ ಬಿಜೆಪಿ ಸೇರುವ ಮುನ್ಸೂಚನೆ ನೀಡಿದರು.

ಇದು ನನ್ನ ಕಾರ್ಯಕರ್ತರ ಹಾಗೂ ಮಂಡ್ಯ ಜಿಲ್ಲೆಯ ಜನತೆಯ ಹಿತಕ್ಕಾಗಿ ತೆಗೆದುಕೊಂಡ ನಿರ್ಧಾರವಾಗಿದೆ. ಮಂಡ್ಯವೇ ನನ್ನ ಕರ್ಮ ಭೂಮಿ. ನನ್ನ ರಾಜಕಾರಣ ಮಂಡ್ಯ ಬಿಟ್ಟು ಒಂದಿಂಚೂ ಸಾಗದು ಎಂದರು.

ಬದಲಾದ ಸನ್ನಿವೇಶ ಹಾಗೂ ಪರಿಸ್ಥಿತಿಯಲ್ಲಿ ನಾನು ಈ ತೀರ್ಮಾನವನ್ನು ತೆಗೆದುಕೊಂಡಿದ್ದೇನೆ. ಪಕ್ಷೇತರವಾಗಿಯೂ ನಾನು ಸ್ಪರ್ಧೆ ಮಾಡಬಹುದಿತ್ತು, ಆದರೆ, ಇದರಿಂದ ಯಾರಿಗೆ ಲಾಭ ಆಗುತ್ತದೆ ಎಂಬುದು ಮುಖ್ಯ ಪ್ರಶ್ನೆ ಆಗುತ್ತದೆ ಎಂದರು.

ನಾನು ಎಲ್ಲರಂತೆ ಟಿಪಿಕಲ್ ರಾಜಕಾರಣಿ ಅಲ್ಲ. ನನಗೆ ಬಿಜೆಪಿ ಹೈಕಮಾಂಡ್ ಬೇರೆ ಕ್ಷೇತ್ರದಲ್ಲಿ ಸ್ಪರ್ಧೆ ಮಾಡಲು ಸಾಕಷ್ಟು ಅವಕಾಶ ನೀಡಿತ್ತು, ಆದರೆ, ನನಗೆ ಮಂಡ್ಯ ಬಿಟ್ಟು ರಾಜಕಾರಣ ಮಾಡಲು ಆಗುವುದಿಲ್ಲ. ನಿಮ್ಮನ್ನು ಹಾಗೂ ಅಂಬರೀಶ್ ಅವರ ಕನಸನ್ನು ಬಿಟ್ಟು ಹೋದರೆ ಯಾರೂ ಮೆಚ್ಚಲಾರರು. ನಾನು ಮಂಡ್ಯದಲ್ಲಿಯೇ ಇರುತ್ತೇನೆ ಎಂದು ಸುಮಲತಾ ಅಂಬರೀಶ್ ಹೇಳಿದರು.

# ರಾಜನಹಳ್ಳಿಯಲ್ಲಿ ಪುಣ್ಯಾನಂದಪುರಿ ಶ್ರೀಗಳ ಪುಣ್ಯಾರಾಧನೆ, ವಿಶೇಷ ಪೂಜಾ ಕಾರ್ಯಕ್ರಮ



ರಾಜನಹಳ್ಳಿ, ಏ. 3- ರಾಜನಹಳ್ಳಿ ವಾಲ್ಮೀಕಿ ಗುರುಪೀಠದ ಪ್ರಥಮ ಪೀಠಾಧಿಪತಿಗಳಾದ ಶ್ರೀ ಪುಣ್ಯಾನಂದ ಪುರಿ ಮಹಾಸ್ವಾಮೀಜಿಯವರ 17ನೇ ವರ್ಷದ ಪುಣ್ಯಾರಾಧನೆ ಪ್ರಯುಕ್ತ ಬುಧವಾರ ಶ್ರೀ ಮಠದಲ್ಲಿರುವ ಶ್ರೀಗಳ ಗದ್ದುಗೆಗೆ ವಿಶೇಷ ಪೂಜಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು.

ಶ್ರೀ ವಾಲ್ಮೀಕಿ ಪ್ರಸನ್ನಾನಂದ ಸ್ವಾಮೀಜಿ ಅವರು ಲಿಂಗೈಕ್ಯ ಶ್ರೀಗಳ ಗದ್ದುಗೆಗೆ ಪುಷ್ಪಾರ್ಚನೆ ಮಾಡಿ ನಮನ ಸಲ್ಲಿಸಿದರು.

ಈ ಸಂದರ್ಭದಲ್ಲಿ ಲಿಂ ಪುಣ್ಯಾನಂದಪುರಿ ಸ್ವಾಮೀಜಿಯವರ ಮಾತೃಶ್ರೀ ಶ್ರೀಮತಿ ಮಹದೇವಮ್ಮ ಮತ್ತು ಕುಟುಂಬಸ್ಥರನ್ನು ಶ್ರೀಗಳು ಗೌರವಿಸಿದರು. ಶಾಸಕ ಬಿ.ಪಿ ಹರೀಶ್, ಮಠದ ಧರ್ಮದರ್ಶಿ ಕೆ.ಬಿ. ಮಂಜುನಾಥ್, ಡಿಸಿಸಿ ಬ್ಯಾಂಕ್ ಮಾಜಿ ಉಪಾಧ್ಯಕ್ಷ ಜಿಗಳಿ ಆನಂದಪ್ಪ, ಜಿಗಳಿ ಗ್ರಾ.ಪಂ. ಮಾಜಿ ಅಧ್ಯಕ್ಷ ಬಿ. ಎಂ. ದೇವೇಂದ್ರಪ್ಪ, ಬೆಣ್ಣೇರ ನಂದ್ಯಪ್ಪ, ಹರಿಹರ ನಗರಸಭೆ ಸದಸ್ಯ ದಿನೇಶ್ ಬಾಬು, ಮಕರಿ ಪಾಲಾಕ್ಷಪ್ಪ, ಪಾರ್ವತಿ ಬೋರಯ್ಯ, ಗೌರಮ್ಮ ಮಂಜುನಾಥ್, ಶಿಕ್ಷಕ ವಾಸನ ಮಹಾಂತೇಶ್, ಮಠದ ವ್ಯವಸ್ಥಾಪಕ ರಾಜನಹಳ್ಳಿ ಭೀಮಣ್ಣ, ಪತ್ರಕರ್ತ ಜಿಗಳಿ ಪ್ರಕಾಶ್, ಯುವ ಬರಹಗಾರ ನಟರಾಜ್ ಸೇರಿದಂತೆ ಇತರರು ಭಾಗವಹಿಸಿದ್ದರು.

# ಮತದಾನ ಜಾಗೃತಿ ನಿಮಿತ್ತ ಪ್ರತಿಜ್ಞಾವಿಧಿ, ಸಹಿ ಸಂಗ್ರಹ





**ಹರಿಹರ**

ಹರಿಹರ, ಏ. 3 - ನಗರದ ತಾಲ್ಲೂಕು ಪಂಚಾಯ್ತಿ ಕಚೇರಿ ಆವರಣದಲ್ಲಿಂದು ಹರಿಹರ ನಗರ ಭಾಗದ ಕಡಿಮೆ ಮತದಾನವಾಗಿರುವ ಬೂತ್ ಮಟ್ಟದ ಅಧಿಕಾರಿಗಳು, ನಗರಸಭೆ ಅಧಿಕಾರಿಗಳು ಮತ್ತು ತಾಲ್ಲೂಕು ಪಂಚಾ ಯ್ತಿಯ ಎಲ್ಲಾ ಅಧಿಕಾರಿ ನೌಕರರೊಂದಿಗೆ ಮತದಾನ ಜಾಗೃತಿ ಕಾರ್ಯಕ್ರಮದ ನಿಮಿತ್ತ ಪ್ರತಿಜ್ಞಾ ವಿಧಿ ಬೋಧನೆ ಮತ್ತು ಸಹಿ ಸಂಗ್ರಹ ಕಾರ್ಯಕ್ರಮ ನಡೆಸಲಾಯಿತು. ಈ ಸಂದರ್ಭದಲ್ಲಿ ಪೌರಾಯುಕ್ತ ಐಗೂರು ಬಸವರಾಜ್, ತಾ.ಪಂ. ಇಓ ರಾಮಕೃಷ್ಣಪ್ಪ, ಸಿಡಿಪಿಓ ಪೂರ್ಣಿಮಾ, ನಗರ ಸಭೆ ಮ್ಯಾನೇಜರ್ ಶಿವಕುಮಾರ್, ತಾ.ಪಂ. ಅಧಿಕಾರಿ ಪೂಜಾ, ಕೊಟ್ರಮ್ಮ, ಮಮತಾ, ವೀಣಾ, ಲತಾ, ಲಕ್ಷ್ಮಣ, ಬಿಎಲ್‌ಓ ಸಿಬ್ಬಂದಿಗಳು, ಅಂಗನವಾಡಿ ಕಾರ್ಯಕರ್ತರು ಇತರರು ಹಾಜರಿದ್ದರು.

# ಬಾಪೂಜಿ ಬ್ಯಾಂಕ್‌ಗೆ 16.09 ಕೋಟಿ ರೂ. ಲಾಭ

**(1ನೇ ಪುಟದಿಂದ)** ಅಳವಡಿಸಿಕೊಂಡಿದೆ. ಬ್ಯಾಂಕಿನ ಆಡಳಿತ ಮಂಡಲಿಯ ಸತತ ಪ್ರಯತ್ನದಿಂದಾಗಿ ಬ್ಯಾಂಕಿನ ಕಾರ್ಯಕ್ಷೇತ್ರ ವ್ಯಾಪ್ತಿಯನ್ನು ಕರ್ನಾಟಕ ರಾಜ್ಯದಾದ್ಯಂತ ವಿಸ್ತರಿಸಲು ಸಹಕಾರ ಇಲಾಖೆ ಮತ್ತು ಭಾರತೀಯ ರಿಸರ್ವ್ ಬ್ಯಾಂಕ್ ಅನುಮತಿ ನೀಡಿರುತ್ತದೆ.

ಬ್ಯಾಂಕಿನ ಈ ಸಾಧನೆಗೆ ಎಲ್ಲಾ ಸದಸ್ಯರು, ಗ್ರಾಹಕರು, ಆಡಳಿತ ಮಂಡಲಿ, ರಿಜರ್ವ್ ಬ್ಯಾಂಕ್ ಮತ್ತು ಸಹಕಾರಿ ಸಂಘಗಳ ಇಲಾಖೆ ಮತ್ತು ರಾಜ್ಯ ಸಹಕಾರಿ ಮಹಾಮಂಡಳ ಹಾಗೂ ಬ್ಯಾಂಕಿನ ಸಿಬ್ಬಂದಿ ವರ್ಗದವರ ಸಹಕಾರವೇ ಮುಖ್ಯ ಕಾರಣವಾಗಿದೆ ಎಂದು ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ನಿರ್ದೇಶಕ ಮಂಡಲಿ ಸದಸ್ಯರುಗಳು ಹರ್ಷ ವ್ಯಕ್ತಪಡಿಸಿದ್ದಾರೆಂದು ಬ್ಯಾಂಕಿನ ಪ್ರಧಾನ ವ್ಯವಸ್ಥಾಪಕ ಎಂ. ಬಸವರಾಜ್ ವಿವರಿಸಿದ್ದಾರೆ.

# ಅತ್ಯಾಚಾರ ಸಂತ್ರಸ್ತೆ ವಿವಸ್ತ್ರಗೊಳ್ಳಲು ತಿಳಿಸಿದ ಮ್ಯಾಜಿಸ್ಟ್ರೇಟ್ ವಿರುದ್ಧ ಪ್ರಕರಣ

ಜೈಪುರ, ಏ. 3 – ಅತ್ಯಾಚಾರ ಸಂತ್ರಸ್ತೆಯೊಬ್ಬರು ತಮಗಾದ ಗಾಯ ತೋರಿಸಲು ವಿವಸ್ತ್ರಗೊಳ್ಳುವಂತೆ ತಿಳಿಸಿದ ಆರೋಪದ ಮೇಲೆ ರಾಜಸ್ಥಾನದ ಕರೌಲಿ ಜಿಲ್ಲೆಯ ಮ್ಯಾಜಿಸ್ಟ್ರೇಟ್ ವಿರುದ್ಧ ಪೊಲೀಸರು ಪ್ರಕರಣ ದಾಖಲಿಸಿದ್ದಾರೆ.

ಹಿಂದೌನ್ ನ್ಯಾಯಾಲಯದ ಮ್ಯಾಜಿಸ್ಟ್ರೇಟ್ ವಿರುದ್ಧ ದಲಿತ ಮಹಿಳೆ ಮಾರ್ಚ್ 30ರಂದು ದೂರು ದಾಖಲಿಸಿದ್ದಾರೆ ಎಂದು ಎಸ್.ಟಿ - ಎಸ್.ಸಿ. ದಳದ ಪೊಲೀಸ್ ಅಧಿಕಾರಿಗಳು ತಿಳಿಸಿದ್ದಾರೆ.

ವಿವಸ್ತ್ರಗೊಳ್ಳಲು ನಿರಾಕರಿಸಿದ ಮಹಿಳೆ, ನಂತರ ಮ್ಯಾಜಿಸ್ಟ್ರೇಟ್ ವಿರುದ್ಧ ದೂರು ನೀಡಿದ್ದಾರೆ. ಕೊತ್ವಾಲಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಲಾಗಿದೆ. ಮಾರ್ಚ್ 19ರಂದು ಅತ್ಯಾಚಾರ ನಡೆದಿದೆ ಎಂದು ಮಹಿಳೆ ಆರೋಪಿಸಿ, ಮಾರ್ಚ್ 27ರಂದು ಎಫ್.ಐ.ಆರ್. ದಾಖಲಿಸಿದ್ದರು.

# ಘರ್ ಘರ್ ಗ್ಯಾರಂಟಿ ಅಭಿಯಾನ

ನವದೆಹಲಿ, ಏ. 3 – ಲೋಕಸಭಾ ಚುನಾವಣೆಗಾಗಿ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು 'ಘರ್ ಘರ್ ಗ್ಯಾರಂಟಿ' ಅಭಿಯಾನಕ್ಕೆ ಚಾಲನೆ ನೀಡಿದ್ದಾರೆ. ದೇಶದ ಎಂಟು ಕೋಟಿ ಮನೆಗಳಿಗೆ ಭೇಟಿ ನೀಡಿ ಕಾಂಗ್ರೆಸ್ ಪಕ್ಷದ ಗ್ಯಾರಂಟಿಗಳ ಬಗ್ಗೆ ತಿಳಿಸುವ ಗುರಿ ಹೊಂದಲಾಗಿದೆ.

ದೆಹಲಿಯ ಉಸ್ಮಾನ್‌ಪುರದಲ್ಲಿ ಖರ್ಗೆ ಈ ಅಭಿಯಾನಕ್ಕೆ ಚಾಲನೆ ನೀಡಿದ್ದಾರೆ. ಈ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷದ ಐದು ಗ್ಯಾರಂಟಿ ಯೋಜನೆಗಳ ಬಗ್ಗೆ ಅವರು ಕರಪತ್ರ ಹಂಚಿದ್ದಾರೆ.

ನಮ್ಮ ಮೈತ್ರಿ ಸರ್ಕಾರ ಅಧಿಕಾರಕ್ಕೆ ಬಂದಾಗ ತೆಗೆದುಕೊಳ್ಳಲಿರುವ ಗ್ಯಾರಂಟಿಗಳ ಬಗ್ಗೆ ಕಾಂಗ್ರೆಸ್ ನಾಯಕರು ಹಾಗೂ ಕಾರ್ಯಕರ್ತರು ಮನೆ ಮನೆಗೆ ತೆರಳಿ ತಿಳಿಸಲಿದ್ದಾರೆ ಎಂದು ಖರ್ಗೆ ಹೇಳಿದ್ದಾರೆ.

# 6ಕ್ಕೆ ಬಿಜೆಪಿ-ಜೆಡಿಎಸ್ ಸಮ್ಮಿಲನ ಸಮಾವೇಶ

**(1ನೇ ಪುಟದಿಂದ)** ಶಾಸಕ ಬಿ.ಪಿ. ಹರೀಶ್ ಮಾತನಾಡಿ, ಭದ್ರಾ ನಾಲೆ ವ್ಯಾಪ್ತಿಯಲ್ಲಿ ತೋಟಗಾರಿಕೆ ಬೆಳೆಗಳನ್ನು ಉಳಿಸಿಕೊಳ್ಳಲೂ ನೀರು ಸಿಗುತ್ತಿಲ್ಲ. ದಾವಣಗೆರೆಯ ಕುಡಿಯುವ ನೀರಿನ ಅಗತ್ಯದ ಬಗ್ಗೆ ನಿರ್ಲಕ್ಷ್ಯ ತೋರಲಾಗಿದೆ. ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಜಿಲ್ಲಾಡಳಿತ ಈ ಬಗ್ಗೆ ಕಾಳಜಿ ವಹಿಸುತ್ತಿಲ್ಲ ಎಂದು ಟೀಕಿಸಿದರು.

ಮಾಜಿ ಸಚಿವ ಎಸ್.ಎ. ರವೀಂದ್ರನಾಥ್ ಮಾತನಾಡಿ, ಬಿಜೆಪಿ ಹಾಗೂ ಜೆಡಿಎಸ್‌ಗಳು ಈ ಹಿಂದೆಯೂ ಮೈತ್ರಿಕೂಟದಲ್ಲಿ ಉತ್ತಮವಾಗಿ ಕೆಲಸ ಮಾಡಿವೆ. ಸ್ಥಳೀಯ ಹಂತದಲ್ಲೂ ಮೈತ್ರಿ ಮಾಡಿಕೊಂಡು ಕಾರ್ಯನಿರ್ವಹಿಸಿವೆ. ಈ ಬಾರಿ ಲೋಕಸಭಾ ಚುನಾವಣೆಯಲ್ಲೂ ಹೊಂದಾಣಿಕೆಯಿಂದ ಉತ್ತಮ ಕೆಲಸ ಮಾಡಿ ತೋರಿಸಲಿವೆ ಎಂದರು.

ಪತ್ರಿಕಾಗೋಷ್ಠಿಯಲ್ಲಿ ಬಿಜೆಪಿ ಜಿಲ್ಲಾಧ್ಯಕ್ಷ ಎನ್. ರಾಜಶೇಖರ್, ಮುಖಂಡರಾದ ವೀರೇಶ್ ಹನಗವಾಡಿ, ಧನಂಜಯ ಕಡ್ಲೇಬಾಳು, ಜೆಡಿಎಸ್ ಜಿಲ್ಲಾಧ್ಯಕ್ಷ ಚಿದಾನಂದಪ್ಪ, ಜೆಡಿಎಸ್ ಮುಖಂಡರಾದ ಅಮಾನುಲ್ಲಾ ಖಾನ್, ಕಡತಿ ಅಂಜನಪ್ಪ, ಪರಮೇಶ್ವರ ಗೌಡ್ರು, ಗಣೇಶ ದಾಸಕರಿಯಪ್ಪ ಮತ್ತಿತರರು ಉಪಸ್ಥಿತರಿದ್ದರು.

**ಬಿಜೆಪಿಗೆ ಅಲ್ಪಸಂಖ್ಯಾತರ ಮತ**

ಬಿಜೆಪಿಗೆ ಕೋಮುವಾದದ ಬಣ್ಣ ಹಚ್ಚಲಾಗಿದೆ. ಬಿಜೆಪಿ ಅಧಿಕಾರಕ್ಕೆ ಬಂದರೆ ಅಲ್ಪಸಂಖ್ಯಾತರಿಗೆ ಅನುದಾನ ನೀಡುವುದಿಲ್ಲ ಹಾಗೂ ಕೋಮು ಗಲಭೆ ಆಗುತ್ತದೆ ಎಂಬ ಭಾವನೆ ತುಂಬಿದ್ದಾರೆ. ಆದರೆ, ಬಿಜೆಪಿ ಅಧಿಕಾರದಲ್ಲಿದ್ದಾಗ ಕೋಮು ಗಲಭೆಗಳು ಆಗಿಲ್ಲ ಎಂದು ಮಾಜಿ ಶಾಸಕ ಹೆಚ್.ಎಸ್. ಶಿವಶಂಕರ್ ಹೇಳಿದರು. ಮತಕ್ಕಾಗಿ ಕಾಂಗ್ರೆಸ್ ಪಕ್ಷದವರು ಈ ತಂತ್ರವನ್ನು ಬಳಸುತ್ತಿದ್ದಾರೆ. ಜೆಡಿಎಸ್ ಜೊತೆಯಲ್ಲಿ ಪ್ರಾಮಾಣಿಕವಾಗಿ ಕಾರ್ಯ ಕರ್ತರಾಗಿರುವವರು, ಪಕ್ಷದ ಆದೇಶದಂತೆ ಬಿಜೆಪಿಗೆ ಮತ ಹಾಕುತ್ತಾರೆ ಎಂದವರು ತಿಳಿಸಿದರು.

## ತೈವಾನ್‌ನಲ್ಲಿ ತೀವ್ರ ಭೂಕಂಪ : ಒಂಭತ್ತು ಜನರ ಸಾವು

**(1ನೇ ಪುಟದಿಂದ)** ಜನ ಸಾವನ್ನಪ್ಪಿದ್ದರೆ, 934 ಜನ ಗಾಯಗೊಂಡಿದ್ದಾರೆ. 50 ಜನರು ಸಂಪರ್ಕಕ್ಕೆ ಸಿಲುಕುತ್ತಿಲ್ಲ. 70 ಜನ ಕಲ್ಲಿನ ಗಣಿಯಲ್ಲಿ ಸಿಲುಕಿದ್ದಾರೆ. ಆರು ಜನರು ಕಲ್ಲಿದ್ದಲು ಗಣಿಯಲ್ಲಿ ಸಿಲುಕಿದ್ದಾರೆ. ಭೂಕಂಪ ಹಾಗೂ ನಂತರದ ಪಶ್ಚಾತ್ ಕಂಪನಗಳಿಂದಾಗಿ 24 ಕಡೆ ಭೂಕುಸಿತವಾಗಿದೆ. ತೈವಾನ್ ಭೂಕಂಪದ ಪರಿಸ್ಥಿತಿ ಎದುರಿಸಲು ಅತಿ ಹೆಚ್ಚು ಸನ್ನದ್ಧವಾಗಿದೆ. ಇದರಿಂದಾಗಿ ಜನರು ತ್ವರಿತವಾಗಿ ಭೂಕಂಪದ ಭೀತಿಯಿಂದ ಹೊರ ಬಂದಿದ್ದಾರೆ. ಮಧ್ಯಾಹ್ನದ ನಂತರ ಉತ್ತರ ತೈಪೈನಲ್ಲಿ ಮೆಟ್ರೋ ನಿಲ್ದಾಣ ಎಂದಿನಂತೆ ಜನನಿಬಿಡವಾಗಿತ್ತು.

# ಶಿವ ಸಹಕಾರಿ ಬ್ಯಾಂಕಿಗೆ 6.88 ಕೋಟಿ ಲಾಭ

**(1ನೇ ಪುಟದಿಂದ)** ವಿದ್ಯುತ್ ಅಳವಡಿಸಿ, ವಿದ್ಯುತ್ ವೆಚ್ಚವನ್ನು ಕಡಿಮೆಗೊಳಿಸುವುದರ ಮೂಲಕ ಪರಿಸರ ಸ್ನೇಹಿಯಾಗಿದೆ. 2024ರ ಆಗಸ್ಟ್ ವೇಳೆಗೆ ಬ್ಯಾಂಕ್ ಸ್ಥಾಪನೆಯಾಗಿ 50 ವರ್ಷ ತುಂಬಲಿದ್ದು, ಬ್ಯಾಂಕು ಸುವರ್ಣ ಮಹೋತ್ಸವ ಆಚರಿಸಿಕೊಳ್ಳಲಿದೆ ಇದರ ಸವಿನೆನಪಿಗಾಗಿ ಬ್ಯಾಂಕಿನ ಅನುಭವ ಮಂಟಪ ಶಾಖೆಗೆ ಸ್ವಂತ ಕಟ್ಟಡ ಹೊಂದಲು ನಿವೇಶನವನ್ನು ಖರೀದಿಸಿದ್ದು, ಶೀಘ್ರದಲ್ಲಿಯೇ ಆಧುನಿಕ ವಾಗಿ ಕಟ್ಟಡ ನಿರ್ಮಿಸಲಾಗುವುದು ಎಂದು ತಿಳಿಸಿದರು.

ಬ್ಯಾಂಕಿನ ಸದಸ್ಯರ ಮತ್ತು ಗ್ರಾಹಕರ ಅನುಕೂಲಕ್ಕಾಗಿ ಬ್ಯಾಂಕಿನ ವ್ಯವಹಾರವನ್ನು ಡಿಜಿಟಲೀಕರಣಗೊಳಿಸುವ ಉದ್ದೇಶದಿಂದ ಎ.ಟಿ.ಎಂ. ಕಾರ್ಡ್, ಐ.ಎಂ.ಪಿ.ಎಸ್. & ಇ-ಕಾಮರ್ಸ್ ಅನುಷ್ಠಾನಗೊಳಿಸುವುದರ ಮುಖಾಂತರ ಡಿಜಿಟಲ್ ವ್ಯವಹಾರ ಚಾಲ್ತಿಯಲ್ಲಿರುತ್ತದೆ. ಮುಂದೆ ಶೀಘ್ರದಲ್ಲಿ ಮೊಬೈಲ್ ಆಪ್ ಅಳವಡಿಸಿಕೊಳ್ಳಲು ಸಾಫ್ಟವೇರ್‌ನ್ನು ಅಭಿವೃದ್ಧಿಗೊಳಿಸಿ ಅತೀ ಶೀಘ್ರದಲ್ಲಿ ನಮ್ಮ ಗ್ರಾಹಕರುಗಳಿಗೆ ಗುಣಮಟ್ಟದ ಸೇವೆಯ ಅವಕಾಶ ಕಲ್ಪಿಸಿ, ಗ್ರಾಹಕ ಸ್ನೇಹಿ ಬ್ಯಾಂಕ್ ಆಗಿ ಕಾರ್ಯ ನಿರ್ವಹಿಸಲಿದೆ ಎಂದು ತಿಳಿಸಿದರು.


ಬ್ಯಾಂಕಿನ ಮೇಲೆ ವಿಶ್ವಾಸವಿಟ್ಟು ಠೇವಣಿ ಮಾಡಿದ ಠೇವಣಿದಾರರು ಮತ್ತು ಸಮಯಕ್ಕೆ ಸರಿಯಾಗಿ ಸಾಲ ಮರುಪಾವತಿಸುವ ಸಾಲಗಾರರಿಗೂ, ಸರ್ವ ಸದಸ್ಯರಿಗೂ, ನಮ್ಮ ಬ್ಯಾಂಕಿನಲ್ಲಿ ವ್ಯವಹರಿಸುವ ಎಲ್ಲಾ ಗ್ರಾಹಕರಿಗೂ ಹಾಗೂ ಜವಾಬ್ದಾರಿಯುತವಾಗಿ ಕರ್ತವ್ಯ ನಿರ್ವಹಿಸಿ, ಅಭಿವೃದ್ಧಿಗೆ ಸಹಕರಿಸಿದ ಸಿಬ್ಬಂದಿ ವರ್ಗದವರಿಗೂ ಧನ್ಯವಾದ ಅರ್ಪಿಸಿದರು.

ಈ ಸಂದರ್ಭದಲ್ಲಿ ಬ್ಯಾಂಕಿನ ನಿರ್ದೇಶಕರಾದ ದೊಗ್ಗಳ್ಳಿ ಎಂ. ಬಸವರಾಜ್, ಬಿ.ಎಸ್. ಪ್ರಕಾಶ್, ಡಿ. ಹೆಚ್. ಪ್ರಭು, ಕೆ.ಪಿ. ಪ್ರದೀಪ್, ಜಿ. ಸಿದ್ದಪ್ಪ, ಜಿ.ಪಿ. ವಾಗೀಶ್ ಬಾಬು, ಜೆ.ಎಸ್. ಸಿದ್ದಪ್ಪ, ಶ್ರೀಮತಿ ಎನ್. ವಸಂತ. ಶ್ರೀಮತಿ ಡಿ. ನಿರ್ಮಲ, ವೃತ್ತಿಪರ ನಿರ್ದೇಶಕರಾದ ಈ. ಚಂದ್ರಣ್ಣ, ಡಾ|| ಹೆಚ್.ಎಸ್. ಮಂಜುನಾಥ ಮತ್ತು ವ್ಯವಸ್ಥಾಪನಾ ಮಂಡಳಿಯ ಅಧ್ಯಕ್ಷರಾದ ಐಗೂರು ಸಿ. ಚಂದ್ರಶೇಖರ್ ಮತ್ತು ಸದಸ್ಯರುಗಳಾದ ಬಿ.ಎಸ್. ಪ್ರಕಾಶ್, ಎಂ.ಜಿ. ರಾಜಶೇಖರಯ್ಯ, ಚಾರ್ಟರ್ಡ್ ಅಕೌಂಟೆಂಟ್ ಜಿ. ನಂಜನಗೌಡ ಮತ್ತು ನಿವೃತ್ತ ಜಂಟಿ ನಿಬಂಧಕ ಬಿ. ಕುಬೇರಪ್ಪ ಹಾಗೂ ಪ್ರಧಾನ ವ್ಯವಸ್ಥಾಪಕರು ಉಪಸ್ಥಿತರಿದ್ದರು.

## ಬಾಪೂಜಿ ಮಕ್ಕಳ ಆಸ್ಪತ್ರೆಯಲ್ಲಿಂದು

ನಗರದ ಬಾಪೂಜಿ ಮಕ್ಕಳ ಆಸ್ಪತ್ರೆ ಸಭಾಂಗಣದಲ್ಲಿ ಇಂದು ವಿವೇಕ್ ಪೋಷಕರ ಆರೋಗ್ಯ ಕಾರ್ಯಕ್ರಮದಲ್ಲಿ ಇಂದು ಮಧ್ಯಾಹ್ನ 3.30 ಗಂಟೆಗೆ 'ಮಾನಸಿಕ ಒತ್ತಡ ನಿಭಾಯಿಸುವ ಸುಲಭ ಸೂತ್ರಗಳು' ವಿಷಯ ಕುರಿತು ಜೆಜೆಎಂಎಂ ಕಾಲೇಜ್‌ನ ಸಹಾಯಕ ಪ್ರಾಧ್ಯಾಪಕರು, ಮನೋವೈದ್ಯರು ಮತ್ತು ವ್ಯಸನಮುಕ್ತ ತಜ್ಞರಾದ ಡಾ.ಹೆಚ್.ಹೇಮಾವತಿ ಉಪನ್ಯಾಸ ನೀಡುವರು.

**ಹನ್ನೆರಡನೇ ವರ್ಷದ ಪುಣ್ಯಸ್ಮರಣೆ**



**ದಿ|| ಹಾಸಬಾವಿ ಕೊಟ್ರಬಸಪ್ಪನವರು**


*ನೀವು ನಮ್ಮನ್ನಗಲಿ ಇಂದಿಗೆ ಹನ್ನೆರಡು ವರ್ಷಗಳಾದವು. ನೀವು ತೋರಿದ ಮಾರ್ಗದರ್ಶನದಲ್ಲಿ ಮುನ್ನಡೆಯುತ್ತಿರುವ ಹಾಗೂ ಸದಾ ನಿಮ್ಮ ಸ್ಮರಣೆಯಲ್ಲಿರುವ,*

ಪತ್ನಿ : **ಶ್ರೀಮತಿ ಹೆಚ್.ಕೆ. ಮಂಗಳ,**
ಅಕ್ಕಂದಿರು : **ನಂದಾ ದೇವಣಗಾವಿ**
ಮಕ್ಕಳು : **ಸಂಜಯ್, ಬಕ್ಕೇಶ್, ಸೌಮ್ಯ,**
ಮೊಮ್ಮಗಳು : **ಧೃತಿ ಹಾಗೂ ಬಂಧು-ಮಿತ್ರರು.**

## ಬಿಸಿಗಾಳಿ ಎದುರಿಸಲು ಸನ್ನದ್ಧರಾಗಲು ಸೂಚನೆ

**(1ನೇ ಪುಟದಿಂದ)** ಚುನಾವಣೆ ಸನಿಹದಲ್ಲೇ ಇದೆ. ದೊಡ್ಡ ಸಂಖ್ಯೆಯಲ್ಲಿ ಜನರು ಸಾರ್ವಜನಿಕವಾಗಿ ಸೇರುತ್ತಾರೆ. ಇಂತಹ ಸಂದರ್ಭದಲ್ಲಿ ಆರೋಗ್ಯದ ಕಾಳಜಿ ವಹಿಸಬೇಕು ಎಂದವರು ತಿಳಿಸಿದ್ದಾರೆ.

### ಎಂ.ಆರ್.ಸಂಪತ್ ನಿಧನ



ಮೂಲತಃ ದಾವಣಗೆರೆಯವರಾಗಿದ್ದು, ಬೆಂಗಳೂರಿನಲ್ಲಿ ನೆಲೆಸಿದ್ದ ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾ ನಿವೃತ್ತ ಪ್ರಧಾನ ವ್ಯವಸ್ಥಾಪಕರಾದ ಎಂ.ಆರ್.ಸಂಪತ್ (67)ಅವರು ದಿನಾಂಕ 2.4.2024ರ ಮಂಗಳವಾರ ಬೆಂಗಳೂರಿನಲ್ಲಿ ನಿಧನರಾದರು. ಓರ್ವ ಪುತ್ರ, ಓರ್ವ ಪುತ್ರಿ, ಅಳಿಯ, ಸೊಸೆ, ಮೊಮ್ಮಕ್ಕಳು ಹಾಗೂ ಅಪಾರ ಬಂಧು-ಬಳಗವನ್ನು ಅಗಲಿರುವ ಮೃತರ ಅಂತ್ಯಕ್ರಿಯೆಯು ದಿನಾಂಕ: 4.4.2024ರ ಗುರುವಾರ ಬೆಂಗಳೂರಿನಲ್ಲಿ ನಡೆಯಲಿದೆ.

### ಶಾಮನೂರಿನ ಬೂದಿಹಾಳ್ ರಾಮಚಂದ್ರಪ್ಪ ನಿಧನ



ದಾವಣಗೆರೆ ಸಿಟಿ ಶಾಮನೂರು ವಾಸಿ ಬೂದಿಹಾಳ್ ರಾಮಚಂದ್ರಪ್ಪ (78) ಅವರು ದಿನಾಂಕ 3.4.2024ರ ಬುಧವಾರ ಮಧ್ಯಾಹ್ನ 12.50ಕ್ಕೆ ನಿಧನರಾದರು. ಪತ್ನಿ, ಇಬ್ಬರು ಪುತ್ರರು, ಇಬ್ಬರು ಪುತ್ರಿಯರು, ಅಳಿಯಂದಿರು, ಸೊಸೆಯಂದಿರು, ಆರು ಜನ ಮೊಮ್ಮಕ್ಕಳು ಹಾಗೂ ಅಪಾರ ಬಂಧುಗಳನ್ನು ಅಗಲಿರುವ ಮೃತರ ಅಂತ್ಯಕ್ರಿಯೆಯನ್ನು ದಿನಾಂಕ 4.4.2024ರ ಗುರುವಾರ ಬೆಳಿಗ್ಗೆ 11 ಗಂಟೆಗೆ ಶಾಮನೂರಿನ ಮೃತರ ಜಮೀನಿನಲ್ಲಿ ನೆರವೇರಿಸಲಾಗುವುದು.

# ಉತ್ತರ-ದಕ್ಷಿಣಕ್ಕೆ ಶೇ. 85ಕ್ಕೂ ಹೆಚ್ಚು ಮತದಾನದ ಟಾರ್ಗೆಟ್

**(1ನೇ ಪುಟದಿಂದ)** ದಾವಣಗೆರೆ ಉತ್ತರ ಶೇ. 65.71, ದಕ್ಷಿಣ ಶೇ. 65.93 ರಷ್ಟು ಇಲ್ಲಿ ಈ ಚುನಾವಣೆಯಲ್ಲಿ ಶೇ. 85 ಕ್ಕಿಂತಲೂ ಹೆಚ್ಚು ಮತದಾನವಾಗಬೇಕೆಂಬುದು ಕ್ಷೇತ್ರದ ಗುರಿಯಾಗಿದೆ ಎಂದರು.

ದಾವಣಗೆರೆ ಉತ್ತರದಲ್ಲಿ 245 ಹಾಗೂ ದಕ್ಷಿಣ ವಿಧಾನಸಭಾ ಕ್ಷೇತ್ರದಲ್ಲಿ 217 ಮತಗಟ್ಟೆಗಳಿವೆ. 2019ರ ಚುನಾವಣೆಯ ಸರಾಸರಿ ಮತದಾನಕ್ಕಿಂತಲೂ ಶೇ 20 ರಷ್ಟು ಕಡಿಮೆ 9 ಮತಗಟ್ಟೆ, ಶೇ. 15 ರಷ್ಟು ಕಡಿಮೆ 40 ಮತಗಟ್ಟೆ, ಶೇ. 10 ರಷ್ಟು ಕಡಿಮೆ 135 ಮತಗಟ್ಟೆಗಳಲ್ಲಿ ಮತದಾನವಾಗಿದೆ. ಇವು ಜಿಲ್ಲೆಯ ಎಲ್ಲಾ ಮತಗಟ್ಟೆಗಳಿಗಿಂತ ಕಡಿಮೆ ಮತದಾನವಾದ ಕ್ಷೇತ್ರಗಳಾಗಿವೆ.

ಉತ್ತರ ಕ್ಷೇತ್ರದಲ್ಲಿ ಕಡಿಮೆ ಮತದಾನ ಮಾಡಲಾದ 22 ಮತಗಟ್ಟೆಗಳು ಹಾಗೂ ದಕ್ಷಿಣ ಕ್ಷೇತ್ರದಲ್ಲಿ ಕಡಿಮೆ ಮತದಾನವಾದ 21 ಮತಗಟ್ಟೆಗಳ ಅಧಿಕಾರಿಗಳೊಂದಿಗೆ ಪರಿಶೀಲನೆ ನಡೆಸಿದಾಗ, ಶೇ.10 ರಿಂದ 30 ರಷ್ಟು ಮತದಾರರ ಸಂಪರ್ಕ ಸಿಕ್ಕಿಲ್ಲ ಎಂಬ ಮಾಹಿತಿಯನ್ನು ಮತಗಟ್ಟೆ ಅಧಿಕಾರಿಗಳು ಅಂಕಿ-ಅಂಶದೊಂದಿಗೆ ತಿಳಿಸಿದರು. ಕೆಲವು ಮತಗಟ್ಟೆ ಅಧಿಕಾರಿಗಳು ಮನೆ ಮನೆಗೆ ಭೇಟಿ ನೀಡಿ ಕರಾರುವಕ್ಕಾಗಿ ಸಮೀಕ್ಷೆ ನಡೆಸಿ ಬೇರೆ ಕಡೆ ವರ್ಗಾವಣೆ, ಮರಣ ಹೊಂದಿದವರ ವಿವರ ಸಂಗ್ರಹಿಸಿರುವರು.

ಮತದಾರರ ಪಟ್ಟಿಯಲ್ಲಿ ಹೆಸರಿದ್ದು ಅವರ ವಿವರ ಸಿಕ್ಕಿರುವುದಿಲ್ಲ, ಕೆಲವರು ಬಾಡಿಗೆದಾರರಾಗಿದ್ದು ಬೇರೆ ಕಡೆ ವಾಸವಾಗಿದ್ದಾರೆ. ಇನ್ನೂ ಕೆಲವು ಕಡೆ ಒಂದೇ ವಾರ್ಡ್ ವಾಸಿಯಾಗಿದ್ದರೂ ಅಕ್ಕ ಪಕ್ಕದ ಮತಗಟ್ಟೆಯಲ್ಲಿ ಹಂಚಿಕೆಯಾಗಿದೆ. ಪಿಎನ್‌ಟಿ ಕ್ವಾರ್ಟಸ್, ಕೆಎಸ್‌ಆರ್‌ಟಿಸಿ ವಸತಿ ಗೃಹ ಸೇರಿದಂತೆ, ಅನೇಕ ವಸತಿಗೃಹಗಳ ವಾಸವಿದ್ದ ವರ ಹೆಸರಿದೆ, ಆದರೆ ಅವರು ಇಲ್ಲಿರುವುದಿಲ್ಲ ಎಂಬ ಮಾಹಿತಿಯನ್ನು ಮತಗಟ್ಟೆ ಅಧಿಕಾರಿಗಳು ನೀಡಿದರು.

ಮತದಾರರಿಗೆ ಮತದಾರ ಚೀಟಿ, ವೋಟರ್ ಗೈಡ್, ಸಂಕಲ್ಪ ಪತ್ರ ತಲುಪಿಸುವ ಕೆಲಸ ಮಾಡಬೇಕು. ಈ ಬಾರಿಯ ಚುನಾವಣೆಯಲ್ಲಿ 3 ಮತ್ತು ಅದಕ್ಕಿಂತ ಹೆಚ್ಚು ಒಂದೇ ಸ್ಥಳದಲ್ಲಿ ಮತಗಟ್ಟೆ ಇರುವ ಕೇಂದ್ರಗಳಲ್ಲಿ ಮತದಾರರ ಸಹಾಯ ಮೇಜು ಸ್ಥಾಪಿಸಲಾಗುತ್ತದೆ ಹಾಗೂ ಸ್ವಯಂ ಸೇವಕರನ್ನು ನೇಮಕ ಮಾಡಲಾಗುತ್ತದೆ. ಮತದಾರರ ಚೀಟಿಯಲ್ಲಿ ಕ್ಯೂ.ಆರ್. ಕೋಡ್ ಸಹ ನೀಡಲಾಗುತ್ತಿದ್ದು, ಆನ್ ಮಾಡಿಕೊಂಡಲ್ಲಿ ಮತಗಟ್ಟೆಗೆ ಹೋಗಬಹುದಾಗಿದೆ ಎಂದರು.

ಪಾಲಿಕೆ ಆಯುಕ್ತರಾದ ರೇಣುಕಾ ಮಾತನಾಡಿ, ಪಾಲಿಕೆ ವ್ಯಾಪ್ತಿಯಲ್ಲಿ ಎಲ್ಲಾ ಮತದಾರರಿಗೂ ಮತ ಚೀಟಿ, ಮಾರ್ಗದರ್ಶಿ, ಸಂಕಲ್ಪ ಪತ್ರವನ್ನು ಎಲ್ಲಾ ಮತದಾರರಿಗೂ ತಲುಪಿಸುವ ಕೆಲಸ ಮಾಡಲಾಗುತ್ತದೆ. ಈ ಕೆಲಸಕ್ಕಾಗಿ ಎಲ್ಲಾ ಬಿಎಲ್‌ಓಗಳ ಜೊತೆಗೆ ಪಾಲಿಕೆ ನೀರುಗಂಟಿ, ಆರೋಗ್ಯ ನಿರೀಕ್ಷಕರು, ಕಂದಾಯ ನಿರೀಕ್ಷಕರು ಸೇರಿದಂತೆ ಎಲ್ಲಾ ಬಿಲ್ ಕಲೆಕ್ಟರ್‌ಗಳನ್ನು ಮತಗಟ್ಟೆ ಅಧಿಕಾರಿಗಳೊಂದಿಗೆ ನೇಮಿಸಲಾಗುತ್ತದೆ. ಕೆಲವು ಕಡೆ ಬಿಎಲ್‌ಓಗಳು ಸರಿಯಾಗಿ ಕೆಲಸ ಮಾಡದಿರುವುದು ಕಂಡು ಬಂದಿದ್ದು, ಅವರ ಕಾರ್ಯವನ್ನು ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುತ್ತದೆ ಎಂದರು.

ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿ ಮಲ್ಲಾನಾಯ್ಕ್ ಹಾಗೂ ಬಿಎಲ್‌ಓಗಳು ಮತ್ತು ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

## ಸಂಕ್ಷಿಪ್ತ ಸುದ್ದಿ

**ಹಳೆಯ ದಾಖಲೆ ಮುರಿಯಬೇಕು : ಕಾರ್ಯಕರ್ತರಿಗೆ ಪ್ರಧಾನಿ ಕರೆ**
ಲಖ್ನೌ : ಬಿಜೆಪಿ ಕಾರ್ಯಕರ್ತರ ಉತ್ಸಾಹ ನೋಡಿ ವಿರೋಧ ಪಕ್ಷಗಳ ನಾಯಕರು ಸ್ತಂಭೀಭೂತರಾಗಿದ್ದಾರೆ. ಈ ಬಾರಿಯ ಲೋಕಸಭಾ ಚುನಾವಣೆಯಲ್ಲಿ ಹಳೆಯ ಎಲ್ಲ ದಾಖಲೆ ಮುರಿಯಬೇಕು ಎಂದು ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು ಉತ್ತರ ಪ್ರದೇಶದಲ್ಲಿ ಕಾರ್ಯಕರ್ತರ ಜೊತೆ ಸಂವಾದ ನಡೆಸುತ್ತಾ ಹೇಳಿದ್ದಾರೆ.

**ಕೇಜ್ರಿವಾಲ್ ತೂಕ ಇಳಿಕೆ ಆರೋಪ ತಳ್ಳಿ ಹಾಕಿದ ಅಧಿಕಾರಿಗಳು**
ನವದೆಹಲಿ : ದೆಹಲಿ ಮುಖ್ಯಮಂತ್ರಿ ಅರವಿಂದ ಕೇಜ್ರಿವಾಲ್ ಅವರು ಮಾರ್ಚ್ 21ರಂದು ಬಂಧನಕ್ಕೊಳಗಾದ ನಂತರ ತ್ವರಿತವಾಗಿ ತೂಕ ಕಳೆದುಕೊಳ್ಳುತ್ತಿದ್ದಾರೆ. ಈಗ 4.5 ಕೆ.ಜಿ. ತೂಕ ಕಳೆದುಕೊಂಡಿದ್ದಾರೆ ಎಂದು ದೆಹಲಿ ಸಚಿವೆ ಆತಿಶಿ ಹೇಳಿದ್ದಾರೆ. ಈ ಆರೋಪವನ್ನು ತಿಹಾರ್ ಜೈಲಿನ ಅಧಿಕಾರಿಗಳು ತಳ್ಳಿ ಹಾಕಿದ್ದು, ಅವರ ದೇಹ ತೂಕ ನಿರಂತರವಾಗಿ 65 ಕೆ.ಜಿ. ಆಗಿದೆ ಎಂದು ತಿಳಿಸಿದ್ದಾರೆ. ಆರೋಗ್ಯ ಸ್ಥಿತಿಯ ಮೇಲೆ ನಿರಂತರ ನಿಗಾ ವಹಿಸಲಾಗಿದೆ ಎಂದೂ ಅವರು ತಿಳಿಸಿದ್ದಾರೆ.

**ವಯನಾಡ್‌ನಿಂದ ರಾಹುಲ್ ಗಾಂಧಿ ನಾಮಪತ್ರ ಸಲ್ಲಿಕೆ**
ವಯನಾಡ್ : ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರು ಕೇರಳದ ವಯನಾಡ್ ಲೋಕಸಭಾ ಕ್ಷೇತ್ರದಿಂದ ನಾಮಪತ್ರ ದಾಖಲಿಸಿದ್ದಾರೆ. ಭವ್ಯ ಮೆರವಣಿಗೆ ನಂತರ ಅವರು ನಾಮಪತ್ರ ದಾಖಲಿಸಿದ್ದಾರೆ. ಕಳೆದ ಬಾರಿಯೂ ಅವರು ಇದೇ ಕ್ಷೇತ್ರದಿಂದ ಆಯ್ಕೆಯಾಗಿದ್ದರು.

**ಅರ್ಧ ಜೈಲು, ಅರ್ಧ ಬೇಲು : ವಿಪಕ್ಷಗಳಿಗೆ ನಡ್ಡಾ ಲೇವಡಿ**
ಜೈಪುರ : ಪ್ರತಿಪಕ್ಷದ ಒಕ್ಕೂಟವಾದ ಐ.ಎನ್‌.ಡಿ.ಐ.ಎ. ಕುಟುಂಬ ಪಕ್ಷಗಳ ಮೈತ್ರಿಯಾಗಿದೆ. ಇದರ ಅರ್ಧ ನಾಯಕರು ಜೈಲಿನಲ್ಲಿದ್ದರೆ, ಇನ್ನರ್ಧ ನಾಯಕರು ಜಾಮೀನಿನ ಮೇಲೆ ಹೊರಗಿದ್ದಾರೆ ಎಂದು ಬಿಜೆಪಿ ಅಧ್ಯಕ್ಷ ಜೆ.ಪಿ. ನಡ್ಡಾ ಲೇವಡಿ ಮಾಡಿದ್ದಾರೆ.

**ಕಾರ್ಯಾಚರಣೆಯಲ್ಲಿ ಹತ ನಕ್ಸಲರ ಸಂಖ್ಯೆ 13ಕ್ಕೆ ಏರಿಕೆ**
ರಾಯಪುರ : ಛತ್ತೀಸ್‌ಘಡದ ಬಿಜಾಪುರ ಜಿಲ್ಲೆಯಲ್ಲಿ ಭದ್ರತಾ ಪಡೆಗಳು ದಟ್ಟ ಅರಣ್ಯದಲ್ಲಿ ನಡೆಸಿದ ಕಾರ್ಯಾಚರಣೆಯಲ್ಲಿ ಕನಿಷ್ಠ 13 ನಕ್ಸಲರು ಹತರಾಗಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ನಿನ್ನೆ ಹತ್ತು ನಕ್ಸಲರು ಹತರಾಗಿದ್ದಾಗಿ ಪೊಲೀಸರು ಹೇಳಿದ್ದರು. ಶೋಧ ಕಾರ್ಯಾಚರಣೆ ಮುಂದುವರೆಸಿದಾಗ ಇನ್ನೂ ಮೂವರ ಮೃತದೇಹಗಳು ಪತ್ತೆಯಾಗಿವೆ.

**ಪಾಕ್‌ನ ಕೋಟಿ ಜನ ಬಡತನಕ್ಕೆ ಜಾರುವ ಅಪಾಯದಲ್ಲಿ**
ಇಸ್ಲಾಮಾಬಾದ್ : ಪಾಕಿಸ್ತಾನದಲ್ಲಿ ಒಂದು ಕೋಟಿ ಜನರು ಬಡತನದ ಬೇಗೆಗೆ ಸಿಲುಕುವ ಅಪಾಯದಲ್ಲಿದ್ದಾರೆ ಎಂದು ವಿಶ್ವ ಬ್ಯಾಂಕ್ ತಿಳಿಸಿದೆ. ಪಾಕಿಸ್ತಾನದ 9.8 ಕೋಟಿ ಜನರು ಈಗಾಗಲೇ ಬಡತನದಲ್ಲಿ ಸಿಲುಕಿದ್ದಾರೆ. ಇದು ಒಟ್ಟು ಜನಸಂಖ್ಯೆಯ ಶೇ.40ರಷ್ಟಾಗಿದೆ. ಪಾಕಿಸ್ತಾನದ ಈಗ ತೀವ್ರ ಹಣಕಾಸು ಬಿಕ್ಕಟ್ಟು ಎದುರಿಸುತ್ತಿದೆ. ಪಾಕಿಸ್ತಾನದ ಆರ್ಥಿಕ ಬೆಳವಣಿಗೆ ಶೇ.1.6ರಷ್ಟಿದೆ. ಹಣದುಬ್ಬರ ಪ್ರಮಾಣ ಶೇ.26ರಷ್ಟಿದೆ.

**ಔಷಧ ಘಟಕದಲ್ಲಿ ಬೆಂಕಿ, ನಾಲ್ವರ ಸಾವು**
ಹೈದರಾಬಾದ್ : ತೆಲಂಗಾಣದ ಸಂಗಾರೆಡ್ಡಿ ಜಿಲ್ಲೆಯಲ್ಲಿನ ಔಷಧ ಘಟಕದಲ್ಲಿ ಸ್ಫೋಟ ಸಂಭವಿಸಿ ನಾಲ್ವರು ಸಾವನ್ನಪ್ಪಿದ್ದಾರೆ ಹಾಗೂ ಇತರೆ 16 ಜನ ಗಾಯಗೊಂಡಿದ್ದಾರೆ. ಮೃತರಲ್ಲಿ ಉದ್ಯಮದ ನಿರ್ದೇಶಕ ಸಹ ಸೇರಿದ್ದಾರೆ. ಗಾಯಗೊಂಡವರ ಪೈಕಿ ಇಬ್ಬರ ಸ್ಥಿತಿ ಚಿಂತಾಜನಕವಾಗಿದೆ.

# ಅಜ್ಞಾನ ಕಳೆದು ನಿಜ ಜ್ಞಾನವನ್ನು ಪಡೆದುಕೊಳ್ಳುವುದೇ 'ದೀಕ್ಷೆ'

ಸಾಣೇಹಳ್ಳಿ, ಏ. 3- ಧರ್ಮ ಅಂದರೇನು, ದೇವರು ಎಂದರೆ ಯಾವುದು, ತಮ್ಮ ಬದುಕಿನ ರೀತಿ-ನೀತಿಗಳು ಹೇಗಿರಬೇಕು ಎಂದು ಜನರಿಗೆ ತಿಳಿಸಿಕೊಡುವ ಕೆಲಸವನ್ನು ಬಸವಣ್ಣನವರು ಮಾಡಿದ್ದಾರೆ ಎಂದು ಶ್ರೀ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮೀಜಿ ಹೇಳಿದರು.

ಇಲ್ಲಿನ ಗುರುಬಸವ ಮಹಾಮನೆಯಲ್ಲಿ ಏರ್ಪಡಿಸಿದ್ದ ಪ್ರತಿ ತಿಂಗಳ ಇಷ್ಟಲಿಂಗ ದೀಕ್ಷಾ ಸಂಸ್ಕಾರ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿ ಸ್ವಾಮೀಜಿ ಮಾತನಾಡಿದರು.

12ನೇ ಶತಮಾನದಲ್ಲಿ ಧರ್ಮ, ದೇವರುಗಳ ಬಗ್ಗೆ ನಂಬಿಕೆ ಇತ್ತು. ಆದರೆ ಆ ನಂಬಿಕೆ ಜನರನ್ನು ಸರಿಯಾದ ಮಾರ್ಗದಲ್ಲಿ ಕರೆದುಕೊಂಡು ಹೋಗುತ್ತಿರಲಿಲ್ಲ. ತಪ್ಪು ಹೆಜ್ಜೆಗಳನ್ನು ತುಳಿಸುತ್ತಿತ್ತು. ಅದನ್ನು ಸರಿಪಡಿಸುವ ಕೆಲಸವನ್ನು ಬಸವಣ್ಣನವರು ಮಾಡಿದರು.

ಯಾರು ನಮಗೆ ಅರಿವನ್ನು ನೀಡುತ್ತಾರೋ ಅಂಥವರನ್ನು ತಂದೆ, ತಾಯಿ, ಬಂಧು-ಬಳಗ ಎಂದು ಗೌರವಿಸುತ್ತೇವೆ. ಆದ್ದರಿಂದ ಬಸವಣ್ಣನವರು ತಂದೆ, ತಾಯಿ, ಬಂಧು-ಬಳಗ ಒಬ್ಬರೇ ಆಗಿ ನಮಗೆ ವಚನ ಸಾಹಿತ್ಯದ ಮೂಲಕ ಸರಿಯಾದ ಮಾರ್ಗದರ್ಶನ ಮಾಡಿದ್ದರಿಂದ ಅವರನ್ನು ಇಂದಿಗೂ ಗೌರವಿಸುತ್ತೇವೆ. ಅಜ್ಞಾನವನ್ನು ಕಳೆದುಕೊಂಡು ಜ್ಞಾನವನ್ನು ಪಡೆದು ಮಾರ್ಗದರ್ಶನ ಮಾಡುವಂಥವರಿಗೆ ಗುರು ಎನ್ನುವರು.



**ಸಾಣೇಹಳ್ಳಿಯಲ್ಲಿ ಇಷ್ಟಲಿಂಗ ದೀಕ್ಷಾ ಸಂಸ್ಕಾರ ಕಾರ್ಯಕ್ರಮದಲ್ಲಿ ಶ್ರೀ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮೀಜಿ**

ಅಂತಹ ಗುರು ಬಸವಣ್ಣನವರಾಗಿದ್ದರು.

ಇವತ್ತು ನೀವೆಲ್ಲಾ ಹೊಸ ರೀತಿಯ ಬದುಕನ್ನು ಸಾಗಿಸಿ ನಮ್ಮೊಳಗಡೆ ದೇವರಿದ್ದಾನೆ ಎನ್ನುವ ಕುರುಹಾಗಿ ಇಷ್ಟಲಿಂಗ ದೀಕ್ಷೆಯನ್ನು ಪಡೆದುಕೊಂಡಿದ್ದೀರಿ. ದೀಕ್ಷೆ ಎಂದರೆ ದೇವರ ಬಗ್ಗೆ ಅರಿವನ್ನು ಮೂಡಿಸಿಕೊಂಡು ಆಚರಣೆಗೆ ತರುವುದು. ದೀಯತೆ (ಕಳೆದುಕೊಳ್ಳುವುದು) ಮತ್ತು ಕ್ಷೀಯತೆ (ಪಡೆದುಕೊಳ್ಳುವುದು). ದೇವರ ಬಗ್ಗೆ ಇದುವರೆಗೂ ಇದ್ದ ಅಜ್ಞಾನ ಕಳೆದು ಸರಿಯಾದ ಜ್ಞಾನವನ್ನು ಪಡೆದುಕೊಳ್ಳುವಂಥದ್ದೇ ದೀಕ್ಷೆ ಎಂದರು.

ವೇದ ದೀಕ್ಷೆ, ಕ್ರಿಯಾ ದೀಕ್ಷೆ, ಮಂತ್ರದ ದೀಕ್ಷೆ ಮೂಲಕ ಇಷ್ಟಲಿಂಗ, ಭಾವಲಿಂಗ, ಪ್ರಾಣಲಿಂಗ ಈ ಮೂರೂ ಲಿಂಗಗಳನ್ನು ಆರಾಧನೆ ಮಾಡಬೇಕು. ಈ ಸಂದರ್ಭದಲ್ಲಿ ಅಷ್ಟಾವರಣ, ಪಂಚಾಚಾರ, ಷಟ್‌ಸ್ಥಲಗಳು ಎನ್ನುವ ನೀತಿ ಸಂಹಿತೆಗಳನ್ನು ಹಾಕಿಕೊಂಡು ಪೂಜಿಸಬೇಕು. ಗುರು ಎಂದರೆ ಅಜ್ಞಾನವನ್ನು ಕಳೆದು ಜ್ಞಾನವನ್ನು ಕೊಡುವವನು. ಜಂಗಮ ಎಂದರೆ ವ್ಯಕ್ತಿಯು ತನ್ನ ಅರಿವಿನ ಮೂಲಕ ಸರಿಯಾದ ಮಾರ್ಗ ತೋರಿಸುವಂಥವನು. ಪಾದೋದಕ ಎಂದರೆ ಪ್ರಸಾದ, ಅರಿವು ಅಥವಾ ಜ್ಞಾನವನ್ನು ಪಡೆದುಕೊಳ್ಳುವುದು.

ಅನಿಷ್ಟ, ಕಂದಾಚಾರ, ಮೌಢ್ಯಗಳನ್ನು ಶರಣರು ಸಂಪೂರ್ಣವಾಗಿ ತೊಲಗಿಸಿದರು. ಒಳ್ಳೆಯ ಧರ್ಮದ ಕೆಲಸ ಮಾಡುವವರಿಗೆ ಆಚಾರ-ವಿಚಾರಗಳು ಶುದ್ಧವಾಗಿರುವವರಿಗೆ, ಸನ್ಮಾರ್ಗದಲ್ಲಿ ನಡೆಯುವವರಿಗೆ, ಜನರಿಗೆ ಅರಿವಿನ ದಾರಿಯತ್ತ ಕರೆದುಕೊಂಡು ಹೋಗುವವರಿಗೆ ಪನ್ನೀರನ್ನು ಸಿಂಪಡಿಸುವ ಕಾರ್ಯವನ್ನು ಶರಣರು ಮಾಡಿದರು. ಹಾಗೆಯೇ ನಿಮ್ಮ ಮನಸ್ಸಿನಲ್ಲಿರುವ ಎಲ್ಲ ಅಜ್ಞಾನ, ಮೌಢ್ಯ, ಕಂದಾಚಾರವನ್ನು ಸುಟ್ಟುಹಾಕಿ, ಪನ್ನೀರನ್ನು ಸಿಂಪಡಿಸುವ ಕೆಲಸ ನಿಮ್ಮಿಂದ ಆದಾಗ ಮಾತ್ರ ದೀಕ್ಷೆ ಪಡೆದುಕೊಂಡಿದ್ದಕ್ಕೂ ಸಾರ್ಥಕವಾಗುತ್ತದೆ ಎಂದು ಸ್ವಾಮೀಜಿ ತಿಳಿಸಿದರು.

## ಸಾದರ ಲಿಂಗಾಯತ ಸಮಾಜದ ವಿದ್ಯಾರ್ಥಿಗಳಿಗೆ ಆರ್ಥಿಕ ನೆರವು

ದಾವಣಗೆರೆ, ಏ. 3- 2023-24 ನೇ ಸಾಲಿನ ಪ್ರಥಮ ವರ್ಷದ ವೈದ್ಯಕೀಯ ವಿದ್ಯಾಭ್ಯಾಸಿಗಳಾಗಿದ್ದು, ಸರ್ಕಾರಿ ಕೋಟಾದಲ್ಲಿ ಸ್ಥಾನಗಳಿಸಿ ವಿದ್ಯಾಭ್ಯಾಸ ಮಾಡುತ್ತಿರುವ ಕರ್ನಾಟಕ ರಾಜ್ಯ ಮಟ್ಟದ ಸಾಧು ಲಿಂಗಾಯತ ಸಮಾಜದ, ಆರ್ಥಿಕ ಸಂಕಷ್ಟದಲ್ಲಿರುವ ವಿದ್ಯಾರ್ಥಿಗಳಿಗೆ ಐದು ವರ್ಷದ ಅಧ್ಯಯನದ ಅವಧಿಗೆ ಆರ್ಥಿಕ ನೆರವು ನೀಡಲು ಸಾದರ ನೌಕರರ ಬಳಗ ಮುಂದಾಗಿದೆ.

ಸಂಬಂಧಪಟ್ಟ ಸಾಧು ಲಿಂಗಾಯತ ಸಮಾಜದ ವಿದ್ಯಾರ್ಥಿಗಳ ನಾಡಿದ್ದು ದಿನಾಂಕ 5 ರೊಳಗಾಗಿ ಅಗತ್ಯ ದಾಖಲೆಗಳೊಂದಿಗೆ (ದ್ವಿತೀಯ ಪಿಯುಸಿ ಅಂಕಪಟ್ಟಿ, ಆಧಾರ ಕಾರ್ಡ್, ವೈದ್ಯಕೀಯ ಕಾಲೇಜಿನ ದಾಖಲಾತಿ ಮತ್ತು ನೀಟ್ ರ್‍ಯಾಂಕ್ ಜೆರಾಕ್ಸ್ ಪ್ರತಿಗಳು, ಊರಿನ ಇಬ್ಬರು ಪ್ರಮುಖ ವ್ಯಕ್ತಿಗಳ ಮೊಬೈಲ್ ನಂಬರ್ ಮತ್ತು ವಿಳಾಸವನ್ನು ನಮೂದು ಮಾಡಿ ಕೆ. ನಾಗಪ್ಪ, ಅಧ್ಯಕ್ಷರು, ಸಾದರ ನೌಕರರ ಬಳಗ, ಸಾದರ ಪತ್ತಿನ ಸಹಕಾರ ಬ್ಯಾಂಕ್, 2 ನೇ ಮಹಡಿ, ಡೋರ್ ನಂ. 2000/ಎ-28, 16 ನೇ ತಿರುವು, ತರಳಬಾಳು ಬಡಾವಣೆ-ವಿದ್ಯಾನಗರ ಮುಖ್ಯ ರಸ್ತೆ, ದಾವಣಗೆರೆ ಇವರನ್ನು ಸಂಪರ್ಕಿಸಲು ಕೋರಲಾಗಿದೆ.

ಹೆಚ್ಚಿನ ಮಾಹಿತಿಗಾಗಿ 7829043544, 9844501366, 98863 39984,9844369744 ಗೆ ಕರೆ ಮಾಡಿ ಮಾಹಿತಿ ಪಡೆಯಬಹುದು.

# ಜನಪರ ಅಭಿವೃದ್ಧಿಯ ಸಂಶೋಧನೆಗಳಾಗಲಿ

ದಾವಣಗೆರೆ, ಏ. 3- ಸಮಾಜದ ಎಲ್ಲ ವರ್ಗಗಳ ಸಮಗ್ರ ಸುಸ್ಥಿರ ಅಭಿವೃದ್ಧಿ ದೂರದೃಷ್ಟಿಯಿಂದ ಕೂಡಿದ ಸಂಶೋಧನೆಗಳಿಗೆ ವಿದ್ಯಾರ್ಥಿಗಳು ಆದ್ಯತೆ ನೀಡಬೇಕು. ದೇಶದ ಅಭಿವೃದ್ಧಿ ಅನುಷ್ಠಾನದಲ್ಲಿ ಸಂಶೋಧನೆಗಳ ಶಿಫಾರಸುಗಳು ಅವಕಾಶ ಪಡೆಯುವಂತಾಗಬೇಕು ಎಂದು ದಾವಣಗೆರೆ ವಿಶ್ವವಿದ್ಯಾನಿಲಯದ ವಿಶ್ರಾಂತ ಕುಲಪತಿ ಪ್ರೊ. ಎಸ್. ಇಂದುಮತಿ ಸಲಹೆ ನೀಡಿದರು.


**ಪ್ರೊ. ಇಂದುಮತಿ**

ನವದೆಹಲಿಯ ಐಸಿಎಸ್‌ಎಸ್‌ಆರ್ ಪ್ರಾಯೋಜಕತ್ವದಲ್ಲಿ ದಾವಣಗೆರೆ ವಿಶ್ವವಿದ್ಯಾನಿಲಯ ಅರ್ಥಶಾಸ್ತ್ರ ಅಧ್ಯಯನ ವಿಭಾಗದ ವತಿಯಿಂದ ಏರ್ಪಡಿಸಿದ್ದ ಯುವ ಪ್ರಾಧ್ಯಾಪಕರ ಸಾಮರ್ಥ್ಯ ವೃದ್ಧಿ ಮತ್ತು ಸಂಶೋಧನಾ ವಿನ್ಯಾಸ ಮತ್ತು ಸಂಶೋಧನಾ ವಿನ್ಯಾಸ ಹಾಗೂ ದತ್ತಾಂಶ ವಿಶ್ಲೇಷಣೆ ಕಾರ್ಯಾಗಾರಕ್ಕೆ ಚಾಲನೆ ನೀಡಿ ಮಾತನಾಡಿದರು.

ಸಮಾಜಮುಖಿ ಸಂಶೋಧನೆಗಳು ದೇಶದ ಗ್ರಾಮೀಣ ಜನರ ಆರ್ಥಿಕ, ಸಾಮಾಜಿಕ, ಶೈಕ್ಷಣಿಕ ಬೆಳವಣಿಗೆಗೆ ಪೂರಕವಾಗಿರಬೇಕು. ಪರಿಸರವನ್ನು ರಕ್ಷಿಸುವ, ಜನರನ್ನು ಸಂಕಷ್ಟದಿಂದ ಪಾರು ಮಾಡಿ ಸ್ವಾವಲಂಬನೆಯ ಬದುಕಿಗೆ ಪ್ರೇರೇಪಿಸುವ ನಿಟ್ಟಿನಲ್ಲಿ ಯೋಜನೆಗಳು ಸಿದ್ಧವಾಗಬೇಕು. ಸಂಶೋಧನೆಗೆ ಸಂಗ್ರಹಿಸುವ ದತ್ತಾಂಶಗಳು ವಾಸ್ತವ ನೆಲೆಯನ್ನು ಅರ್ಥೈಸುವಂತಿರಬೇಕು. ಸಮಸ್ಯೆಯ ಮೂಲವನ್ನು ಅರ್ಥ ಮಾಡಿಕೊಂಡು ಪರಿಹಾರ ಕಂಡುಕೊಳ್ಳಬೇಕು ಎಂದು ಸಲಹೆ ನೀಡಿದರು.

ಇತ್ತೀಚಿನ ಅತ್ಯಾಧುನಿಕ ತಂತ್ರಜ್ಞಾನ ಮತ್ತು ತಂತ್ರಾಂಶಗಳು ಜನಸ್ನೇಹಿಯಾಗಿವೆ. ಇಂಥ ತಂತ್ರಜ್ಞಾನ ಮತ್ತು ತಂತ್ರಾಂಶಗಳು ಸಂಶೋಧನೆಯ ಮಾಹಿತಿ ಸಂಗ್ರಹ ಹಾಗೂ ಫಲಿತಾಂಶ ಪಡೆಯಲು ಸಹಕಾರಿಯಾಗಿವೆ. ಸಂಶೋಧನಾರ್ಥಿಗಳು ಅಧ್ಯಯನ, ಸಂಶೋಧನೆಯ ಜೊತೆಗೆ ತಂತ್ರಜ್ಞಾನ ಕೌಶಲಗಳನ್ನು ಅಳವಡಿಸಿಕೊಳ್ಳಬೇಕು. ಆ ಮೂಲಕ ಉತ್ತಮ ಗುಣಮಟ್ಟದ ಮತ್ತು ಮೌಲ್ಯವರ್ಧಿತ ಫಲಿತಾಂಶವನ್ನು ಕಂಡುಕೊಳ್ಳಲು ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ತಂತ್ರಜ್ಞಾನ ಯುಗದಲ್ಲಿ ಡಿಜಿಟಲ್ ಸಾಕ್ಷರತೆ ಪ್ರಭಾವ ಹೆಚ್ಚಾಗುತ್ತಿದೆ. ಇದು ಡಿಜಿಟಲ್ ಸಾಕ್ಷರತೆಯು ಅಂತರವನ್ನು ಹೆಚ್ಚಿಸುತ್ತಿದೆ. ಇದು ಬೆಳವಣಿಗೆಯ ವೇಗದ ಮೇಲೂ ಪರಿಣಾಮ ಬೀರುವ ಸಾಧ್ಯತೆಗಳಿದ್ದು, ಅಧ್ಯಯನ ಅವಲೋಕನದ ಅಗತ್ಯವಿದೆ ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಕುಲಪತಿ ಪ್ರೊ. ಬಿ. ಡಿ. ಕುಂಬಾರ ಮಾತನಾಡಿ, ಸುಸ್ಥಿರತೆಯೊಂದಿಗೆ ನಾವೀನ್ಯತೆಯನ್ನೂ ಭವಿಷ್ಯದ ಚಿಂತನೆಯ ಪರಿಕಲ್ಪನೆಗಳ ಶ್ರೇಣಿಯನ್ನು ಪರಿಶೋಧಿಸುತ್ತವೆ. ಹೊಸತನ ರೂಪಿಸುವ ಜೊತೆಗೆ ಸಾಮಾಜಿಕ ಜವಾಬ್ದಾರಿ ಮತ್ತು ಪರಿಸರ ಪ್ರಜ್ಞೆಯನ್ನೂ ಬೆಳೆಸಲು ಜಾಗೃತಿಯ ಆಂದೋಲನ ಆಗಬೇಕಾಗಿದೆ ಎಂದು ತಿಳಿಸಿದರು.

ದೇಶದ ಅಭಿವೃದ್ಧಿಯಲ್ಲಿ ಶಿಕ್ಷಣ, ಕೌಶಲ್ಯಗಳ ಕೊರತೆಗಳು ತೀವ್ರ ಹಿನ್ನಡೆಗೆ ಕಾರಣವಾಗುತ್ತಿವೆ. ಉದ್ಯೋಗ ಆಧಾರಿತ ಶಿಕ್ಷಣ ಮತ್ತು ಜೀವನ ಆಧಾರಿತ ಶಿಕ್ಷಣದ ಪರಿಕಲ್ಪನೆಯನ್ನು ಅರ್ಥ ಮಾಡಿಸಬೇಕಾಗಿದೆ. ವಾಸ್ತವದ ನೆಲೆಯಲ್ಲಿ ನಿಂತು ಭವಿಷ್ಯವನ್ನು ಕಟ್ಟುವ ಕೆಲಸ ಆಗಬೇಕಾಗಿದೆ ಎಂದರು.

ಕಾರ್ಯಕ್ರಮದ ಸಂಯೋಜಕ ಹಾಗೂ ಅರ್ಥಶಾಸ್ತ್ರ ಅಧ್ಯಯನ ವಿಭಾಗದ ಅಧ್ಯಕ್ಷ ಪ್ರೊ. ಹುಚ್ಚೇಗೌಡ ಪ್ರಾಸ್ತಾವಿಕವಾಗಿ ಮಾತನಾಡಿದರು. ವಿಭಾಗದ ಹಿರಿಯ ಪ್ರಾಧ್ಯಾಪಕರಾದ ಪ್ರೊ.ಕೆ.ಬಿ. ರಂಗಪ್ಪ, ಪ್ರೊ. ಎಸ್. ಸುಚಿತ್ರಾ ಉಪಸ್ಥಿತರಿದ್ದರು.

## ಹರಿಹರ ನದಿಗೆ ಹರಿದು ಬಂದ ಭದ್ರೆ ನೀರು

**(1ನೇ ಪುಟದಿಂದ)** ತಂದಿದ್ದು, ಅವರು ಕೂಡಾ ಸಹಮತ ವ್ಯಕ್ತಪಡಿಸಿ, ಸರ್ಕಾರದ ಗಮನಕ್ಕೆ ತರುವ ಮೂಲಕ ನೀರು ಶೇಖರಣಾ ಘಟಕ ಸ್ಥಾಪಿಸುವ ನಿಟ್ಟಿನಲ್ಲಿ ಪ್ರಾಮಾಣಿಕ ಪ್ರಯತ್ನ ಮಾಡೋಣ ಎಂದು ಹೇಳಿದ್ದಾರೆ ಎಂದು ತಿಳಿಸಿದರು.

ನದಿಗೆ ಹರಿದು ಬಂದಿರುವ ನೀರು ಬಹುತೇಕ, ಇನ್ನೂ ಒಂದು ತಿಂಗಳ ಕಾಲ ನಗರದ ಜನತೆಗೆ ನೀರು ಸರಬರಾಜು ಮಾಡಬಹುದು. ತದ ನಂತರ 27 ಕೆರೆಗೆ ಹೋಗುವ ನೀರು ಶೇಖರಣ ಘಟಕದಲ್ಲಿ ಸಂಗ್ರಹಿಸಿದ ನೀರು ಸಹ, ಇಲ್ಲಿನ ಜನತೆಗೆ ಒಂದು ಗೇಟ್ ಮೂಲಕ ಕೆಲವು ದಿನಗಳ ಕಾಲ ನೀರು ಸರಬರಾಜು ಮಾಡಲು ಅವಕಾಶ ಇರುವುದರಿಂದ ಅಲ್ಲಿ ಶೇಖರಣೆ ಗೊಂಡಿರುವ ನೀರು ನಗರದ ಜನತೆಯ ನೀರಿನ ಬವಣೆ ನೀಗಿಸಲು ಸಾಧ್ಯವಾಗುತ್ತದೆ. ಅಷ್ಟರಲ್ಲಿ ಮಳೆ ಬಿದ್ದರೆ ನಗರದ ಜನತೆಗೆ ಯಾವುದೇ ರೀತಿಯ ನೀರಿನ ಸಮಸ್ಯೆಗಳು ಬರದಂತೆ ಆಗುತ್ತದೆ ಎಂದು ಪೌರಾಯುಕ್ತ ಬಸವರಾಜ್ ಹೇಳಿದರು.

ಈ ಸಂದರ್ಭದಲ್ಲಿ ನಗರಸಭೆ ಸದಸ್ಯರಾದ ಎ.ಬಿ. ವಿಜಯಕುಮಾರ್, ಹನುಮಂತಪ್ಪ ಇತರರು ಹಾಜರಿದ್ದರು.

# ನಮ್ಮ ಪೂರ್ವಜರ ಕಾಲದ ತಂತ್ರಜ್ಞಾನ ಈಗಲೂ ವಿಜ್ಞಾನಕ್ಕೆ ಸವಾಲಾಗಿದೆ

**ಜಿಎಂಐಟಿ ಪಾಲಿಟೆಕ್ನಿಕ್ ಕಾಲೇಜಿನ ಕಾರ್ಯಾಗಾರದಲ್ಲಿ ಪ್ರಾಧ್ಯಾಪಕ ಪುಟ್ಟರಾಜು**



ದಾವಣಗೆರೆ, ಏ. 3- - ಈ ಹಿಂದೆ ನಮ್ಮ ಪೂರ್ವಜರು, ಪ್ರಕೃತಿ ಸಹಜವಾಗಿ ದೊರೆಯುತ್ತಿದ್ದ ಮರ ಮುಟ್ಟು, ಕಲ್ಲುಬಂಡೆ, ಬಿದಿರು ಹಾಗೂ ಇತರೆ ವಸ್ತು ಗಳಿಂದ, ಅಂದಿನ ಕಾಲದ ತಂತ್ರಜ್ಞಾನವನ್ನು ಬಳಸಿ ಕೊಂಡು ಎಂತಹ ಭವ್ಯ ನಿರ್ಮಾಣಗಳನ್ನು ಮಾಡಿ, ಈಗಲೂ ನಮ್ಮ ಬುದ್ದಿ ಶಕ್ತಿಗೆ ಹಾಗೂ ವಿಜ್ಞಾನಕ್ಕೆ ಸವಾಲು ಎನಿಸುವಂತಹ ಕಾರ್ಯಗಳನ್ನು ಮಾಡಿದ್ದಾರೆ ಎಂದು ಜಿಎಂ ತಾಂತ್ರಿಕ ಮಹಾವಿದ್ಯಾಲಯದ ಸಹಾ ಯಕ ಪ್ರಾಧ್ಯಾಪಕ ಎಂ.ಎಚ್ ಪುಟ್ಟರಾಜು ಹೇಳಿದರು.

ನಗರದ ಜಿ.ಎಂ.ಐ.ಟಿ ಪಾಲಿಟೆಕ್ನಿಕ್ ಕಾಲೇಜಿನ ಸಿವಿಲ್ ಇಂಜಿನಿಯರಿಂಗ್ ಫೋರಂ 'ಅಭಿಯಂತ್' ವತಿಯಿಂದ 'ಸಾಂಪ್ರದಾಯಿಕ ನಿರ್ಮಾಣ ಸಾಮಗ್ರಿಗಳು ಮತ್ತು ಆಧುನಿಕ ನಿರ್ಮಾಣ ಸಾಮಗ್ರಿಗಳು' ಎಂಬ ವಿಷಯವಾಗಿ ಹಮ್ಮಿಕೊಳ್ಳಲಾಗಿದ್ದ ಕಾರ್ಯಾಗಾರದಲ್ಲಿ ಅವರು ಮಾತನಾಡಿದರು.

ಆದರೆ ಇಂದು ಆಧುನಿಕ ಜೀವನ ಶೈಲಿಗೆ ಸರಿಹೊಂದುವಂತೆ ವಿಜ್ಞಾನದ ಸದ್ಬಳಕೆಯೊಂದಿಗೆ ಅತ್ಯಾಧುನಿಕ ತಂತ್ರಜ್ಞಾನದ ಸಹಾಯದೊಂದಿಗೆ ನವೀನ ಮಾದರಿಯ ಕಟ್ಟಡ ಸಾಮಗ್ರಿಗಳಾದ ಹಗುರವಾದ ಇಟ್ಟಿಗೆ, ಹೆಚ್ಚು ಸಾಮರ್ಥ್ಯದ ಕಬ್ಬಿಣ, ಆಟೋಮೇಟೆಡ್ ಕಾಂಕ್ರೀಟ್ ಘಟಕ, ಪ್ರಿಸ್ಟ್ರೆಸ್ಡ್ ಕಾಂಕ್ರೀಟ್ ಹೀಗೆ ಹಲವಾರು ಸಾಮಗ್ರಿಗಳ ಲಭ್ಯತೆ, ಬಳಕೆ, ಬಾಳಿಕೆ, ಬಗ್ಗೆ ವಿದ್ಯಾರ್ಥಿಗಳು ಅರಿತುಕೊಳ್ಳಬೇಕು ಎಂದು ಅವರು ತಿಳಿಸಿದರು.

ಪ್ರಾಂಶುಪಾಲ ಡಾ ಬಿ. ಆರ್. ಶ್ರೀಧರ್, ಸಿವಿಲ್ ಇಂಜಿನಿಯರ್ ವಿಭಾಗದ ಮುಖ್ಯಸ್ಥ ನಿಂಗರಾಜು ಸಿ, ಫೋರಂ ಸಂಯೋಜಕಿ ಪೂರ್ಣಿಮಾ ಕೆ. ಬಿ, ಉಪನ್ಯಾಸಕರಾದ ಮಾರುತಿ ಕೆ.ಪಿ, ಗಂಗಮ್ಮ ಜೆ.ಸಿ ಮತ್ತು ವಿದ್ಯಾರ್ಥಿಗಳು ಹಾಜರಿದ್ದರು.

ವಿದ್ಯಾರ್ಥಿ ಆರ್. ಹೆಚ್. ವಿವೇಕಾನಂದ ನಿರೂಪಿಸಿದರು. ಸುಷ್ಮಿತಾ ಬಿ.ಕೆ ಹಾಗೂ ಸಂಗಡಿ ಗರು ಪ್ರಾರ್ಥಿಸಿದರು. ಲಕ್ಷ್ಮಿ ಎನ್ .ಎಸ್ ಸ್ವಾಗತಿ ಸಿದರು ಮತ್ತು ಮಾರುತಿ ಮಣಿ ರೆಡ್ಡಿ ವಂದಿಸಿದರು.

## ಮಲೇಬೆನ್ನೂರು : ಮತದಾನದ ಬಗ್ಗೆ ಅರಿವು, ಪ್ರತಿಜ್ಞಾ ವಿಧಿ ಕಾರ್ಯಕ್ರಮ

ಮಲೇಬೆನ್ನೂರು, ಏ. 3 - ಹೊಳೆಸಿಗೆರೆ ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಸ್ವಿಪ್ ಯೋಜನೆಯಡಿಯಲ್ಲಿ ಸಾರ್ವಜನಿಕರಿಗೆ ಕಡ್ಡಾಯ ಮತದಾನದ ಬಗ್ಗೆ ಅರಿವು ಮೂಡಿಸುವ ಕಾರ್ಯಕ್ರಮದಲ್ಲಿ ಮತದಾರರಿಗೆ ಪ್ರತಿಜ್ಞಾ ವಿಧಿಯನ್ನು ತಾ. ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಎಂ. ಉಮ್ಮಣ್ಣ ಬೋಧಿಸಿದರು. ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ. ಚೇತನ್ ಹಾಗೂ ಆರೋಗ್ಯ ಕೇಂದ್ರದ ಸಿಬ್ಬಂದಿಯವರು ಮತ್ತು ಆಶಾ ಕಾರ್ಯ ಕರ್ತೆಯರು, ಊರಿನ ಗ್ರಾಮಸ್ಥರು ಭಾಗವಹಿಸಿದ್ದರು.






## ಹರಿಹರ ಸಹಾಯಕ ಚುನಾವಣಾಧಿಕಾರಿಗಳ ಕಚೇರಿಗೆ ಜಿಲ್ಲಾಧಿಕಾರಿ ಭೇಟಿ, ಪರಿಶೀಲನೆ

ದಾವಣಗೆರೆ, ಏ. 3- ಲೋಕಸಭಾ ಚುನಾವಣೆ ನಡೆಯುತ್ತಿದ್ದು ಏಪ್ರಿಲ್ 12 ರಿಂದ ನಾಮಪತ್ರ ಸಲ್ಲಿಕೆ ಅರಂಭವಾಗಲಿದೆ. ಎಲ್ಲಾ ವಿಧಾನಸಭಾ ಕ್ಷೇತ್ರಗಳಲ್ಲಿ ಸಹಾಯಕ ಚುನಾವಣಾಧಿಕಾರಿಗಳು ಕಾರ್ಯನಿರ್ವಹಿಸುತ್ತಿದ್ದು ಚುನಾವಣಾ ಸಿದ್ದತೆಯನ್ನು ಪರಿಶೀಲಿಸಲು ಬುಧವಾರ ಏ.3 ರಂದು ಹರಿಹರ ಸಹಾಯಕ ಚುನಾವಣಾಧಿಕಾರಿಗಳ ಕಚೇರಿಗೆ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಡಾ. ವೆಂಕಟೇಶ್ ಎಂ.ವಿ ಭೇಟಿ ನೀಡಿ ಪರಿಶೀಲಿಸಿದರು.

ಪ್ರತಿ ವಿಧಾನಸಭಾ ಕ್ಷೇತ್ರದಲ್ಲಿ ವಾರ್ ರೂಂ ಸ್ಥಾಪನೆ ಮಾಡುವ ಮೂಲಕ ಮಾದರಿ ನೀತಿ ಸಂಹಿತೆಯನ್ನು ಕಟ್ಟುನಿಟ್ಟಾಗಿ ಜಾರಿ ಮಾಡಲು ತಂಡಗಳನ್ನು ರಚಿಸಲಾಗಿದೆ ಮತ್ತು ಎಲ್ಲಾ ತಂಡಗಳ ಕಾರ್ಯವೈಖರಿಯನ್ನು ವೀಕ್ಷಣೆ ಮಾಡಲು ನಿಯಂತ್ರಣ ಕೊಠಡಿ ಸ್ಥಾಪಿಸಲಾಗಿದ್ದು ಜಿ.ಪಿ.ಎಸ್.ಟ್ರ್ಯಾಕಿಂಗ್ ಮಾಡಲಾಗುತ್ತಿದೆ ಮತ್ತು ಮತದಾರರು ಹಾಗೂ ಸಾರ್ವಜನಿಕರು ಸಿವಿಜಿಲ್ ಮೂಲಕ ಹಾಗೂ ಸಹಾಯವಾಣಿಗೆ ಕರೆ ಮಾಡಿ ನೀತಿ ಸಂಹಿತೆ ಉಲ್ಲಂಘನೆ ಮತ್ತು ಮಾಹಿತಿ ನೀಡಲು ಕರೆ ಮಾಡಿದಾಗ ನಿರ್ವಹಣೆಗಾಗಿ ಕೈಗೊಂಡಿರುವ ಕ್ರಮಗಳ ಬಗ್ಗೆ ಪರಿಶೀಲನೆ ನಡೆಸಿದ ಚುನಾವಣಾಧಿಕಾರಿಗಳು ಇವಿಎಂ ಸ್ಟ್ರಾಂಗ್ ರೂಂ ಪರಿಶೀಲನೆಯನ್ನು ನಡೆಸಿದರು.

ಈ ವೇಳೆ ಸಹಾಯಕ ಚುನಾವಣಾಧಿಕಾರಿ ಹಾಗೂ ಡಿಡಿಎಲ್‌ಆರ್ ಭಾವನಾ, ತಹಶೀಲ್ದಾರ್ ಗುರುಬಸವರಾಜ್ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

# ಕೇಂದ್ರದಿಂದ ಗ್ರಾಮಾಭಿವೃದ್ಧಿಗೆ ಕೋಟ್ಯಾಂತರ ರೂ. ಅನುದಾನ





**ಹದಡಿ ಜಿ.ಪಂ ವ್ಯಾಪ್ತಿಯಲ್ಲಿ ಬಿಜೆಪಿ ಅಭ್ಯರ್ಥಿ ಮತ ಪ್ರಚಾರದಲ್ಲಿ ಗಾಯತ್ರಿ ಸಿದ್ದೇಶ್ವರ**

ದಾವಣಗೆರೆ, ಏ.3- ಗ್ರಾಮಗಳು ಅಭಿವೃದ್ಧಿಯಾದರೆ ದೇಶ ಅಭಿವೃದ್ಧಿಯಾದಂತೆ ಎಂಬ ಕಲ್ಪನೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಗ್ರಾಮಾಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡಿದ್ದಾರೆ. ಪ್ರತಿಯೊಂದು ಗ್ರಾಮಕ್ಕೆ ರಸ್ತೆ, ಚರಂಡಿ, ಡಿಜಿಟಲ್ ಗ್ರಂಥಾಲಯ ಸೇರಿದಂತೆ ಮೂಲ ಸೌಕರ್ಯ ಕಲ್ಪಿಸಲು ಅನೇಕ ಯೋಜನೆಗಳನ್ನು ಜಾರಿಗೆ ತಂದಿದ್ದಾರೆ ಎಂದು ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಶ್ರೀಮತಿ ಗಾಯತ್ರಿ ಸಿದ್ದೇಶ್ವರ ತಿಳಿಸಿದರು.

ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಹದಡಿ ಜಿಲ್ಲಾ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳಲ್ಲಿ ಮತ ಬೇಟೆ ನಡೆಸಿ ಮಾತನಾಡಿದ ಅವರು, ಹದಡಿ ಗ್ರಾಮದಲ್ಲಿರುವ ಕೆರೆ ಅಭಿವೃದ್ಧಿಗೆ ಕ್ರಮ ಕೈಗೊಳ್ಳುವ ಜೊತೆಗೆ ವ್ಯಾಪ್ತಿಯ ಎಲ್ಲ ಗ್ರಾಮಗಳಿಗೆ ಮೂಲಭೂತ ಸೌಕರ್ಯ ಒದಗಿಸಲು ಯೋಜನೆ ರೂಪಿಸಲಾಗುತ್ತಿದ್ದು, ಜನ ನನಗೆ ಬಹುಮತ ನೀಡಿ ಗೆಲ್ಲಿಸಿ, ಸಂಸತ್ತಿಗೆ ಕಳುಹಿಸಬೇಕು ಎಂದು ಮನವಿ ಮಾಡಿದರು.

ಗ್ರಾಮಗಳ ಅಭಿವೃದ್ಧಿಗೆ ಕೇಂದ್ರ ಸರ್ಕಾರ ವಿವಿಧ ಯೋಜನೆಗಳಲ್ಲಿ ಕೋಟ್ಯಾಂತರ ರೂಪಾಯಿ ಅನುದಾನವನ್ನು ಗ್ರಾಮ ಪಂಚಾಯಿತಿಗಳಿಗೆ ನೀಡಿದೆ. ಮುಂದಿನ ದಿನಗಳಲ್ಲಿ ಪ್ರತಿ ಪಂಚಾಯಿ ಅಥವಾ ಮೂರು-ನಾಲ್ಕು ಪಂಚಾಯಿತಿ ಒಳಗೊಂಡು ಒಂದು ಕೌಶಲ್ಯ ಅಭಿವೃದ್ಧಿ ಕೇಂದ್ರ ತೆರೆಯಲು ಚಿಂತನೆ ಮಾಡಲಾಗುತ್ತಿದೆ. ಗ್ರಾಮೀಣ ಭಾಗದ ನಿರುದ್ಯೋಗಿ ಯುವಕರಿಗೆ ಕೌಶಲ್ಯ ತರಬೇತಿ ನೀಡುವ ಜೊತೆಗೆ ಸ್ವ-ಉದ್ಯೋಗಕ್ಕೆ ಇದು ವರವಾಗಲಿದೆ ಎಂದರು.

ಜಿ.ಎಂ.ಸಿದ್ದೇಶ್ವರ ಅವರು ಸಂಸದರಾಗಿದ್ದಾಗ ಅನೇಕ ಅಭಿವೃದ್ಧಿ ಕೆಲಸ ಕಾರ್ಯಗಳನ್ನು ಮಾಡಿದ್ದಾರೆ. ಮುಂದಿನ ದಿನಗಳಲ್ಲಿ ನಿಮ್ಮ ಮತ್ತು ನಿಮ್ಮ ಗ್ರಾಮಗಳ ಸೇವೆ ಮಾಡಲು ನನಗೆ ಅವಕಾಶ ಮಾಡಿಕೊಡಿ. 30 ವರ್ಷಗಳಿಂದ ನಮ್ಮ ಕುಟುಂಬ ನಿಮ್ಮ ಸೇವೆ ಮಾಡಿಕೊಂಡು ಬರುತ್ತಿದೆ. ಬಹಳ ಜನ ಕೇಂದ್ರದಲ್ಲಿ ಮೋದಿ ಜೀ ಪ್ರಧಾನಿ ಆಗಬೇಕು, ದಾವಣಗೆರೆಯಲ್ಲಿ ಗಾಯತ್ರಿ ಸಿದ್ದೇಶ್ವರ ಸಂಸದರಾಗಬೇಕು ಅಂತ ನಿರ್ಧಾರ ಮಾಡಿದ್ದಾರೆ. ಈಗಾಗಲೇ ನಮ್ಮ ಗೆಲುವು ನಿಶ್ಚಿತ ಎಂದರು.

ಶಿರಮಗೊಂಡನಹಳ್ಳಿ ಗ್ರಾಮದಲ್ಲಿ ಮಾಜಿ ಸಚಿವ ಎಸ್.ಎ.ರವೀಂದ್ರನಾಥ್ ನಿವಾಸಕ್ಕೆ ಭೇಟಿ ನೀಡಿ ಯೋಗಕ್ಷೇಮ ವಿಚಾರಿಸಿದರು. ಬಳಿಕ ರವೀಂದ್ರನಾಥ್ ಅವರ ಸಾರಥ್ಯದಲ್ಲಿ ಶಿರಮಗೊಂಡನಹಳ್ಳಿ ಸೇರಿದಂತೆ ಅಕ್ಕಪಕ್ಕದ ಗ್ರಾಮಗಳಲ್ಲಿ ಜೊತೆಯಾಗಿ ಪ್ರಚಾರ ನಡೆಸಿದರು.

ಮಾಜಿ ಸಚಿವ ಎಸ್.ಎ.ರವೀಂದ್ರನಾಥ್, ದೂಡಾ ಮಾಜಿ ಅಧ್ಯಕ್ಷ ಯಶವಂತರಾವ್ ಜಾಧವ್, ಮಾಜಿ ಮೇಯರ್ ಬಿ.ಜಿ.ಅಜಯ್ ಕುಮಾರ್, ಒಬಿಸಿ ಮೋರ್ಚಾ ರಾಜ್ಯ ಉಪಾಧ್ಯಕ್ಷ ರಾಜನಹಳ್ಳಿ ಶಿವಕುಮಾರ್, ಪಾಲಿಕೆ ಸದಸ್ಯೆ ವೀಣಾ ನಂಜಪ್ಪ, ಶ್ರೀನಿವಾಸ್, ಮಂಡಲ ಅಧ್ಯಕ್ಷ ಆನಂದ ರಾವ್ ಸಿಂಧೆ, ವೆಂಕಟೇಶ, ನೀಲಗುಂದ ರಾಜು, ಗುರುಪ್ರಸಾದ್, ಗ್ರಾಮ ಪಂಚಾಯತಿ ಮಾಜಿ ಸದಸ್ಯ ಬಸವರಾಜ್, ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಲಲಿತಮ್ಮ, ನೀಲಮ್ಮ ಮಹಾನಗರ ಪಾಲಿಕೆಯ ಸದಸ್ಯರು, ದಕ್ಷಿಣ ವಿಧಾನಸಭಾ ಕ್ಷೇತ್ರದ ಬಿಜೆಪಿ ಕಾರ್ಯಕರ್ತರು, ಬಿಜೆಪಿ ಮುಖಂಡರು ಇದ್ದರು.

**ಎಲ್ಲೆಲ್ಲಿ ಪ್ರಚಾರ:** ಹದಡಿ ಜಿಲ್ಲಾ ಪಂಚಾಯಿತಿ ವ್ಯಾಪ್ತಿಯ ಹಳ್ಳಿಗಳಾದ ಶಿರಮಗೊಂಡನಹಳ್ಳಿ, ನಾಗನೂರು, ಹೊಸ ಬಿಸಲೇರಿ, ಹಳೆ ಬಿಸಲೇರಿ, ದುರ್ಗಾಂಬಿಕಾ ಕ್ಯಾಂಪ್, ವಡೇರಹಳ್ಳಿ, ಬಟ್ಲಕಟ್ಟೆ, ಬಲ್ಲೂರು (ಕ್ಯಾಂಪ್), ಜಡಗನಹಳ್ಳಿ, ಶಿರಗಾನಹಳ್ಳಿ, ಹಳೇ ಕೋಳೇನಹಳ್ಳಿ, ಗಿರಿಯಾಪುರ, ಕೈದಾಳೆ (ಕ್ಯಾಂಪ್), ಹೊಸ ನಾಯ್ಕನಹಳ್ಳಿ, ಬುಳ್ಳಾಪುರ (ಕ್ಯಾಂಪ್), ಚಂದ್ರನಹಳ್ಳಿ, ಮರಳು ಸಿದ್ದೇಶ್ವರ ನಗರ, ಹನುಮಂತಾಪುರ, ಎಸ್.ಎ.ರವೀಂದ್ರನಾಥ್ ಬಡಾವಣೆ, ಹಳೇ ಬೆಳವನೂರು, ಜವಳಘಟ್ಟ, ತರಳಬಾಳು ನಗರ, ಮಹಾದೇವಿಪುರ ಗ್ರಾಮಗಳಲ್ಲಿ ಮತ ಬೇಟೆ ನಡೆಸಿದರು.

## ಸಾರ್ವಜನಿಕ ಪ್ರಕಟಣೆ


ನನ್ನ ಕಕ್ಷಿದಾರರಾದ ಉಮೇಶನಾಯ್ಕ ಬಿನ್ ರಾಮನಾಯ್ಕ ಇವರು ಜಿ. ವಿಜಯಕುಮಾರ್ ಬಿನ್ ಸುಬ್ಬರಾವ್ ಇವರಿಂದ ಕೆಳಕಂಡ ಷೆಡ್ಯೂಲ್‌ನಲ್ಲಿ ವಿವರಿಸಿರುವ ಖಾಲಿ ನಿವೇಶನವನ್ನು ಮುಂಗಡ ಹಣ ಪಾವತಿ ಮಾಡಿ ಕ್ರಯಕ್ಕೆ ಪಡೆಯಲು ನಿರ್ಧರಿಸಿರುತ್ತಾರೆ. ಆದ್ದರಿಂದ ಸದರಿ ಸ್ವತ್ತಿನ ಹಕ್ಕು ಬಾಧ್ಯತೆಗಳ ವಿಚಾರದಲ್ಲಿ ತಂಟೆ-ತಕರಾರುಗಳು ಇದ್ದಲ್ಲಿ 15 ದಿನಗಳ ಒಳಗಾಗಿ ಕೊನೆಯಲ್ಲಿ ಕಾಣಿಸಿದ ವಿಳಾಸಕ್ಕೆ ಸಂಪರ್ಕಿಸಲು ಸೂಚಿಸಿದೆ.

**ಷೆಡ್ಯೂಲ್ ವಿವರ**

ದಾವಣಗೆರೆ ತಾಲ್ಲೂಕು ಕಸಬಾ ಹೋಬಳಿ, ಆವರಗೆರೆ ಗ್ರಾಮದ ರಿ.ಸ.ನಂ : 193/2, 193/5, (ಶ್ರೀರಾಮನಗರ ಹತ್ತಿರ, ಎಸ್.ಎಸ್. ಹೈಟೆಕ್ ಆಸ್ಪತ್ರೆ ಹಿಂಭಾಗ)ರಲ್ಲಿ ವಿಂಗಡಿಸಿದ ಸೈಟುಗಳ ಪೈಕಿ ಸೈಟ್ ನಂ. 112, ಚಾಲ್ತಿ ಡೋರ್ ನಂ. 711/112, ಅಳತೆ 30x40 ಇದಕ್ಕೆ **ಚಕ್ಕುಬಂದಿ : ಪೂರ್ವಕ್ಕೆ :** ಸೈಟ್ ನಂ. 113, **ಪಶ್ಚಿಮಕ್ಕೆ :** ಸೈಟ್ ನಂ. 111, **ಉತ್ತರಕ್ಕೆ :** ಸೈಟ್ ನಂ. 57, **ದಕ್ಷಿಣಕ್ಕೆ :** 9 ಮೀಟರ್ ಅಗಲದ ರಸ್ತೆ.

ಸಂಪರ್ಕಿಸಬೇಕಾದ ವಿಳಾಸ : **ಶ್ರೀಮತಿ ಕೆ.ಬಿ. ಶೈಲಶ್ರೀ**, ವಕೀಲರು,
#1963, ಕೆರನಳ್ಳಿ ಬಸಣ್ಣ, ಇಂಡೋರ್ ಸ್ಟೇಡಿಯಂ ಹತ್ತಿರ,
ಕುಂದುವಾಡ ಕೆರೆ ರೋಡ್, ಎಸ್.ಎಸ್.ಲೇಔಟ್, ಎ ಬ್ಲಾಕ್,
ದಾವಣಗೆರೆ. **ಮೊ : 94486 58502, 08192 463361**

# ಕುಂದೂರಿನಲ್ಲಿ ಇಂದು ಆಂಜನೇಯ ಸ್ವಾಮಿ ಬ್ರಹ್ಮರಥೋತ್ಸವ



ಹೊನ್ನಾಳಿ ತಾಲ್ಲೂಕಿನ ಕುಂದೂರು ಗ್ರಾಮದ ಮೇಜರ್ ಮುಜರಾಯಿ ಇಲಾಖೆಯ ಶ್ರೀ ಆಂಜನೇಯ ಸ್ವಾಮಿ ಬ್ರಹ್ಮರಥೋತ್ಸವ ಇಂದು ಬೆಳಿಗ್ಗೆ 11.45ರಿಂದ ಮಧ್ಯಾಹ್ನ 12.45ರವರೆಗೆ ಜರುಗುವುದು.

ನಾಳೆ ಶುಕ್ರವಾರ ಬೆಳಗಿನ ಜಾವ 4ಕ್ಕೆ ಶ್ರೀ ಸ್ವಾಮಿಯ ಮಹಾ ರಥೋತ್ಸವ, ಮಧ್ಯಾಹ್ನ 3.30ರಿಂದ ಸಂಜೆ 6.30ರವರೆಗೆ ಸ್ವಾಮಿಯ ಮುಳ್ಳೋತ್ಸವ, ಕಾರಣಿಕ ಮಹೋತ್ಸವ, ದಿನಾಂಕ 6ರ ಶನಿವಾರ ಬೆಳಗ್ಗೆ 10.30 ಮತ್ತು ರಾತ್ರಿ 8ಕ್ಕೆ ಓಕುಳಿ, ಅಡ್ಡಪಲ್ಲಕ್ಕಿ ಉತ್ಸವ ಕಾರ್ಯಕ್ರಮಗಳು ನೆರವೇರಲಿವೆ ಎಂದು ದೇವಸ್ಥಾನ ಸಮಿತಿಯ ಅಧ್ಯಕ್ಷ ಸಿ.ಕೆ. ಶೇಖರಪ್ಪ ತಿಳಿಸಿದ್ದಾರೆ.

ರಥೋತ್ಸವಕ್ಕೆ ಮೊದಲು ಸಾಂಪ್ರದಾಯಿಕವಾಗಿ ಕಂಕಣ ಧಾರಣೆ, ದೂಳಿ ಉತ್ಸವ, ನಾಗ ಸರ್ಪೋತ್ಸವ, ಜಿಗರಿ ವಾಹನೋತ್ಸವ, ಗಜ (ಆನೆ) ವಾಹನ ಅಂಬಾರಿ ಉತ್ಸವ ಇತ್ಯಾದಿ ಆಚರಣೆಗಳನ್ನು ಪಾರಂಪರಿಕ ಶ್ರದ್ಧಾ-ಭಕ್ತಿಗಳಿಂದ ನೆರವೇರಿಸಲಾಗುವುದು ಎಂದು ಅವರು ವಿವರಿಸಿದರು.

ಗ್ರಾಮದ ಮಾರುತಿ ಯುವಕ ಸಂಘದ ದಾಸೋಹ ಸಮಿತಿ ವತಿಯಿಂದ ಮತ್ತು ಕುಂದೂರು ಗ್ರಾಮಸ್ಥರು ಹಾಗೂ ಸುತ್ತ-ಮುತ್ತಲಿನ ಗ್ರಾಮಗಳ ಸದ್ಭಕ್ತ ವೃಂದದವರಿಂದ ಅನ್ನ ದಾಸೋಹ ಸೇವೆ ಇರುತ್ತದೆ. ದಿನಾಂಕ 6 ಮತ್ತು 7ರಂದು ಬಯಲು ಜಂಗಿ ಕುಸ್ತಿಗಳು ನಡೆಯಲಿವೆ.

# ಲೋಕಸಭಾ ಚುನಾವಣೆಗೆ ಬಿಎಸ್‌ಪಿಯಿಂದ ಅಭ್ಯರ್ಥಿ ಕಣಕ್ಕೆ

ದಾವಣಗೆರೆ, ಏ.3- ಲೋಕಸಭಾ ಚುನಾವಣೆಗೆ ಬಹುಜನ ಸಮಾಜ ಪಕ್ಷದಿಂದ ಅಭ್ಯರ್ಥಿಯನ್ನು ಕಣಕ್ಕಳಿಸಲಾಗುವುದು ಎಂದು ಪಕ್ಷದ ಜಿಲ್ಲಾಧ್ಯಕ್ಷ ಡಿ. ಹನುಮಂತಪ್ಪ ಹೇಳಿದ್ದಾರೆ.

ಬುಧವಾರ ಪತ್ರಿಕಾಗೋಷ್ಠಿಯಲ್ಲಿ ಈ ವಿಷಯ ತಿಳಿಸಿದ ಅವರು, ಕಾಂಗ್ರೆಸ್ ಹಾಗೂ ಬಿಜೆಪಿ ಎರಡೂ ರಾಷ್ಟ್ರೀಯ ಪಕ್ಷಗಳು ದಲಿತರಿಗೆ, ಹಿಂದುಳಿದವರಿಗೆ ಅನ್ಯಾಯ ಮಾಡುತ್ತಿವೆ. ನಮ್ಮ ಪಕ್ಷವು ಹಿಂದುಳಿದವರು, ದಲಿತರ ಹಾಗೂ ಅಲ್ಪಸಂಖ್ಯಾತರ ಪರವಾಗಿ ದನಿ ಎತ್ತುವ ಪಕ್ಷವಾಗಿದೆ. ಈ ಹಿನ್ನೆಲೆಯಲ್ಲಿ ಎಲ್ಲರೂ ಬಹುಜನ ಸಮಾಜ ಪಕ್ಷವನ್ನು ಬೆಂಬಲಿಸುವಂತೆ ಮನವಿ ಮಾಡಿದ್ದಾರೆ.

ತಾವೂ ಸೇರಿದಂತೆ ಯಶೋಧ ಪ್ರಕಾಶ್ ಟಿಕೆಟ್‌ಗಾಗಿ ಅರ್ಜಿ ಸಲ್ಲಿಸಿದ್ದೇವೆ. ಈಗಾಗಲೇ ಎಲ್ಲಾ ವಿಧಾನಸಭಾ ಕ್ಷೇತ್ರಗಳಲ್ಲೂ ಪ್ರವಾಸ ಮಾಡುತ್ತಿದ್ದೇವೆ. ಜಿಲ್ಲೆಯಲ್ಲಿ ಹಿಂದುಳಿದ ವರ್ಗಕ್ಕೆ ರಾಜಕೀಯವಾಗಿ ಅನ್ಯಾಯವಾಗುತ್ತಿದೆ ಎಂದು ಆರೋಪಿಸಿದರು. ಸುದ್ದಿಗೋಷ್ಠಿಯಲ್ಲಿ ಯಶೋಧ ಪ್ರಕಾಶ್, ಎಂ. ಚಂದ್ರಪ್ಪ ಇದ್ದರು.

# ಅಸುರಕ್ಷಿತ ಆಹಾರ ತಯಾರಿಕೆ ಹೋಟೆಲ್, ಬೀದಿ ಬದಿ ವ್ಯಾಪಾರಿಗಳ ಮೇಲೆ ಕ್ರಮ

ಮಲೇಬೆನ್ನೂರು, ಏ.3- ಮಲೇಬೆನ್ನೂರು ಪಟ್ಟಣದಲ್ಲಿ ವಿಷಪೂರಿತ ಹಾಗೂ ಅಸುರಕ್ಷತೆಯಿಂದ ತಯಾರಿಸಿದ ಪಾನಿಪುರಿ ಸೇವನೆಯಿಂದ ಹಲವಾರು ಮಕ್ಕಳಿಗೆ ವಾಂತಿ, ಬೇದಿ ಹಾಗೂ ಜ್ವರ ಕಂಡು ಬಂದಿದ್ದು, ಅಸುರಕ್ಷಿತೆಯಿಂದ ತಯಾರಿಸಿದ ಹಾಗೂ ಕಲಬೆರಕೆ ಆಹಾರ ತಯಾರಿಕೆ ನಿಷೇಧಿಸಲಾಗಿದೆ.

ಪುರಸಭಾ ವ್ಯಾಪ್ತಿಯಲ್ಲಿನ ಹೋಟೆಲ್, ಬೀದಿ ಬದಿ ಹೋಟೆಲ್, ಬೇಕರಿ ಹಾಗೂ ಇತರೆ ಆಹಾರ ತಯಾರಿಸಿ ಮಾರಾಟ ಮಾಡುವವರು ಆಹಾರ ಮತ್ತು ಗುಣಮಟ್ಟ ಕಾಯಿದೆ ಅನ್ವಯ ನಿಯಮಗಳ ಪಾಲನೆ ಮಾಡದಿದ್ದಲ್ಲಿ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುತ್ತದೆ ಮತ್ತು ಹೋಟೆಲ್ ಮಾಡುವವರು ಕಾಯಿದೆಯನ್ವಯ ಪರವಾನಗಿ ಪಡೆದುಕೊಳ್ಳಬೇಕೆಂದು ಮುಖ್ಯಾಧಿಕಾರಿ ತಿಳಿಸಿದ್ದಾರೆ.

# ಬಿಜೆಪಿಗೆ ಸೇರಿದ ಮಾಜಿ ಶಾಸಕಗೆ 140 ಕೋಟಿ ರೂ. ದಂಡದ ನೋಟಿಸ್

ಇಂದೋರ್, ಏ. 3 – ಕಾಂಗ್ರೆಸ್‌ನಿಂದ ಬಿಜೆಪಿಗೆ ಪಕ್ಷಾಂತರ ಮಾಡಿದ ಮಾಜಿ ಶಾಸಕಗೆ ಮಧ್ಯ ಪ್ರದೇಶದ ಇಂದೋರ್ ಜಿಲ್ಲಾಡಳಿತ 140.60 ಕೋಟಿ ರೂ.ಗಳ ದಂಡದ ನೋಟಿಸ್ ಕಳಿಸಿದೆ.

ಅಕ್ರಮ ಗಣಿಗಾರಿಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾಜಿ ಶಾಸಕ ಸಂಜಯ್ ಶುಕ್ಲ ಅವರಿಗೆ ನೋಟಿಸ್ ಕಳಿಸಲಾಗಿದೆ. ಬರೋಲಿ ಹಳ್ಳಿಯ 5.50 ಹೆಕ್ಟೇರ್ ಹಾಗೂ 3.40 ಹೆಕ್ಟೇರ್‌ನ ಪ್ರತ್ಯೇಕ ಪ್ರದೇಶಗಳಲ್ಲಿ ಅಕ್ರಮ ಗಣಿಗಾರಿಕೆ ನಡೆಸಲಾಗಿದೆ ಎಂದು ಗಣಿಗಾರಿಕೆ ಇಲಾಖೆ ತಿಳಿಸಿದೆ. ಅಕ್ರಮ ಗಣಿಗಾರಿಕೆಗಾಗಿ 140.60 ಕೋಟಿ ರೂ. ದಂಡ ವಿಧಿಸಲು ಶುಕ್ಲಾ ಹಾಗೂ ಇತರೆ ಮೂವರಿಗೆ ನೋಟಿಸ್ ಕಳಿಸಲಾಗಿದೆ ಎಂದು ಅಧಿಕಾರಿಗಳು ಹೇಳಿದ್ದಾರೆ.

# ನಗರ ದುಗ್ಗಮ್ಮನ ಜಾತ್ರೆ : ಇಂದು-ನಾಳೆ ಸಾಂಸ್ಕೃತಿಕ ಕಾರ್ಯಕ್ರಮಗಳು



ದುಗ್ಗಮ್ಮ ಜಾತ್ರೆ ಪ್ರಯುಕ್ತ ದೇವಸ್ಥಾನದ ಮುಂಭಾಗದಲ್ಲಿ ಇಂದು ಮತ್ತು ನಾಳೆ ರಾತ್ರಿ 8 ರಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ. ನಾಡಿನ ವಿವಿಧ ಭಾಗಗಳ ಪ್ರಸಿದ್ಧ ಕಲಾವಿದರ ತಂಡ ಈ ಕಾರ್ಯಕ್ರಮವನ್ನು ನಡೆಸಿಕೊಡಲಿದೆ.

# ನಗರದಲ್ಲಿ ಇಂದು 'ಗಾಂಧೀಜಿ ಕಂಡ ರಾಮರಾಜ್ಯ' ಚಿಂತನೆ ಮತ್ತು ಸಂವಾದ

ಕರುಣಾ ಜೀವ ಕಲ್ಯಾಣ ಟ್ರಸ್ಟ್ ಕಚೇರಿಯಲ್ಲಿ ಇಂದು ಸಂಜೆ 6 ರಿಂದ 7.15ರವರೆಗೆ 'ಗಾಂಧೀಜಿ ಕಂಡ ರಾಮರಾಜ್ಯ' ವಿಷಯವಾಗಿ ಚಿಂತನೆ ಮತ್ತು ಸಂವಾದ ನಡೆಯಲಿದೆ. ಚಿಂತಕರು: ಉಪನ್ಯಾಸಕರಾದ ಶ್ರೀಮತಿ ಮಂಜುಳಾ ಬಿ. ಸಂಗಮೇಶ್, ಭಾಗವಹಿಸುವವರು: ಮಲ್ಲಾಬಾದಿ ಬಸವರಾಜ್, ಶಿವನಕೆರೆ ಬಸವ ಲಿಂಗಪ್ಪ, ಪ್ರೊ. ಎಂ. ಬಸವರಾಜ್, ಎಸ್. ಗುರುಮೂರ್ತಿ, ಆರ್.ಆರ್. ಕುಸುಗೂರು.

# ನಗರದಲ್ಲಿ ಇಂದು ಪಶುಸಂಗೋಪನಾ ತರಬೇತಿ

ಪಶು ಪಾಲನಾ ಮತ್ತು ವೈದ್ಯಕೀಯ ಸೇವಾ ಇಲಾಖೆಯ ವತಿಯಿಂದ ನಗರದ ಪಶು ಆಸ್ಪತ್ರೆ ಅವರಣದಲ್ಲಿ ರೈತರಿಗೆ ಪಶುಸಂಗೋಪನಾ ಚಟುವಟಿಕೆಗಳ ತರಬೇತಿ ಇಂದು ನಡೆಯಲಿದೆ.

ವಿವರಕ್ಕೆ ಸಂಪರ್ಕಿಸುವ ದೂರವಾಣಿ : 08192-233787.

# ಬಾಲ್ಯ ವಿವಾಹ ಪ್ರಕರಣಗಳ ತಡೆಗೆ ನ್ಯಾ. ರಾಜೇಶ್ವರಿ ಶ್ಲಾಘನೆ



ದಾವಣಗೆರೆ, ಏ.3- ಕಳೆದ 2 ತಿಂಗಳಲ್ಲಿ 25 ಬಾಲ್ಯ ವಿವಾಹ ಪ್ರಕರಣಗಳಲ್ಲಿ, 22 ಬಾಲ್ಯ ವಿವಾಹಗಳು ನಡೆಯುವುದನ್ನು ತಡೆದಿರುವುದಕ್ಕೆ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಶ್ರೀಮತಿ ರಾಜೇಶ್ವರಿ ಎನ್. ಹೆಗಡೆ ಶ್ಲಾಘಿಸಿದರು.

ನಗರದ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ಸಭಾಂಗಣದಲ್ಲಿ ಬುಧವಾರ ನಡೆದ ಮಾಸಿಕ ಸಭೆಯಲ್ಲಿ ಅವರು ಮಾತನಾಡಿದರು.

ಬಾಲ್ಯ ವಿವಾಹ ತಡೆಯಲು ಎಲ್ಲ ಅಧಿಕಾರಿಗಳಿಗೂ ಹಕ್ಕು ಇದೆ. ಇಂತಹ ಪ್ರಕರಣಗಳು ಕಂಡುಬಂದಲ್ಲಿ ನ್ಯಾಯಾಲಯಕ್ಕೆ ಮಾಹಿತಿ ನೀಡಿ, ಇಂಜಕ್ಷನ್ ಆರ್ಡರ್ ಪಡೆದು ಬಾಲ್ಯ ವಿವಾಹ ನಿಲ್ಲಿಸಬಹುದು ಎಂದು ಹೇಳಿದರು.

ಬಾಲ್ಯ ವಿವಾಹ ಪತ್ತೆಹಚ್ಚಲು ಅಂಗನವಾಡಿ ಹಾಗೂ ಆಶಾ ಕಾರ್ಯಕರ್ತೆಯರ ಪಾತ್ರ ಬಹಳ ಮುಖ್ಯವಾಗಿದೆ. ಈ ನಿಟ್ಟಿನಲ್ಲಿ ಬಾಲ್ಯ ವಿವಾಹ ವಿಚಾರ ಗೊತ್ತಿದ್ದರೂ ತಿಳಿಸದೇ ಇದ್ದಲ್ಲಿ ಆಶಾ ಕಾರ್ಯಕರ್ತೆಯರ ಮೇಲೆ ಕಾನೂನು ಕ್ರಮ ಜರುಗಿಸಬೇಕು ಎಂದು ತಿಳಿಸಿದರು.

18 ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಹಿಳೆ ಗರ್ಭ ಧರಿಸಿದ ವಿಚಾರ ಕಂಡು ಬಂದ ಕೂಡಲೇ ಸಂಬಂಧಿಸಿದ ಎಲ್ಲ ಅಧಿಕಾರಿಗಳಿಗೆ ಮೇಲ್ ಕಳಿಸುವಂತೆ ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.

16 ವರ್ಷದ ಬಾಲ್ಯ ವಿವಾಹಿತ ಮಹಿಳೆ ಮಗುವಿಗೆ ಜನ್ಮ ನೀಡಿದ ಪ್ರಕರಣಕ್ಕೆ ಸಂಬಂಧಿಸಿದಂತೆ, ತಾಯಿ ಮಗುವನ್ನು ಸುರಕ್ಷಿತವಾಗಿ ಮನೆಗೆ ಕಳುಹಿಸಿ, ತದ ನಂತರ ಪೋಕ್ಸೋ ಪ್ರಕರಣ ದಾಖಲಿಸುವಂತೆ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶೆ ರಾಜೇಶ್ವರಿ ಎನ್. ಹೆಗಡೆ ಅವರು ಅಧಿಕಾರಿಗಳಿಗೆ ಸಲಹೆ ನೀಡಿದರು.

ಇದೇ ವೇಳೆ ವೇಶ್ಯಾವಾಟಿಕೆ ನಿಯಂತ್ರಣಕ್ಕೆ ಸಂಬಂಧಿಸಿದಂತೆ ಪೊಲೀಸ್ ಇಲಾಖೆಯಿಂದ ಜನವರಿ-24 ರಿಂದ ಮಾರ್ಚ್ ವರೆಗೆ 3 ಪ್ರಕರಣಗಳು ದಾಖಲಾಗಿವೆ ಎಂದು ಹೆಚ್ಚುವರಿ ಪೊಲೀಸ್ ಅಧೀಕ್ಷಕ ವಿಜಯಕುಮಾರ್ ಎಂ. ಸಂತೋಷ್ ತಿಳಿಸಿದರು.

ಹೆಗಡೆ ನಗರದಲ್ಲಿನ ಮಕ್ಕಳ ವಿದ್ಯಾಭ್ಯಾಸ ಕ್ಕಾಗಿ ಶಾಲಾ ಕಟ್ಟಡವನ್ನು ನಿರ್ಮಿಸುವಂತೆ ತಿಳಿಸಿದಾಗ ಅದಕ್ಕೆ ಜಿ.ಪಂ. ಸಿಇಓ ಸುರೇಶ್ ಬಿ.ಇಟ್ನಾಳ್ ಪ್ರತಿಕ್ರಿಯಿಸಿ ಮಕ್ಕಳ ವಿದ್ಯಾಭ್ಯಾಸಕ್ಕಾಗಿ ಹೊಸ ಶಾಲಾ ಕಟ್ಟಡವನ್ನು ನಿರ್ಮಿಸಲಾಗುತ್ತದೆ ಎಂದು ಹೇಳಿದರು.

**ಪೋಕ್ಸೋ ಕಾಯಿದೆ:** ಪೋಕ್ಸೋ ಪ್ರಕರಣದಲ್ಲಿ ಸಂತ್ರಸ್ಥರಾಗುವವರಿಗೆ ತಕ್ಷಣವೇ ಸೂಕ್ತ ಕ್ರಮ ಕೈಗೊಂಡು ಪುನರ್ವಸತಿ ಕಲ್ಪಿಸುವ ಕೆಲಸ ಮಾಡಬೇಕು ಮತ್ತು ಈ ಕಾಯಿದೆಯಡಿ ಪ್ರಕರಣ ದಾಖಲಿಸುವಾಗ ಸಂತ್ರಸ್ಥರು ಇದ್ದ ಕಡೆಯೇ ಹೋಗಿ ಮಾಹಿತಿ ಹಾಗೂ ಹೇಳಿಕೆ ಪಡೆಯಬೇಕು. ಆದರೆ ಅವರನ್ನು ಬಾಲಮಂದಿರದಲ್ಲಿ ಇಟ್ಟುಕೊಳ್ಳಬಾರದು ಎಂದು ಸೂಚಿಸಿದರು.

**ನಿರ್ಗತಿಕ ಕುಟೀರದ ಬದಲಾಗಿ ಬಾಲ ಮಂದಿರಕ್ಕೆ ದಾಖಲಿಸಿ:** ಭಿಕ್ಷಾಟನೆಯಲ್ಲಿ ತೊಡಗಿದ ಮಕ್ಕಳನ್ನು ಖಾಸಗಿ ಅನುದಾನಿತ ಕುಟೀರಕ್ಕೆ ಸೇರಿಸುವ ಬದಲು ಸರ್ಕಾರಿ ಬಾಲಕರ ಬಾಲ ಮಂದಿರದಲ್ಲಿ ದಾಖಲಿಸುವ ಮೂಲಕ ಅವರ ಮುಂದಿನ ಭವಿಷ್ಯ ಹಾಗೂ ಶೈಕ್ಷಣಿಕ ವ್ಯವಸ್ಥೆಗೆ ಪೂರಕ ವಾತಾವರಣ ಕಲ್ಪಿಸುವಂತೆ ತಿಳಿಸಿದರು ಮತ್ತು ಸಮಾಜ ಕಲ್ಯಾಣ ಇಲಾಖೆ ಹಾಸ್ಟೆಲ್‌ನಲ್ಲಿ ಊಟದ ಗುಣಮಟ್ಟದ ಬಗ್ಗೆ ಪರಿಶೀಲಿಸುವಂತೆ ಸಮಾಜ ಕಲ್ಯಾಣಾಧಿಕಾರಿಗೆ ಹೇಳಿದರು.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ .ಮ. ಕರೆಣ್ಣನವರ್ ಮಾತನಾಡಿ, ಕಂದಾಯ ಇಲಾಖೆಯಲ್ಲಿ ಮರಣ ಪ್ರಮಾಣ ಪತ್ರ ಇಲ್ಲವೆಂಬ ಕಾರಣಕ್ಕಾಗಿ ಪೌತಿ ಖಾತೆ ಬದಲಾವಣೆ ಮಾಡುತ್ತಿಲ್ಲ. ಅದನ್ನು ಪರಿಶೀಲಿಸಿ ಮಾಹಿತಿ ನೀಡಲು ತಿಳಿಸಿದರು.

ಸರ್ಕಾರಿ ಸೌಲಭ್ಯಗಳನ್ನು ಜನರಿಗೆ ಪರಿಚಯಿಸುವ ದೃಷ್ಟಿಯಿಂದ ಎಲ್ಲ ಇಲಾಖೆಯವರು ಸರ್ಕಾರಿ ಯೋಜನೆಗಳ ಬಗ್ಗೆ ಅರಿವು ಮೂಡಿಸುವ ಕಾರ್ಯ ಮಾಡಬೇಕು ಎಂದು ಹೇಳಿದರು.

ಜಿ.ಪಂ. ಸಿಇಒ ಸುರೇಶ್.ಬಿ. ಇಟ್ನಾಳ್, ಅಪರ ಜಿಲ್ಲಾಧಿಕಾರಿ ಸೈಯ್ಯದಾ ಆಫ್ರೀನ್ ಭಾನು.ಎಸ್.ಬಳ್ಳಾರಿ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪನಿರ್ದೇಶಕರಾದ ವಾಸಂತಿ ಉಪ್ಪಾರ್, ಡಿಹೆಚ್‌ಓ ಡಾ. ಷಣ್ಮುಖಪ್ಪ, ಆರ್‌ಸಿಹೆಚ್ ಅಧಿಕಾರಿ ರೇಣುಕಾರಾಧ್ಯ, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಲ್. ಎಚ್.ಅರುಣ ಕುಮಾರ್ ಹಾಗೂ ಇತರರಿದ್ದರು.

# ಸಾಮಾಜಿಕ ನ್ಯಾಯ ಒದಗಿಸುವ ಪಕ್ಷ ಗೆಲ್ಲಿಸಿ

## ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ದಿನೇಶ್ ಶೆಟ್ಟಿ




ದಾವಣಗೆರೆ, ಏ.3- ಸಂವಿಧಾನ ಬದಲಿಸುವ ಅಜೆಂಡಾ ಇಟ್ಟುಕೊಂಡಿರುವ ಬಿಜೆಪಿ ಪಕ್ಷವನ್ನು ಅಧಿಕಾರದಿಂದ ದೂರವಿಟ್ಟು, ಸಾಮಾಜಿಕ ನ್ಯಾಯದಡಿ ಅಧಿಕಾರ ನೀಡುವ ಕಾಂಗ್ರೆಸ್ ಪಕ್ಷವನ್ನು ಅಧಿಕಾರಕ್ಕೆ ತರಬೇಕೆಂದು ಕಾಂಗ್ರೆಸ್‌ನ ಜಿಲ್ಲಾ ಪ್ರಧಾನ ಕಾರ್ಯದರ್ಶಿ ದಿನೇಶ್ ಕೆ. ಶೆಟ್ಟಿ ಹೇಳಿದರು.

ನಗರದ ಕಾಂಗ್ರೆಸ್ ಕಚೇರಿಯಲ್ಲಿ ಮಂಗಳವಾರ ಕಾಂಗ್ರೆಸ್ ಪಕ್ಷದ ಸಾಮಾಜಿಕ ನ್ಯಾಯ ಸಮಿತಿ ವತಿಯಿಂದ ಹಮ್ಮಿಕೊಂಡಿದ್ದ ಪದಾಧಿಕಾರಿಗಳ ಸಭೆಯಲ್ಲಿ ಅವರು ಮಾತನಾಡಿದರು.

ದೇಶದಲ್ಲಿ ಕೋಮುವಾದ ಬಿಂಬಿಸುವ ಜತೆಗೆ ಸಂವಿಧಾನ ಬದಲಿಸಲು ಹೊರಟಿರುವ ಬಿಜೆಪಿಯೂ ಸರ್ವಾಧಿಕಾರ ಧೋರಣೆ ತೋರುತ್ತಿದೆ. ಆದ್ದರಿಂದ ಇಂತಹ ಸರ್ಕಾರವನ್ನು ಬದಲಿಸಿ ಜಾತ್ಯತೀತ ನಿಲುವು ಹೊಂದಿದ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸುವಂತೆ ಮನವಿ ಮಾಡಿಕೊಂಡರು.

ಕಾಂಗ್ರೆಸ್‌ನ ಸಾಮಾಜಿಕ ನ್ಯಾಯ ಸಮಿತಿಯ ಜಿಲ್ಲಾಧ್ಯಕ್ಷ ವಕೀಲ ಎಸ್. ಪರಮೇಶ್ ಮಾತನಾಡಿ, ಪ್ರಭಾ ಮಲ್ಲಿಕಾರ್ಜುನ್ ಅವರು ಎಸ್.ಎಸ್.ಕೇರ್ ಟ್ರಸ್ಟ್ ವತಿಯಿಂದ ಜನಸಾಮಾನ್ಯರಿಗೆ ಅನುಕೂಲವಾಗುವ ದೃಷ್ಟಿಯಿಂದ ಬಡ ಮಕ್ಕಳಿಗೆ ಶಿಷ್ಯವೇತನ, ಉಚಿತ ಆರೋಗ್ಯ ಶಿಬಿರ ಮತ್ತು ಅನೇಕ ಸಾಮಾಜಿಕ ಕಾರ್ಯಗಳನ್ನು ಮಾಡಿದ್ದಾರೆ. ಆದ್ದರಿಂದ ಪ್ರಭಾ ಮಲ್ಲಿಕಾರ್ಜುನ್ ಅವರನ್ನು ಹೆಚ್ಚಿನ ಮತಗಳಿಂದ ಗೆಲ್ಲಿಸುವಂತೆ ಶ್ರಮ ವಹಿಸೋಣ ಎಂದು ಹೇಳಿದರು.

ವಕೀಲ ಬಿ.ಎಂ. ಹನುಮಂತಪ್ಪ, ಕಂಚಿಕೇರಿ ಮಂಜಪ್ಪ, ಡೋಲಿ ಚಂದ್ರು, ಡಾ. ಪ್ರಭಾ ಮಲ್ಲಿಕಾರ್ಜುನ್ ಅಭಿಮಾನಿ ಬಳಗದ ಶುಭಮಂಗಳ, ಮಹಿಳಾ ಕಾಂಗ್ರೆಸ್‌ನ ಮಂಗಳಮ್ಮ, ಮಹ್ಮದ್ ಇಸ್ಮಾಯಿಲ್, ಸಾಮಾಜಿಕ ನ್ಯಾಯ ಸಮಿತಿಯ ಪ್ರಧಾನ ಕಾರ್ಯದರ್ಶಿ ಕವಿತಾ ಚಂದ್ರಶೇಖರ್, ಅರುಣಕುಮಾರ್, ಮಹ್ಮದ್ ಇಮ್ತಿಯಾಜ್, ಜಿಲ್ಲಾ ಉಪಾಧ್ಯಕ್ಷ ತಿಪ್ಪೇಶಪ್ಪ, ಮಂಜಪ್ಪ ಮತ್ತಿತರರಿದ್ದರು.

# 1.41 ಕೋಟಿ ಮೌಲ್ಯದ ನಗದು, ಮದ್ಯ, ವಿವಿಧ ವಸ್ತುಗಳ ವಶ

## ನೀತಿ ಸಂಹಿತೆ ಉಲ್ಲಂಘನೆ



ದಾವಣಗೆರೆ, ಏ. 3 - ಲೋಕಸಭಾ ಚುನಾವಣೆಯ ನೀತಿ ಸಂಹಿತೆ ಹಿನ್ನೆಲೆಯಲ್ಲಿ ಮಾರ್ಚ್ 16 ರಿಂದ ಏಪ್ರಿಲ್ 3 ರ ವರೆಗೆ ಚುನಾವಣಾ ಮಾದರಿ ನೀತಿ ಸಂಹಿತೆ ಉಲ್ಲಂಘನೆಯಡಿ ಕ್ರಮ ಕೈಗೊಳ್ಳಲಾಗಿದ್ದು, ಜಿಲ್ಲೆಯಲ್ಲಿ ಇದುವರೆಗೆ ರೂ.1,41,91,569 ಮೌಲ್ಯದಷ್ಟು ನಗದು, ವಿವಿಧ ವಸ್ತುಗಳು ಹಾಗೂ ಮದ್ಯವನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಡಾ. ವೆಂಕಟೇಶ್ ಎಂ.ವಿ ತಿಳಿಸಿದ್ದಾರೆ.

ಜಿಲ್ಲೆಯಲ್ಲಿ ಚುನಾವಣಾ ಮಾದರಿ ನೀತಿ ಸಂಹಿತೆಯನ್ನು ಅನುಷ್ಠಾನ ಮಾಡಲು ಹದ್ದಿನ ಕಣ್ಣಿಡಲಾಗಿದೆ. 21 ಫ್ಲೈಯಿಂಗ್ ಸ್ಕ್ವಾಡ್‌ಗಳು, 32 ಚೆಕ್‌ಪೋಸ್ಟ್‌ಗಳಲ್ಲಿ 24x7 ಮಾದರಿಯಲ್ಲಿ ದಿನದ ಮೂರು ಪಾಳಿಯಲ್ಲಿ ಚುನಾವಣಾ ಸಿಬ್ಬಂದಿಗಳು ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಇದಲ್ಲದೇ 9 ಅಬಕಾರಿ ಜಾಗೃತ ದಳದವರು ಕಾರ್ಯನಿರ್ವಹಿಸುತ್ತಿದ್ದು, ಆಯಾ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಗಸ್ತು ನಡೆಸಲಾಗುತ್ತಿದೆ.

ವಶಪಡಿಸಿಕೊಂಡ ನಗದು ಮೌಲ್ಯದಲ್ಲಿ ಎಫ್.ಎಸ್.ಟಿ.ಯಿಂದ ರೂ.75,62,100 ಗಳನ್ನು ವಶಕ್ಕೆ ಪಡೆದು ಪರಿಶೀಲನೆಗೆ ಆದಾಯ ತೆರಿಗೆ ಇಲಾಖೆಗೆ ಒಪ್ಪಿಸಲಾಗಿದೆ.

ಚೆಕ್‌ಪೋಸ್ಟ್‌ಗಳಲ್ಲಿ ತಪಾಸಣೆ ಮಾಡಿದಾಗ ದಾಖಲೆ ಇಲ್ಲದೇ ನಗದು ಕೊಂಡೊಯ್ಯುತ್ತಿದ್ದ ವೇಳೆ 51,86,023 ರೂ.ಗಳನ್ನು ವಶಕ್ಕೆ ಪಡೆಯಲಾಗಿದ್ದು ಇದರಲ್ಲಿ ದಾಖಲೆ ನೀಡಲಾದ ರೂ.15,65,780 ಗಳನ್ನು ವಾಪಸ್ ಮರಳಿಸಲಾಗಿದೆ. ಉಳಿದ ರೂ.36,20,243 ಗಳನ್ನು ಖಜಾನೆಯಲ್ಲಿರಿಸಲಾಗಿದೆ.

ಇದೇ ಅವಧಿಯಲ್ಲಿ ಒಟ್ಟು ರೂ.2,90,466 ಮೌಲ್ಯದ 673.61 ಲೀಟರ್ ಮದ್ಯ ವಶಪಡಿಸಿಕೊಳ್ಳಲಾಗಿದೆ. ಇದರಲ್ಲಿ 387.18 ಲೀ ಅಬಕಾರಿ, 286.43 ಲೀ ಪೊಲೀಸ್ ಇಲಾಖೆಯಿಂದ ವಶಪಡಿಸಿಕೊಳ್ಳಲಾಗಿದೆ. ರೂ.10,52,980 ಮೌಲ್ಯದ ವಿವಿಧ ವಸ್ತುಗಳನ್ನು ವಶಕ್ಕೆ ಪಡೆಯಲಾಗಿದೆ.

ಪಡೆದ ವಸ್ತುಗಳಲ್ಲಿ 4630 ಕೆ.ಜಿ.ಅಕ್ಕಿ, 17 ಮೊಬೈಲ್, 400 ಟವರ್ ಫ್ಯಾನ್, 56.36 ಗ್ರಾಂ ಚಿನ್ನ, 579 ಸ್ಯಾರಿ, 51 ಕುಪ್ಪಸ, 300 ಜೀನ್ಸ್ ಪ್ಯಾಂಟ್‌ಗಳು ಸೇರಿವೆ. ಅಬಕಾರಿ ಕಾಯಿದೆ ಉಲ್ಲಂಘನೆಯಡಿ ಎಫ್.ಎಸ್.ಟಿ.ಯಿಂದ 2, ಪೊಲೀಸ್‌ನಿಂದ 175 ಮತ್ತು ಇತರೆ ಕಾಯಿದೆಯಡಿ 1 ಪ್ರಕರಣವನ್ನು ದಾಖಲಿಸಲಾಗಿದೆ ಎಂದು ತಿಳಿಸಿದ್ದಾರೆ.

# ವೀರಶೈವ ಮಹಾಸಭೆಗೆ ಚುನಾವಣೆ ಪ್ರಕ್ರಿಯೆ ಆರಂಭ

## ಮೇ 20 ಸದಸ್ಯತ್ವ ಪಡೆಯಲು ಕೊನೆ ದಿನ

ಬೆಂಗಳೂರು,ಏ. 3- ಅಖಿಲ ಭಾರತ ವೀರಶೈವ ಮಹಾಸಭೆ ಮತ್ತು ಎಲ್ಲ ಘಟಕಗಳಿಗೆ ಚುನಾವಣಾ ಪ್ರಕ್ರಿಯೆಗಳು ಬರುವ ಜುಲೈ ತಿಂಗಳಲ್ಲಿ ಪ್ರಾರಂಭವಾಗಲಿವೆ. ಇನ್ನೂ ಸದಸ್ಯರಾಗದ ಸಮಾಜ ಬಾಂಧವರು ಮೇ 20ರ ಒಳಗೆ ಸದಸ್ಯತ್ವ ಪಡೆದರೆ, ಚುನಾವಣೆಯ ಸ್ಪರ್ಧಿಸಲು ಹಾಗೂ ಮತ ಚಲಾಯಿಸಲು ಅವ ಕಾಶ ದೊರೆಯುತ್ತದೆ ಎಂದು ಮಹಾಸಭಾದ ಕಾರ್ಯದರ್ಶಿ ಹೆಚ್.ಎಂ.ರೇಣುಕ ಪ್ರಸನ್ನ ತಿಳಿಸಿದ್ದಾರೆ.

ಮೊದಲ ಹಂತದಲ್ಲಿ ಗ್ರಾಮ ಪಂಚಾಯತಿ, ಪುರಸಭೆ, ನಗರಸಭೆ, ವಿಧಾನಸಭಾ, ಮಹಾನಗರ ಪಾಲಿಕೆ, ತಾಲ್ಲೂಕು ಮತ್ತು ಜಿಲ್ಲಾ ಘಟಕಗಳಿಗೆ ಆಗಸ್ಟ್ ತಿಂಗಳಿನಲ್ಲಿ ಎರಡನೇ ಹಂತದಲ್ಲಿ ರಾಜ್ಯ ಘಟಕಗಳು ಹಾಗೂ ಮಹಾಸಭೆಯ ಕಾರ್ಯಕಾರಿ ಸಮಿತಿ ಸದಸ್ಯ ಸ್ಥಾನಗಳಿಗೆ ಮತ್ತು ಸೆಪ್ಟೆಂಬರ್ ತಿಂಗಳಿನಲ್ಲಿ ಮೂರನೇ ಹಂತದಲ್ಲಿ ಮಹಾಸಭಾ ಅಧ್ಯಕ್ಷ ಸ್ಥಾನಕ್ಕೆ ಚುನಾವಣೆಗಳು ನಡೆಯಲಿವೆ. ಈ ಮೂರೂ ಹಂತಗಳ ಚುನಾವಣಾ ವೇಳಾಪಟ್ಟಿಯನ್ನು ಮೇ ತಿಂಗಳಿನಲ್ಲಿ ಪ್ರಕಟಿಸಲಾಗುವುದು ಎಂದು ಅವರು ತಿಳಿಸಿದ್ದಾರೆ.

# ನಗರದಲ್ಲಿ ಇಂದು ಮತದಾನ ಜಾಗೃತಿ

ಲೋಕಸಭಾ ಚುನಾವಣೆ ಅಂಗವಾಗಿ ಸ್ವೀಪ್ ಸಮಿತಿಯಿಂದ ಸಮಾಜ ಕಲ್ಯಾಣ, ಪರಿಶಿಷ್ಟ ವರ್ಗಗಳ ಕಲ್ಯಾಣ, ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗಳಿಂದ ಇಂದು ಬೆಳಗ್ಗೆ 10 ಕ್ಕೆ ರೈಲ್ವೆ ನಿಲ್ದಾಣದ ಆವರಣದಲ್ಲಿ ವಿದ್ಯಾರ್ಥಿಗಳಿಂದ ರಂಗೋಲಿ ಬಿಡಿಸುವ ಮೂಲಕ ಮತದಾನ ಜಾಗೃತಿ ಮೂಡಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ಸ್ವೀಪ್ ಸಮಿತಿ ಅಧ್ಯಕ್ಷರಾದ ಸುರೇಶ್ ಬಿ.ಇಟ್ನಾಳ್ ತಿಳಿಸಿದ್ದಾರೆ.

# ಎಸ್‌ಯುಸಿಐ ಆಯ್ಕೆಗೆ ಮನವಿ

ದಾವಣಗೆರೆ, ಏ. 3- ಲೋಕಸಭಾ ಚುನಾವಣೆಯಲ್ಲಿ ಜನಪರ ಚಳವಳಿಯಲ್ಲಿ ನಿರತರಾಗಿರುವ ಎಸ್‌ಯುಸಿಐ ಪಕ್ಷದ ಅಭ್ಯರ್ಥಿಗಳನ್ನು ಆಯ್ಕೆ ಮಾಡುವಂತೆ ಪಕ್ಷದ ರಾಜ್ಯ ಮುಖಂಡರಾದ ಬಿ.ಆರ್. ಅಪರ್ಣಾ ಕರೆ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಧಿಕಾರದಲ್ಲಿರುವಾಗ ಜನರ ಕೆಂಗಣ್ಣಿಗೆ ಗುರಿಯಾಗುವ ಬಂಡವಾಳಶಾಹಿ ಪಕ್ಷಗಳು ಹೊಸ ಮುಖಗಳೊಂದಿಗೆ ಹೊಸ ಗ್ಯಾರಂಟಿಗಳೊಂದಿಗೆ ಮತ್ತೆ ಜನರ ಬಳಿಗೆ ಬರುತ್ತಿವೆ. ಇನ್ನೊಂದೆಡೆ ದುಡಿಯುವ ಜನರ, ರೈತ, ಕಾರ್ಮಿಕರ ಸಮಸ್ಯೆಗಳ ಪರಿಹಾರಕ್ಕೆ ದಿನ ನಿತ್ಯದ ಹೋರಾಟ ಸಿದ್ಧಪಡಿಸುವ ಎಸ್‌ಯುಸಿಐ ಕಮ್ಯುನಿಸ್ಟ್ ಪಕ್ಷ ಕೂಡ ಈ ಚುನಾವಣೆಯಲ್ಲಿ ಏಕಾಂಗಿಯಾಗಿ ಹೋರಾಟಕ್ಕಿಳಿಯಲಿದೆ ಎಂದರು.

ದೇಶದ 19 ರಾಜ್ಯ ಮತ್ತು ಮೂರು ಕೇಂದ್ರಾಡಳಿತ ಪ್ರದೇಶಗಳಲ್ಲಿ ನಮ್ಮ ಪಕ್ಷವು 151 ಕ್ಷೇತ್ರಗಳಲ್ಲಿ ಅಭ್ಯರ್ಥಿಗಳನ್ನು ಕಣಕ್ಕಿಳಿಸಲು ತೀರ್ಮಾನಿಸಿದೆ. ಕರ್ನಾಟಕದಲ್ಲಿ ಈ ಬಾರಿ ಒಟ್ಟು 19 ಕ್ಷೇತ್ರಗಳಲ್ಲಿ ಸ್ಪರ್ಧೆಗೆ ನಿರ್ಧರಿಸಿದೆ ಎಂದು ಹೇಳಿದರು.

ಈ ಚುನಾವಣೆಯು ಬಂಡವಾಳಶಾಹಿಯ ಮತ್ತು ಕಾರ್ಮಿಕರ ನಡುವಿನ, ಶೋಷಕರು ಮತ್ತು ಶೋಷಿತರ ನಡುವಿನ ಸಮರವಾಗಿದೆ. ಭಾರತದ ಶೋಷಿತ, ದುಡಿಯುವ ವರ್ಗದ, ಬಡ ರೈತರ ಪರ್ಯಾಯವಾಗಿ ದೇಶದ ಎಡ ಪಕ್ಷಗಳು ಒಂದು ಒಕ್ಕೂಟದ ಮೂಲಕ ಜನ ಹೋರಾಟಗಳನ್ನು ಕಟ್ಟಬೇಕಾಗಿತ್ತು. ಚುನಾವಣೆಗಳು ಪರಿಹಾರವಲ್ಲ. ಸಮಾಜವಾದವೇ ನೈಜ ಪರಿಹಾರ ಎಂಬ ಪ್ರಚಾರವನ್ನು ಕೈಗೆತ್ತಿಕೊಳ್ಳಬೇಕಿತ್ತು. ದುರಂತವೆಂದರೆ ಸಿಪಿಐ, ಸಿಪಿಐಎಂ ನಂತರ ಎಡವಾದಿ ಪಕ್ಷಗಳ ನಿಲುವು ಎಂಪಿ ಸೀಟುಗಳ ಆಸೆಗೆ ಇಂಡಿಯಾ ಮೈತ್ರಿ ಕೂಟವನ್ನು ಸೇರಿವೆ ಎಂದರು.

ಇಂತಹ ಪರಿಸ್ಥಿತಿಯಲ್ಲಿ ಎಸ್‌ಯುಸಿಐ ಪಕ್ಷ ಶೋಷಿತ ಜನರ ನೈಜ ಹೋರಾಟದ ಪರ್ಯಾಯವಾಗಿ ತನ್ನೆಲ್ಲಾ ಸಾಮರ್ಥ್ಯದೊಂದಿಗೆ ಚುನಾವಣೆಯಲ್ಲಿ ಸ್ಪರ್ಧಿಸಲು ಮುಂದಾಗಿದೆ ಎಂದು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಅಣಬೇರು ತಿಪ್ಪೇಸ್ವಾಮಿ, ಮಂಜುನಾಥ ಕೈದಾಳೆ, ಭಾರತಿ, ಟಿ.ವಿ.ಎಸ್. ರಾಜು, ಶಿವಾಜಿರಾವ್, ಮಂಜುನಾಥ್ ಕುಕ್ಕುವಾಡ, ಪರಶುರಾಮ್, ಕವಿತಾ, ಮಹಾಂತೇಶ್ ಉಪಸ್ಥಿತರಿದ್ದರು.

# ನಗರದಲ್ಲಿ ಇಂದು ವಿಚಾರ ಸಂಕಿರಣ

ಧ.ರಾ.ಮ. ವಿಜ್ಞಾನ ಕಾಲೇಜಿನ ವತಿಯಿಂದ ಇಂದು ಬೆಳಿಗ್ಗೆ 10 ಗಂಟೆಗೆ ಕಾಲೇಜಿನ ಶಾಮನೂರು ಶಿವಶಂಕರಪ್ಪ ಸಭಾಂಗಣದಲ್ಲಿ ರಾಷ್ಟ್ರೀಯ ವಿಚಾರ ಸಂಕಿರಣ ಹಮ್ಮಿಕೊಳ್ಳಲಾಗಿದೆ. ಜಾನಪದ ವಿದ್ವಾಂಸ ಡಾ. ಎಂ.ಜಿ. ಈಶ್ವರಪ್ಪ ಕಾರ್ಯಕ್ರಮ ಉದ್ಘಾಟಿಸುವರು. ಪ್ರಾಚಾರ್ಯರಾದ ಡಾ. ಹೆಚ್. ವನಜಾ ಅಧ್ಯಕ್ಷತೆ ವಹಿಸಲಿದ್ದಾರೆ. ನವದೆಹಲಿಯ ಜೆಎನ್‌ಯು ಪ್ರಾಧ್ಯಾಪಕ ಡಾ. ಅರುಣ್ ಬಿ. ಖರಾಟ್ ವಿಶೇಷ ಅಹ್ವಾನಿತರಾಗಿ ಆಗಮಿಸಲಿದ್ದಾರೆ. ಕಾಂಗ್ರೆಸ್ ಪಕ್ಷದ ಸಾಮಾಜಿಕ ನ್ಯಾಯ ಸಮಿತಿ

# ಬಾಕ್ಸರ್ ವಿಜೇಂದರ್ ಸಿಂಗ್ ಬಿಜೆಪಿಗೆ

ನವದೆಹಲಿ, ಏ. 3 – ಒಲಂಪಿಕ್‌ನಲ್ಲಿ ಭಾರತದ ಪರವಾಗಿ ಬಾಕ್ಸಿಂಗ್ ವಿಭಾಗದಲ್ಲಿ ಮೊದಲ ಪದಕ ಪಡೆದಿದ್ದ ವಿಜೇಂದರ್ ಸಿಂಗ್ ಅವರು ಕಾಂಗ್ರೆಸ್‌ನಿಂದ ಬಿಜೆಪಿಗೆ ಸೇರ್ಪಡೆಯಾಗಿದ್ದಾರೆ. ರೈತರ ಪ್ರತಿಭಟನೆ ಹಾಗೂ ಕುಸ್ತಿ ಪಟುಗಳ ಪ್ರತಿಭಟನೆ ಸಂದರ್ಭದಲ್ಲಿ ಸಿಂಗ್ ಅವರು ಬಿಜೆಪಿಯ ಕಟು ಟೀಕಾಕಾರರಾಗಿದ್ದರು. ಹಲವು ನಾಯಕರು ಲೋಕಸಭಾ ಚುನಾವಣೆ ಸಂದರ್ಭದಲ್ಲಿ ಪಕ್ಷಾಂತರ ಮಾಡಿದ್ದಾರೆ. ಆದರೆ, ಸಿಂಗ್ ಬಿಜೆಪಿಗೆ ಸೇರಿರುವುದು ಹಲವರಿಗೆ ಅಚ್ಚರಿ ತಂದಿದೆ. 2019ರ ಲೋಕಸಭಾ ಚುನಾವಣೆ ಸಂದರ್ಭದಲ್ಲಿ ಸಿಂಗ್ ದಕ್ಷಿಣ ದೆಹಲಿ ಕ್ಷೇತ್ರದಲ್ಲಿ ಕಾಂಗ್ರೆಸ್ ಟಿಕೆಟ್‌ನಿಂದ ಸ್ಪರ್ಧಿಸಿ ಪರಾಭವಗೊಂಡಿದ್ದರು. ಈ ಬಾರಿ ಅವರನ್ನು ಮಥುರಾದಿಂದ ಕಣಕ್ಕಿಳಿಸಲಾಗುತ್ತದೆ ಎಂಬ ಮಾತುಗಳು ಕೇಳಿ ಬಂದಿದ್ದವು.

# ಟೋಲ್ ಮೇಲೆ ಗುಂಡು ತಪ್ಪಿಸಿಕೊಳ್ಳುವಾಗ ಬಾವಿಯಲ್ಲಿ ಬಿದ್ದು ಇಬ್ಬರ ಸಾವು

ದಾಟಿಯಾ (ಮಧ್ಯಪ್ರದೇಶ), ಏ. 3 – ಮಧ್ಯಪ್ರದೇಶದ ದಾಟಿಯಾ ಜಿಲ್ಲೆಯ ಟೋಲ್ ಪ್ಲಾಜಾ ಒಂದರಲ್ಲಿ ದುಷ್ಕರ್ಮಿಗಳು ಗುಂಡು ಹಾರಿಸಿದ್ದಾರೆ. ಆತಂಕಗೊಂಡು ಪಲಾಯನ ಮಾಡುವಾಗ ಇಬ್ಬರು ಸಿಬ್ಬಂದಿ ಹೊಲದ ಬಾವಿಯಲ್ಲಿ ಬಿದ್ದು ಸಾವನ್ನಪ್ಪಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ದುಷ್ಕರ್ಮಿಗಳು ಸುಮಾರು 15 ನಿಮಿಷಗಳ ಕಾಲ 30 ಸುತ್ತುಗಳವರೆಗೆ ಗುಂಡು ಹಾರಿಸಿದ್ದಾರೆ. ದುಷ್ಕರ್ಮಿಗಳ ಹುಡುಕಾಟ ನಡೆದಿದೆ.

## ಓದುಗರ ಪತ್ರ

### ನೆರಳು ಕೊಡುವ ಮರಗಳ ನೇತಾರರ ಮನನ



ಮಾನ್ಯರೇ, ನಗರದಲ್ಲಿ ಬಿಸಿಲಿನ ಪ್ರಖರತೆಯು ಉತ್ತರ ಕರ್ನಾಟಕದ ಜಿಲ್ಲೆಗಳನ್ನು ಮೀರಿಸುವಂತಿದೆ. ಈಗಾಗಲೇ ಅಭಿವೃದ್ಧಿಯ ಹೆಸರಿನಲ್ಲಿ ನೆರಳು ಕೊಡುತ್ತಿದ್ದ ನೂರಾರು ಮರಗಳನ್ನು ಕಡಿದಿದ್ದಾರೆ.

ಹಿಂದೆ ದಿ. ಕಾಂ. ಪಂಪಾಪತಿ ಅವರು ತಮ್ಮ ದೂರದೃಷ್ಟಿಯಿಂದ ನೆಟ್ಟಿದ್ದ ಗಿಡಗಳು, ಬೃಹತ್ ಮರಗಳಾಗಿ ನೆರಳು ಸೇವೆ ನೀಡುತ್ತಿರುವುದನ್ನು ಇಂದು ಕೆಲವೇ ಬಡಾವಣೆಗಳಲ್ಲಿ ಕಾಣಬಹುದು. ಲಾಯರ್ ರಸ್ತೆ, ಪಿ.ಜೆ ಬಡಾವಣೆ, ಎಂ.ಸಿ. ಮೋದಿ ರಸ್ತೆ, ಪೆವಿಲಿಯನ್ ರಸ್ತೆ, ನಿಟ್ಟುವಳ್ಳಿ ರಸ್ತೆ ಸೇರಿದಂತೆ ಹಲವೆಡೆ ಕಾಣಬಹುದು. ಅಂದು ಸಾವಿರಾರು ಗಿಡಗಳನ್ನು ನೆಟ್ಟ ಪುಣ್ಯಾತ್ಮರು ಈಗ ಇರದೇ ಇರಬಹುದು. ಆದರೆ, ಅವರು ಮಾಡಿದಂತಹ ಅಭಿವೃದ್ಧಿ ಯೋಜನೆಗಳು, ಜನಪರ ಮತ್ತು ಪರಿಸರ ಸ್ನೇಹಿ ಕೆಲಸಗಳು ಇಂದಿಗೂ ಸಹ ಪ್ರತಿಯೋರ್ವರ ಮನದಲ್ಲಿ ಚಿರಸ್ಥಾಯಿಯಾಗಿವೆ.

**- ಡಿ. ಮುರುಗೇಶ್**, ದಾವಣಗೆರೆ.

### ಬೇಸಿಗೆಯಲ್ಲಿ ಪ್ರಾಣಿ ಪಕ್ಷಿಗಳಿಗೆ ನೀರು ಕೊಡಿ

**ಬಾನಾಡಿಗಳಿಗೆ ಬಾಯಾರಿದೆ...!**




ಮಾನ್ಯರೇ,

ಬೇಸಿಗೆ ಕಾಲ ಶುರುವಾಗಿದೆ. ಮನುಷ್ಯರಾದ ನಮಗೆ ಈ ಸೆಕೆ, ಉರಿಬಿಸಿಲು, ಬಾಯಾರಿಕೆ ಇವೆಲ್ಲದರ ದಾಹ ಸಹಿಸಿಕೊಳ್ಳಲು ಆಗುತ್ತಿಲ್ಲ. ಹಾಗಾದರೆ ಪ್ರಾಣಿ, ಪಕ್ಷಿಗಳ ಗತಿಯೇನು? ಒಮ್ಮೆ ಯೋಚಿಸಿ.

ಅದೆಷ್ಟೋ ಪಕ್ಷಿಗಳು ಬಿಸಿಲ ಬೇಗೆ ತಾಳಲಾರದೆ ಸಾಯುತ್ತಿವೆ. ಹಾಗಾಗಿ ನಿಮ್ಮ ಮನೆಯ ವರಾಂಡದಲ್ಲಿ, ಗಾರ್ಡನ್‌ನಲ್ಲಿ ಇಲ್ಲವೇ ಮನೆಯ ತಾರಸಿಯ ಮೇಲೆ ಒಂದು ಅಗಲ ಪಾತ್ರೆಯಲ್ಲಿ ನೀರು ತುಂಬಿಸಿಟ್ಟರೆ ಪಕ್ಷಿಗಳಿಗೆ ಅನುಕೂಲವಾಗುತ್ತವೆ. 'ಬದುಕಿ- ಬದುಕಿಸಿ'

**- ವಿಕಾಸ್ ಕೆ.,**
ಅಡವಿಮಲ್ಲಿನಕೇರಿ, ಹೂವಿನಹಡಗಲಿ ತಾಲ್ಲೂಕು.

# ಅಧ್ಯಾಪಕರುಗಳಿಗೆ 'ಪ್ರೋಸೆಸ್ ಮೈನಿಂಗ್' ತರಬೇತಿ



ದಾವಣಗೆರೆ, ಏ. 3 - ನಗರದ ಜಿಎಮ್ ತಾಂತ್ರಿಕ ಮಹಾವಿದ್ಯಾಲಯದಲ್ಲಿ ಕಂಪ್ಯೂಟರ್ ಸೈನ್ಸ್ ಅಂಡ್ ಇಂಜಿನಿಯರಿಂಗ್ ವಿಭಾಗದ ಸೆಮಿನಾರ್ ಹಾಲ್‌ನಲ್ಲಿ ಮೂರು ದಿನಗಳ 'ಪ್ರೊಸೆಸ್ ಮೈನಿಂಗ್' ತರಬೇತಿ ಕಾರ್ಯಕ್ರಮದ ಉದ್ಘಾಟನೆಯನ್ನು ನೆರವೇರಿಸಲಾಯಿತು.

ಈ ತರಬೇತಿ ಕಾರ್ಯಕ್ರಮವನ್ನು ಐಸಿಟಿ ಅಕ್ಯಾಡೆಮಿ ಸಂಸ್ಥೆಯ ಸಹಯೋಗದಲ್ಲಿ ಆಯೋಜಿಸಲಾಗಿತ್ತು.

ತರಬೇತಿ ಕಾರ್ಯಕ್ರಮವನ್ನು ಐಸಿಟಿ ಅಕ್ಯಾಡೆಮಿ (ಬೆಂಗಳೂರು) ಇವರ ಸಹಯೋಗದಲ್ಲಿ ಆಯೋಜಿಸಿದ್ದು, ಸಂಪನ್ಮೂಲ ವ್ಯಕ್ತಿಯಾಗಿ ನುರಿತ ತರಬೇತುದಾರ ಜಿ.ಸಿ. ಮಂಜುನಾಥ್ ನಡೆಸಿಕೊಡುವರೆಂದು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಂಪ್ಯೂಟರ್ ಸೈನ್ಸ್ ಅಂಡ್ ಇಂಜಿನಿಯರಿಂಗ್ ವಿಭಾಗದ ಮುಖ್ಯಸ್ಥ ಡಾ. ಬಿ.ಎನ್. ವೀರಪ್ಪ ತಿಳಿಸಿದರು.

ಕಾರ್ಯಕ್ರಮದ ಉದ್ಘಾಟನೆಯನ್ನು ನೆರವೇರಿಸಿ ಮಾತನಾಡಿದ ತರಬೇತಿ ಮತ್ತು ಉದ್ಯೋಗ ವಿಭಾಗದ ನಿರ್ದೇಶಕ ಟಿ.ಆರ್. ತೇಜಸ್ವಿ ಕಟ್ಟಿಮನಿ ಮಾತನಾಡಿ, ಈ ತರಬೇತಿ ಕಾರ್ಯಕ್ರಮದ ಮೂಲಕ, ನಮ್ಮ ಅಧ್ಯಾಪಕರು ಪ್ರೋಸೆಸ್ ಮೈನಿಂಗ್ ಪ್ರಕ್ರಿಯೆಯ ತತ್ವಗಳು ಮತ್ತು ತಂತ್ರಗಳ ಬಗ್ಗೆ ಆಳವಾದ ತಿಳುವಳಿಕೆಯನ್ನು ಪಡೆಯುತ್ತಾರೆ ಎಂದು ತಿಳಿಸಿದರು.

ಕಾರ್ಯಕ್ರಮದ ಸ್ವಾಗತ ಭಾಷಣವನ್ನು ಕಂಪ್ಯೂಟರ್ ಸೈನ್ಸ್ ಅಂಡ್ ಇಂಜಿನಿಯರಿಂಗ್ ವಿಭಾಗದ ವಿದ್ಯಾರ್ಥಿನಿ ಕು. ಚಂದನ ನೆರವೇರಿಸಿಕೊಟ್ಟರು. ವಂದನಾರ್ಪಣೆಯನ್ನು ವಿದ್ಯಾರ್ಥಿನಿ ಕು. ಅಕ್ಷತ ನಡೆಸಿಕೊಟ್ಟರು.

ಕಾರ್ಯಕ್ರಮದಲ್ಲಿ ಐಸಿಟಿ ಅಕ್ಯಾಡೆಮಿ ದಾವಣಗೆರೆ ವಿಭಾಗದ ಸಂಯೋಜಕ ಜಕಾವುಲ್ಲ, ಕಂಪ್ಯೂಟರ್ ಸೈನ್ಸ್ ಅಂಡ್ ಇಂಜಿನಿಯರಿಂಗ್ ವಿಭಾಗದ ಪ್ರಧ್ಯಾಪಕರುಗಳಾದ ಪ್ರೊ. ಜಿ. ನಂದಿತ ಮತ್ತು ಪ್ರೊ. ಬಿ.ಪಿ. ದೀಪು ಹಾಗೂ ಇತರರು ಪಾಲ್ಗೊಂಡಿದ್ದರು.

# ಮಹಿಳೆಯರಿಗೆ ಸ್ಥಾನಮಾನ ಕೊಡಿಸಿದ್ದು ಎಸ್ಸೆಸ್

## ಚುನಾವಣೆ ಹಿನ್ನೆಲೆ : ಅವರಿಗೆ ಅಗೌರವ ತರುವ ಹೇಳಿಕೆ - ಮಹಿಳಾ ಕಾಂಗ್ರೆಸ್




ದಾವಣಗೆರೆ, ಏ.3- ಹಿರಿಯ ಶಾಸಕ ಶಾಮ ನೂರು ಶಿವಶಂಕರಪ್ಪ ಅವರಿಗೆ ಮಹಿಳೆಯರ ಮೇಲೆ ಅಪಾರ ಗೌರವವಿದೆ. ಜಿಲ್ಲೆಯಲ್ಲಿ ಮಹಿಳೆಯರಿಗೆ ಸೂಕ್ತ ಸ್ಥಾನ ಮಾನ ಕೊಡಿಸಿದ ಕೀರ್ತಿ ಅವರಿಗೆ ಸಲ್ಲುತ್ತದೆ ಎಂದು ಜಿಲ್ಲಾ ಮಹಿಳಾ ಕಾಂಗ್ರೆಸ್ ಅಧ್ಯಕ್ಷರಾದ ಶ್ರೀಮತಿ ಅನಿತಾ ಬಾಯಿ ಮಾಲತೇಶರಾವ್ ಜಾಧವ್ ಹೇಳಿದ್ದಾರೆ.

ಬುಧವಾರ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಶಿವಶಂಕರಪ್ಪನವರು ತಮ್ಮ ಮನೆಯ ಸೊಸೆಯನ್ನು ಲೋಕಸಭಾ ಕ್ಷೇತ್ರಕ್ಕೆ ಸ್ಪರ್ಧಿಸಲು ಅನುವು ಮಾಡಿಕೊಟ್ಟಿದ್ದಾರೆ. ಅಂತವರು ಮಹಿಳೆಯರನ್ನು ಅಗೌರವದಿಂದ ಕಾಣುತ್ತಾರೆ ಎನ್ನುವುದು ತಪ್ಪು ಕಲ್ಪನೆ ಎಂದರು.

ಮಹಿಳೆಯರ ಬಗ್ಗೆ ಅಗೌರವ ನೀಡುವಂತಹ ಹೇಳಿಕೆಯನ್ನು ಅವರು ನೀಡಿಯೇ ಇಲ್ಲ. ಚುನಾವಣೆ ಹಿನ್ನೆಲೆಯಲ್ಲಿ ಅವರಿಗೆ ಅಗೌರವ ಉಂಟು ಮಾಡುವ ಉದ್ದೇಶದಿಂದ ಅವರ ಹೇಳಿಕೆಯನ್ನು ಬದಲಿಸಿ ಪ್ರಚಾರ ಮಾಡಲಾಗುತ್ತಿದೆ ಎಂದು ಹೇಳಿದರು.

ಬಿಜೆಪಿಯವರು ಅನಗತ್ಯವಾಗಿ ಶಿವಶಂಕರಪ್ಪ ನವರ ವಿರುದ್ಧ ಪ್ರತಿಭಟನೆ ನಡೆಸುತ್ತಿದ್ದಾರೆ. ಜಿಲ್ಲಾ ಮಹಿಳಾ ಕಾಂಗ್ರೆಸ್‌ನಿಂದ ಬಿಜೆಪಿ ಸಂಸದ ಜಿ.ಎಂ. ಸಿದ್ದೇಶ್ವರ ಅವರು ನಡೆಸಿದ ಭ್ರಷ್ಟಚಾರ ಹಗರಣ ಗಳ ಬಗ್ಗೆ ಎಲ್ಲಾ ವೃತ್ತ ಹಾಗೂ ವಾರ್ಡ್‌ಗಳಲ್ಲಿ ಪ್ರತಿಭಟನೆ ನಡೆಸಲಾಗುವುದು ಎಂದರು.

ಪ ತ್ರಿ ಕಾ ಗೋ ಷ್ಠಿ ಯ ಲ್ಲಿ ನಾಗರತ್ನಮ್ಮ, ಅಶ್ವಿನಿ, ಮಂಗಳ, ಕವಿತಾ ಚಂದ್ರಶೇಖರ್, ರಾಜೇಶ್ವರಿ, ಕಾವ್ಯ, ಉಮಾ ಕುಮಾರ್, ಸಲ್ಮಾ ಉಪಸ್ಥಿತರಿದ್ದರು.

# ಉಪ್ಪಿಟ್ಟು-ಚಹಾ ಮಾಡಿದ ಬಿಜೆಪಿ ನಾಯಕಿಯರು

## ಎಸ್ಸೆಸ್ ಹೇಳಿಕೆ ಖಂಡಿಸಿ 'ಅಡುಗೆಗೂ ಸಿದ್ಧ- ಜನಸೇವೆಗೂ ಬದ್ಧ' ಅಭಿಯಾನ



ದಾವಣಗೆರೆ, ಏ. 3- ಇತ್ತಿಚೇಗೆ ಲೋಕಸಭಾ ಚುನಾವಣಾ ಸಮರದಲ್ಲಿ ಮಹಿಳೆ ಅಡುಗೆ ಮಾಡಲು ಲಾಯಕ್ಕು ಎಂಬ ಹೇಳಿಕೆ ನೀಡಿದ್ದ ಶಾಸಕ ಶಾಮನೂರು ಶಿವಶಂಕರಪ್ಪ ಅವರ ನಡೆಯನ್ನು ಖಂಡಿಸಿ, ಜಿಲ್ಲಾ ಬಿಜೆಪಿ ಮಹಿಳಾ ವಿಭಾಗದಿಂದ 'ಅಡುಗೆಗೂ ಸಿದ್ಧ- ಜನಸೇವೆಗೂ ಬದ್ಧ' ಎಂಬ ಅಭಿಯಾನವು ನಗರದ ಜಯದೇವ ವೃತ್ತದಲ್ಲಿ ಬುಧವಾರ ನಡೆಯಿತು.

ಬಿಜೆಪಿಯ ಮಹಿಳಾ ಕಾರ್ಯಕರ್ತೆಯರು ಮತ್ತು ಮುಖಂಡರುಗಳು ಉಪ್ಪಿಟ್ಟು ಮತ್ತು ಟೀ ತಯಾರಿಸುವ ಮೂಲಕ ಅಭಿಯಾನಕ್ಕೆ ಚಾಲನೆ ನೀಡಿದರು.

ಜನಸೇವೆಗೂ ಬದ್ಧ, ಮತ್ತೊಮ್ಮೆ ಮೋದಿ ಎನ್ನುವ ಜೈಕಾರ ಕೂಗುವ ಜತೆಗೆ ಮಹಿಳೆ ಯಾವುದಕ್ಕೂ ಕಡಿಮೆ ಇಲ್ಲ ಎನ್ನುವ ಸಂದೇಶ ಸಾರುತ್ತಿದ್ದರು.

ಈ ವೇಳೆ ಸಿದ್ದೇಶ್ವರ ಪುತ್ರಿ ಜಿ.ಎಸ್. ಅಶ್ವಿನಿ ಅವರು ಮಾತನಾಡಿ, ಕಾಂಗ್ರೆಸ್ ಹಿಂದಿನಿಂದಲೂ ಈ ತರಹ ವಿವಾದಾತ್ಮಕ ಹೇಳಿಕೆ ನೀಡುತ್ತಲೇ ಬಂದಿದೆ ಅಂತೆಯೇ ಇಲ್ಲಿನ ಹಿರಿಯ ಕೈ ಶಾಸಕರು ಸಹ ಮಹಿಳಾ ಸಾಮರ್ಥ್ಯದ ಬಗ್ಗೆ ಹಿಯ್ಯಾಳಿಸಿ ಹೇಳಿಕೆ ನೀಡಿರುವುದು ಮಹಿಳೆಯರಿಗೆ ನೋವು ತಂದಿದೆ ಎಂದರು.

ಗಾಯತ್ರಿ ಸಿದ್ದೇಶ್ವರ್ ಅವರು ಜಿಲ್ಲೆಯನ್ನು ಅಭಿವೃದ್ಧಿಗೊಳಿಸುವ ಧ್ಯೇಯ ಹೊಂದಿದ್ದಾರೆ. ಆದ್ದರಿಂದ ಗಾಯತ್ರಿ ಸಿದ್ದೇಶ್ವರ್ ಅವರನ್ನು ಹೆಚ್ಚಿನ ಮತಗಳಿಂದ ಗೆಲ್ಲಿಸಿ ನಾರಿ ಶಕ್ತಿ ಪ್ರದರ್ಶಿಸುತ್ತೇವೆ ಎಂದು ಹೇಳಿದರು.

ಮಹಿಳಾ ಮುಖಂಡರಾದ ಜಯಮ್ಮ ಮಾತನಾಡಿ, ನಾರಿ ಶಕ್ತಿಯನ್ನು ವಿರೋಧಿಸಿದ ಕಾಂಗ್ರೆಸಿನ ವಿರುದ್ಧ ನಮ್ಮ ಹೋರಾಟವಾಗಿದೆ. ಹೇಳಿಕೆ ನೀಡಿದ ಕಾಂಗ್ರೆಸ್‌ನ ಶಾಸಕರು, ಎಲ್ಲ ಮಹಿಳೆಯರಿಗೆ ಕ್ಷಮಾಪಣೆ ಕೇಳುವುದೇ ನಮ್ಮ ಆಗ್ರಹ ಎಂದು ತಿಳಿಸಿದರು.

ಬಿಜೆಪಿ ಜಿಲ್ಲಾಧ್ಯಕ್ಷ ಎನ್. ರಾಜಶೇಖರ್, ಕೈಗಾರಿಕಾ ಪ್ರಕೋಷ್ಠದ ಕೆ.ಬಿ. ಕೊಟ್ರೇಶ್, ಧನಂಜಯ್ ಕಡ್ಲೆಬಾಳ್, ಅನಿಲ್ ಕುಮಾರ್ ನಾಯ್ಕ್, ಎ.ವೈ ಪ್ರಕಾಶ್, ಎಲ್.ಎನ್. ಕಲ್ಲೇಶ್, ಟಿಪ್ಪುಸುಲ್ತಾನ್, ಎಸ್.ಟಿ. ವೀರೇಶ್, ಸುಧಾ ಜಯರುದ್ರೇಶ್, ಉಪಮೇಯರ್ ಯಶೋಧಾ ಯಗ್ಗಪ್ಪ, ಮಹಿಳಾ ಮೋರ್ಚಾದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಭಾಗ್ಯ ಪಿಸಾಳೆ, ಉಮಾ ಪ್ರಕಾಶ್, ರೂಪಾ ಕಾಟ್ವೆ, ರೇಣುಕಾ ಶ್ರೀನಿವಾಸ್, ಗಾಯತ್ರಿ ಖಂಡೋಜಿರಾವ್, ನಾಗರತ್ನ ಕಾಟೆ, ವೀಣಾ ನಂಜಪ್ಪ ಮತ್ತಿತರರಿದ್ದರು.

## ಕೆಪಿಸಿಸಿ ಉಪಾಧ್ಯಕ್ಷರಾಗಿ ಪ್ರಭಾಕರಗೌಡ



ಹರಪನಹಳ್ಳಿ, ಏ. 3- ಕೆಪಿಸಿಸಿ ರಾಜ್ಯ ಉಪಾಧ್ಯಕ್ಷರಾಗಿ ಹರಪನಹಳ್ಳಿ ಪಟ್ಟಣದ ಎಸ್.ಪಿ. ಪ್ರಭಾಕರಗೌಡ ನೇಮಕಗೊಂಡಿದ್ದಾರೆ.

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ಶಿಫಾರಸ್ಸಿನ ಮೇರೆಗೆ ಎಐಸಿಸಿ ಪ್ರಧಾನ ಕಾರ್ಯದರ್ಶಿ ಕೆ.ಸಿ. ವೇಣುಗೋಪಾಲ ಅವರು ಈ ನೇಮಕಾತಿ ಆದೇಶ ಹೊರಡಿಸಿದ್ದಾರೆ.

## ದುಗ್ಗಮ್ಮ ದೇವಸ್ಥಾನದಿಂದ ಎಸ್ಸೆಸ್‌ಗೆ ಸನ್ಮಾನ

ದಾವಣಗೆರೆ, ಏ. 3 - ನಗರ ದೇವತೆ ಶ್ರೀ ದುರ್ಗಾಂಬಿಕಾ ದೇವಿ ಜಾತ್ರೆ ಯಶಸ್ವಿಯಾಗಿ ಸಮಾರೋಪಗೊಂಡ ಹಿನ್ನೆಲೆಯಲ್ಲಿ ಜಾತ್ರೆಯ ಸಾಂಸ್ಕೃತಿಕ ಸಭಾಂಗಣದಲ್ಲಿ (ದೇವಸ್ಥಾನದ ಮುಂಭಾಗದ ವೇದಿಕೆ)ಯಲ್ಲಿ ಹಿರಿಯ ಶಾಸಕ ಶಾಮನೂರು ಶಿವಶಂಕರಪ್ಪ ಅವರನ್ನು ದೇವಸ್ಥಾನದ ಸದಸ್ಯರಿಂದ ಸನ್ಮಾನಿಸಲಾಯಿತು. ಇದೇ ಸಂದರ್ಭದಲ್ಲಿ ದೇವಸ್ಥಾನದ ಆಡಳಿತ ಮಂಡಳಿ, ಕಮಿಟಿಯ ಸದಸ್ಯರು, ಪಾಲಿಕೆ ಸದಸ್ಯರು, ಧರ್ಮದರ್ಶಿಗಳು, ಶಾನುಭೋಗರು, ರೈತರು, ಭಕ್ತಾದಿಗಳು ಉಪಸ್ಥಿತರಿದ್ದರು.



## ತುಂಗಭದ್ರಾ ನದಿ ನೀರು ಪರಿಶೀಲಿಸಿದ ಜಿಲ್ಲಾಧಿಕಾರಿ



ದಾವಣಗೆರೆ, ಮಾ.ಏ. 3- ಹರಿಹರ ತುಂಗಭದ್ರಾ ನದಿಯಲ್ಲಿನ ನೀರು ಹರಿಹರದಿಂದ ಮುಂದಕ್ಕೆ ಸಾಗಿದ್ದು ನದಿಯಲ್ಲಿ ಎಷ್ಟು ಪ್ರಮಾಣದಲ್ಲಿ ನೀರು ಹರಿದು ಬರುತ್ತಿದೆ ಎಂದು ಹರಿಹರ ಸಮೀಪದ ಜಾಕ್‌ವೆಲ್‌ಗೆ ಬುಧವಾರ ಜಿಲ್ಲಾಧಿಕಾರಿ ಡಾ. ವೆಂಕಟೇಶ್ ಎಂ.ವಿ ಹಾಗೂ ಅಧಿಕಾರಿಗಳ ತಂಡ ಭೇಟಿ ನೀಡಿ ಪರಿಶೀಲನೆ ನಡೆಸಿತು.

ನೀರಾವರಿ ನಿಗಮದಿಂದ ಕುಡಿಯುವ ನೀರಿನ ಉದ್ದೇಶಕ್ಕಾಗಿ ಮಾರ್ಚ್ 29 ರಿಂದ ಪ್ರತಿನಿತ್ಯ 3 ಸಾವಿರ ಕ್ಯೂಸೆಕ್ಸ್‌ನಂತೆ ಭದ್ರಾ ನದಿಗೆ ನೀರು ಬಿಡಲಾಗುತ್ತಿದೆ. ಇದನ್ನು ಏಪ್ರಿಲ್ 5 ರ ವರೆಗೆ 3 ಸಾವಿರದಂತೆ ಮತ್ತು ಏ.6 ರ ಮಧ್ಯರಾತ್ರಿ ವರೆಗೆ 2200 ಕ್ಯೂಸೆಕ್ಸ್ ನೀರನ್ನು ಬಿಡಲಾಗುತ್ತಿದೆ.

**ರಂಜಾನ್ ರೋಜಾ ಸಮಯ**
**ದಿನಾಂಕ 04.04.2024**
**ಇಫ್ತಾರ್ ಸಮಯ : 6-42**
**ದಿನಾಂಕ 05.04.2024**
**ಸಹೇರಿ ಸಮಯ : 04-49**

## ನಗರದಲ್ಲಿ ಇಂದು ಮಜ್ಜಿಗೆ ವಿತರಣೆ

ಕರುಣಾ ಜೀವ ಕಲ್ಯಾಣ ಟ್ರಸ್ಟ್‌ನಿಂದ 1 ತಿಂಗಳು ನಡೆಸುತ್ತಿರುವ ಮಜ್ಜಿಗೆ ವಿತರಣಾ ಕಾರ್ಯಕ್ರಮಕ್ಕೆ ಯಶಾ ದಿನೇಶ್, ಡಿ.ಹೆಚ್.ಗುರುಸಿದ್ಧಸ್ವಾಮಿ, ಪ್ರಾಚಾರ್ಯರು, ಎಸ್.ಪಿ. ಚಂದ್ರ ದಾವಣಗೆರೆ ಇವರುಗಳು ಇಂದಿನ ದಾನಿಗಳಾಗಿದ್ದಾರೆ. ಈ ಸತ್ಕಾರ್ಯಕ್ಕೆ ದಾನ ಮಾಡ ಬಯಸುವವರು ಟ್ರಸ್ಟ್ ನಿರ್ದೇಶಕರಾದ ಮಂಜುಳಾ ಬಸವಲಿಂಗಪ್ಪ (7483809312) ಅವರನ್ನು ಸಂಪರ್ಕಿಸಬಹುದು.

## ಮೊದಲ ಹಂತದ 14 ಕ್ಷೇತ್ರಗಳ ನಾಮಪತ್ರ ಸಲ್ಲಿಕೆಗೆ ಇಂದು ಕೊನೆ ದಿನ

**ಏಪ್ರಿಲ್ 5, ನಾಮಪತ್ರ ಪರಿಶೀಲನೆ, ಏಪ್ರಿಲ್ 8, ನಾಮಪತ್ರ ಹಿಂಪಡೆಯಲು ಕೊನೆಯ ದಿನ**

ಬೆಂಗಳೂರು, ಏ. 3 - ರಾಜ್ಯದಲ್ಲಿ ಚುನಾವಣೆ ನಡೆಯಲಿರುವ ಮೊದಲ ಹಂತದ 14 ಲೋಕಸಭಾ ಕ್ಷೇತ್ರಗಳಿಗೆ ನಾಮಪತ್ರ ಸಲ್ಲಿಕೆಗೆ ನಾಳೆ, ಗುರುವಾರ ಕೊನೆಯ ದಿನ.

ಬುಧವಾರದಂದು ಅಭ್ಯರ್ಥಿಗಳು ದೊಡ್ಡ ಪ್ರಮಾಣದಲ್ಲಿ ನಾಮಪತ್ರ ಸಲ್ಲಿಸಿದ್ದಾರೆ. ರಾಜವಂಶಸ್ಥ ಯದುವೀರ್ ಕೃಷ್ಣದತ್ತ ಒಡೆಯರ್ ಮೈಸೂರು-ಕೊಡಗು ಕ್ಷೇತ್ರದಿಂದ, ಕೇಂದ್ರ ಸಚಿವೆ ಶೋಭಾ ಕರಂದ್ಲಾಜೆ ಬೆಂಗಳೂರು ಉತ್ತರ, ಮಾಜಿ ಸಚಿವ ವಿ.ಸೋಮಣ್ಣ ತುಮಕೂರು ಕ್ಷೇತ್ರದಿಂದ ಬಿಜೆಪಿ ಅಭ್ಯರ್ಥಿಗಳಾಗಿ ನಾಮಪತ್ರ ಸಲ್ಲಿಸಿದ್ದಾರೆ.

ಸಚಿವ ಮಹದೇವಪ್ಪ ಅವರ ಪುತ್ರ ಸುನೀಲ್ ಬೋಸ್ ಚಾಮರಾಜನಗರ ಕ್ಷೇತ್ರದಿಂದ, ಮನ್ಸೂರ್ ಆಲಿ ಖಾನ್ ಬೆಂಗಳೂರು ಕೇಂದ್ರ, ಕೆಪಿಸಿಸಿ ವಕ್ತಾರ ಲಕ್ಷ್ಮಣ್ ಮೈಸೂರು-ಕೊಡಗು ಕ್ಷೇತ್ರದಿಂದ, ಬೆಂಗಳೂರು ಉತ್ತರ ಕ್ಷೇತ್ರದಿಂದ ಪ್ರೊ.ಎಂ.ವಿ.ರಾಜೀವ್‌ಗೌಡ ಕಾಂಗ್ರೆಸ್ ಅಭ್ಯರ್ಥಿಗಳಾಗಿ ನಾಮಪತ್ರ ಸಲ್ಲಿಸಿದವರಲ್ಲಿ ಸೇರಿದ್ದಾರೆ.

ಏಪ್ರಿಲ್ 5 ರಂದು ನಾಮಪತ್ರ ಪರಿಶೀಲನೆ ನಡೆಯಲಿದ್ದು, ಏಪ್ರಿಲ್ 8 ರಂದು ನಾಮಪತ್ರ ಹಿಂಪಡೆಯಲು ಕೊನೆಯ ದಿನವಾಗಿದೆ.

ರಾಜ್ಯದಲ್ಲಿ ಮೊದಲ ಹಂತದಲ್ಲಿ ಮೈಸೂರು-ಕೊಡಗು, ಮಂಡ್ಯ, ಚಾಮರಾಜನಗರ, ಹಾಸನ, ಉಡುಪಿ-ಚಿಕ್ಕಮಗಳೂರು, ದಕ್ಷಿಣ ಕನ್ನಡ, ಚಿತ್ರದುರ್ಗ, ತುಮಕೂರು, ಬೆಂಗಳೂರು ಗ್ರಾಮಾಂತರ, ಬೆಂಗಳೂರು ಉತ್ತರ, ಬೆಂಗಳೂರು ಕೇಂದ್ರ, ಬೆಂಗಳೂರು ದಕ್ಷಿಣ, ಚಿಕ್ಕಬಳ್ಳಾಪುರ ಹಾಗೂ ಕೋಲಾರ ಲೋಕಸಭಾ ಕ್ಷೇತ್ರಗಳಿಗೆ ಏಪ್ರಿಲ್ 26ರಂದು ಮತದಾನ ನಡೆಯಲಿದೆ, ಜೂನ್ 4ರಂದು ಮತ ಎಣಿಕೆ ನಡೆದು ಅಂದೇ ಫಲಿತಾಂಶ ಪ್ರಕಟಗೊಳ್ಳಲಿದೆ.

# ರಾಹುಲ್ ಗಾಂಧಿ ರೋಡ್ ಶೋ ವೇಳೆ ಪಕ್ಷದ ಬಾವುಟವೇ ಇಲ್ಲ

ವಯನಾಡ್, ಏ. 3 – ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರು ಈ ಬಾರಿ ಕೇರಳದ ವಯನಾಡ್ ಲೋಕಸಭಾ ಕ್ಷೇತ್ರಕ್ಕೆ ನಾಮಪತ್ರ ದಾಖಲಿಸಲು ಬಂದ ಸಂದರ್ಭದಲ್ಲಿ ಕಾಂಗ್ರೆಸ್ ಸೇರಿದಂತೆ ಯಾವುದೇ ಮಿತ್ರ ಪಕ್ಷದ ಧ್ವಜ ಕಂಡು ಬರಲಿಲ್ಲ.

2019ರ ಚುನಾವಣೆಯಲ್ಲಿ ನಾಮಪತ್ರ ಸಲ್ಲಿಸಲು ರಾಹುಲ್ ಆಗಮಿಸಿದ ವೇಳೆ ಐ.ಯು.ಎಂ.ಎಲ್. ಪಕ್ಷದ ಧ್ವಜವೇ ಪ್ರಮುಖವಾಗಿ ರಾರಾಜಿಸಿತ್ತು.

ವಯನಾಡ್‌ನ ಕಲ್ಪೆಟ್ಟಾದಿಂದ ರೋಡ್ ಶೋ ಆಯೋಜಿಸಲಾಗಿತ್ತು. ಯು.ಡಿ.ಎಫ್.ನ ಎಲ್ಲಾ ಪ್ರಮುಖ ಮಿತ್ರ ಪಕ್ಷಗಳ ಕಾರ್ಯಕರ್ತರು ರೋಡ್ ಶೋನಲ್ಲಿ ಭಾಗಿಯಾಗಿದ್ದರು. ಯು.ಡಿ.ಎಫ್.ನ ಕಾರ್ಯಕರ್ತರು ರಾಹುಲ್ ಗಾಂಧಿ ಅವರ ಚಿತ್ರ ಹಾಗೂ ಕಾಂಗ್ರೆಸ್ ಪಕ್ಷದ ಹಸ್ತದ ಚಿಹ್ನೆಯನ್ನೇ ಪ್ರಮುಖವಾಗಿ ಪ್ರದರ್ಶಿಸಿದ್ದರು. ಕಾರ್ಯಕರ್ತರು ಧ್ವಜಗಳ ಬದಲು ವಿವಿಧ ಬಣ್ಣದ ಬಲೂನುಗಳನ್ನು ಹಿಡಿದುಕೊಂಡಿದ್ದರು.

2019ರಲ್ಲಿ ರಾಹುಲ್ ನಾಮಪತ್ರ ಸಲ್ಲಿಸಲು ಆಗಮಿಸಿದಾಗ ಐ.ಯು.ಎಂ.ಎಲ್. ಪಕ್ಷದ ಹಸಿರು ಬಾವುಟವೇ ಪ್ರಮುಖವಾಗಿ ರಾರಾಜಿಸಿತ್ತು. ಈ ಬಗ್ಗೆ ಪ್ರಸ್ತಾಪಿಸಿದ್ದ ಬಿಜೆಪಿ ನಾಯಕ ಅಮಿತ್ ಷಾ, ಇದೇನು ಭಾರತದ ಚುನಾವಣೆಯೇ ಅಥವಾ ಪಾಕಿಸ್ತಾನದ ಚುನಾವಣೆಯೇ? ಎಂದು ಲೇವಡಿ ಮಾಡಿದ್ದರು.

ಬಿಜೆಪಿ ಕೈಗೆ ಮತ್ತೆ ಟೀಕಿಸುವ ಅಸ್ತ್ರ ಕೊಡಬಾರದು ಹಾಗೂ ಕೋಮುವಾದಿ ಅಭಿಯಾನಕ್ಕೆ ಅವಕಾಶ ನೀಡಬಾರದು ಎಂದು ಈ ಬಾರಿ ಯಾವುದೇ ಪಕ್ಷದ ಧ್ವಜ ಪ್ರದರ್ಶಿಸಲಿಲ್ಲ ಎಂದು ಮೂಲಗಳು ತಿಳಿಸಿವೆ.

ಈ ನಡುವೆ, ಕಾಂಗ್ರೆಸ್ ತನ್ನ ಮಿತ್ರ ಪಕ್ಷವಾದ ಮುಸ್ಲಿಮ್ ಲೀಗ್‌ನ ಧ್ವಜ ಪ್ರದರ್ಶಿಸದೇ ಇರುವುದನ್ನು ಸಿಪಿಐ (ಎಂ) ತರಾಟೆಗೆ ತೆಗೆದುಕೊಂಡಿದೆ.

ಧ್ವಜಗಳನ್ನು ಪ್ರದರ್ಶಿಸಿದ್ದರೆ, ಕಾಂಗ್ರೆಸ್ ಪಕ್ಷದ ಧ್ವಜವೇ ಕಡಿಮೆ ಇರುತ್ತಿತ್ತು. ಕಾಂಗ್ರೆಸ್ ಹಾಗೂ ಮುಸ್ಲಿಂ ಲೀಗ್ ಧ್ವಜ ಒಟ್ಟಾಗಿ ಪ್ರದರ್ಶನಗೊಂಡಿದ್ದರೆ ಉತ್ತರ ಭಾರತದಲ್ಲಿ ಕಾಂಗ್ರೆಸ್ ಪರಿಸ್ಥಿತಿ ಏನಾಗಿರುತ್ತಿತ್ತು? ಹೀಗಾಗಿ ಎರಡೂ ಪಕ್ಷಗಳ ಧ್ವಜಗಳನ್ನು ಪ್ರದರ್ಶಿಸಿಲ್ಲ ಎಂದು ಸಿಪಿಐ (ಎಂ) ರಾಜ್ಯ ಕಾರ್ಯದರ್ಶಿ ಎಂ.ವಿ. ಗೋವಿಂದನ್ ಹೇಳಿದ್ದಾರೆ.

ಈ ಬಗ್ಗೆ ತಿರುಗೇಟು ನೀಡಿರುವ ಕಾಂಗ್ರೆಸ್ ಶಾಸಕ ಟಿ. ಸಿದ್ದಕಿ, ಧ್ವಜ ಮುಖ್ಯವಲ್ಲ, ಚಿಹ್ನೆ ಮುಖ್ಯ. ಬೇರೆ ಯಾವುದೇ ವಿಷಯ ಇಲ್ಲದೇ ಸಿಪಿಐ (ಎಂ) ಕೊಳಕು ರಾಜಕೀಯ ಮಾಡುತ್ತಿದೆ ಎಂದಿದ್ದಾರೆ.

## ವಿಕೋಪ ಪರಿಹಾರಕ್ಕಾಗಿ ಸುಪ್ರೀಂ ಕೋರ್ಟ್‌ನಲ್ಲಿ ತಮಿಳುನಾಡು ಅರ್ಜಿ

ನವದೆಹಲಿ, ಏ. 3 – ನೈಸರ್ಗಿಕ ವಿಕೋಪಕ್ಕೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರ ಪರಿಹಾರ ಬಿಡುಗಡೆ ಮಾಡುತ್ತಿಲ್ಲ ಎಂದು ಆರೋಪಿಸಿ ತಮಿಳುನಾಡು ಸರ್ಕಾರ ಸುಪ್ರೀಂ ಕೋರ್ಟ್‌ನಲ್ಲಿ ಅರ್ಜಿ ದಾಖಲಿಸಿದೆ.

ಎಂ.ಕೆ. ಸ್ಟಾಲಿನ್ ನೇತೃತ್ವದ ಡಿ.ಎಂ.ಕೆ. ಸರ್ಕಾರ ಸಂವಿಧಾನದ 131ನೇ ವಿಧಿಯ ಅನ್ವಯ ಸುಪ್ರೀಂ ಕೋರ್ಟ್‌ನಲ್ಲಿ ಅರ್ಜಿ ದಾಖಲಿಸಿದ್ದು, ವಿಕೋಪಗಳಿಗೆ ಸಂಬಂಧಿಸಿದ ನಿಧಿಯನ್ನು ಕೇಂದ್ರ ಸರ್ಕಾರ ತಡೆದಿದೆ ಎಂದು ಆರೋಪಿಸಿದೆ.

ಮಿಚೌಂಗ್ ಚಂಡಮಾರುತ ಹಾಗೂ ಪ್ರವಾಹಕ್ಕೆ ಸಂಬಂಧಿಸಿದಂತೆ 37 ಸಾವಿರ ಕೋಟಿ ರೂ.ಗಳ ಪರಿಹಾರ ಬಿಡುಗಡೆ ಮಾಡುವಂತೆ ಕೇಂದ್ರ ಸರ್ಕಾರಕ್ಕೆ ನಿರ್ದೇಶನ ನೀಡಬೇಕು. ಮಧ್ಯಂತರ ಪರಿಹಾರವಾಗಿ 2 ಸಾವಿರ ಕೋಟಿ ರೂ. ಬಿಡುಗಡೆ ಮಾಡಬೇಕು ಎಂದು ರಾಜ್ಯ ಸರ್ಕಾರ ಮನವಿ ಮಾಡಿಕೊಂಡಿದೆ. ಇತ್ತೀಚೆಗೆ ಕರ್ನಾಟಕ ಸರ್ಕಾರ ಸಹ ಬರ ಪರಿಸ್ಥಿತಿಗೆ ಸಂಬಂಧಿಸಿದಂತೆ ಪರಿಹಾರ ಬಿಡುಗಡೆ ಮಾಡಬೇಕು ಎಂದು ಸುಪ್ರೀಂ ಕೋರ್ಟ್‌ನಲ್ಲಿ ಅರ್ಜಿ ದಾಖಲಿಸಿತ್ತು.

## ವಿಠ್ಠಲನ ಪಾದ ಸ್ಪರ್ಶಕ್ಕೆ ಮೇ ತಿಂಗಳು 5 ರವರೆಗೆ ಅವಕಾಶವಿಲ್ಲ

ದಾವಣಗೆರೆ, ಏ. 2 - ಪಂಡರಾಪುರದಲ್ಲಿ ಶ್ರೀ ಪಾಂಡುರಂಗ ಸ್ವಾಮಿಯ ಪಾದ ಸ್ಪರ್ಶ ದರ್ಶನವನ್ನು ತಾತ್ಕಾಲಿಕವಾಗಿ ಬರುವ ಮೇ 5ರವರೆಗೆ ನಿಲ್ಲಿಸಲಾಗಿದೆ.

ಪ್ರತಿದಿನ ಮಂದಿರದ ಜೀರ್ಣೋದ್ಧಾರ ಕಾರ್ಯಕ್ರಮ ಭರದಿಂದ ಸಾಗಿದ್ದು, ಇದರ ಅಂಗವಾಗಿ ಶ್ರೀ ಪಾಂಡುರಂಗ ವಿಠ್ಠಲ ಮೂರ್ತಿಯ ಸಂರಕ್ಷಣೆಗಾಗಿ ಗರ್ಭ ಗುಡಿಯಲ್ಲಿ ಗುಂಡು ನಿರೋಧಕ ಗಾಜನ್ನು ಅಳವಾಡಿಸಲಾಗುತ್ತಿದೆ. ಅಲ್ಲಿದ್ದ ಬೆಳ್ಳಿಯ ಮಂಟಪದ ಅಲಂಕಾರವನ್ನು ತೆರವುಗೊಳಿಸಲಾಗಿದೆ. ಗ್ರಾನೈಟ್ ಅಳವಡಿಸುವ ಕಾಮಗಾರಿ ಮತ್ತು ಇತರೇ ಕಾಮಗಾರಿಗಳು ನಡೆಯುತ್ತಿವೆ.

ಇದೇ ರೀತಿ ಶ್ರೀ ರುಕ್ಮಿಣಿದೇವಿ ಮಂದಿರದ ಕಾಮಗಾರಿಗಳು ಸಾಗಿದ್ದು, ಇವೆಲ್ಲವು ಪುರಾತತ್ವ ಇಲಾಖೆಯ ಮಾರ್ಗದರ್ಶನದಲ್ಲಿ ನಡೆಯುತ್ತಿವೆ.



ಕಾರಣ, ಬೆಳಿಗ್ಗೆ 8 ರಿಂದ 10ರವರೆಗೆ ದೂರದ ದರ್ಶನಕ್ಕೆ ಮಾತ್ರ ಅವಕಾಶ ಕಲ್ಪಿಸಲಾಗಿದೆ.

ಮಂದಿರವು 700 ವರ್ಷಗಳ ಹಿಂದೆ ಇದ್ದ ರೀತಿಯಲ್ಲಿ ಕಾಣಸಿಗುವಂತೆ ಮಾಡಲಾಗುತ್ತಿದೆ. ಅಂದರೆ ಶ್ರೀ ಪಾಂಡುರಂಗನು ತನ್ನ ಲೀಲಾವಿನೋದವನ್ನು ತೋರಿಸಿದ ಸಂತ ಮಣಿಗಳಾದ ಶ್ರೀ ಸಂತ ಶಿರೋಮಣಿ ನಾಮದೇವ ಮಹಾರಾಜರು, ಶ್ರೀ ಸಂತ ಏಕನಾಥರು, ಶ್ರೀ ಜ್ಞಾನೇಶ್ವರು, ಶ್ರೀ ನಿವೃತ್ತಿನಾಥರು, ಶ್ರೀ ಸಂತ ತುಕಾರಾಮರು ಇನ್ನೂ ಅನೇಕ ಸಂತ ಮಣಿಗಳು ಅವರಿದ್ದ ಕಾಲದಲ್ಲಿ ಇದ್ದ ರೀತಿಯಲ್ಲಿ ಕಾಣಸಿಗುವಂತೆ ಮಾಡಲಾಗುತ್ತದೆ.

ದೇವಲಾಯದ ಎಲ್ಲಾ ಕಂಬಗಳನ್ನು ಶುಚಿಗೊಳಿಸಿ ಹಿಂದಿನ ವೈಭವಗಳೊಂದಿಗೆ ಸಜ್ಜುಗೊಳಿಸಲಾಗುತ್ತಿದೆ ಎಂದು ಮಂದಿರದ ಕಾರ್ಯಾಧಿಕಾರಿ ರಾಜೇಂದ್ರ ಶೇಳಿಕೆ ಮಾಹಿತಿ ನೀಡಿದರು.

ಈ ಹಿನ್ನೆಲೆಯಲ್ಲಿ ಪಂಡರಾಪುರಕ್ಕೆ ತೆರಳುವ ಭಕ್ತರು ಮೇ 5ರ ನಂತರ ತೆರಳಿ ಶ್ರೀ ಪಾಂಡುರಂಗ ಪಾದಸ್ಪರ್ಶ ದರ್ಶನ ಭಾಗ್ಯವನ್ನು ಪಡೆಯಬಹುದು ಎಂದು ಅವರು ವಿವರಿಸಿದ್ದಾರೆ.

## ನಗರಕ್ಕೆ ರಾಜ್ ಮೊಮ್ಮಗ ಯುವರಾಜ್



ದಾವಣಗೆರೆ, ಏ.3- ಮಾರ್ಚ್ 29ರಂದು ಬಿಡುಗಡೆಯಾದ 'ಯುವ' ಚಲನಚಿತ್ರದ ಅಂಗವಾಗಿ ಡಾ. ರಾಜ್‌ಕುಮಾರ್ ಅವರ ಮೊಮ್ಮಗ, ಯುವರಾಜ್ ಕುಮಾರ್ ಮತ್ತು ಚಿತ್ರತಂಡದವರು ಬುಧವಾರ ನಗರದ ಅಶೋಕ ಚಿತ್ರಮಂದಿರಕ್ಕೆ ಆಗಮಿಸಿದ್ದರು.

ಚಲನಚಿತ್ರ ನಾಯಕ ಯುವ ರನ್ನು ಸನ್ಮಾನಿಸುವ ಮೂಲಕ ಸ್ವಾಗತಿಸಿಕೊಂಡ ಅಭಿಮಾನಿಗಳು, ಅಪ್ಪು-ಅಪ್ಪು ಎಂಬ ಜಯಘೋಷವನ್ನು ಹಾಕುತ್ತಾ, ಪಟಾಕಿ ಸಿಡಿಸಿ ಸಂಭ್ರಮಿಸಿದರು.

ಯುವರಾಜ್‌ರ ಜೊತೆ ಫೋಟೋ ಮತ್ತು ಸೆಲ್ಫಿ ಕ್ಲಿಕ್ಕಿಸಿಕೊಳ್ಳುವಲ್ಲಿ ಅಭಿಮಾನಿಗಳು ಮಗ್ನರಾಗಿದ್ದರು, ಇದೇ ವೇಳೆ ಅಭಿಮಾನಿಗಳಿಂದ ಹೆಚ್ಚಿನ ನೂಕುನುಗ್ಗಲು ಉಂಟಾಗಿತ್ತು.

# ರಂಭಾಪುರಿ ಶ್ರೀಗಳ 33ನೇ ಪೀಠಾರೋಹಣದ ಸಂಭ್ರಮಕ್ಕೆ ಅಡ್ಡಪಲ್ಲಕ್ಕಿ

## ರಾಣೇಬೆನ್ನೂರು : ಲಿಂಗದಹಳ್ಳಿಯಲ್ಲಿ ಶ್ರೀ ಸ್ವಯಂಭು ಸೋಮೇಶ್ವರ ಮಾಂಗಲ್ಯ ಮಂದಿರದ ಉದ್ಘಾಟನೆ

ರಾಣೇಬೆನ್ನೂರು, ಏ.3- ವೀರಶೈವ ಧರ್ಮದಲ್ಲಿ ಕಾಯಕ ಧರ್ಮಕ್ಕೆ ಬಹಳಷ್ಟು ಪ್ರಾಮುಖ್ಯತೆ ಕೊಟ್ಟಿದ್ದಾರೆ. ಕ್ರಿಯಾಶೀಲ ಬದುಕು ಶ್ರೇಯಸ್ಸಿಗೆ ಮೂಲ. ಸಮುದಾಯದ ಅಭಿವೃದ್ಧಿಗೆ ರಚನಾತ್ಮಕ ಕಾರ್ಯಗಳನ್ನು ಕೈಗೊಳ್ಳಬೇಕೆಂದು ರಂಭಾಪುರಿ ಪೀಠದ ಡಾ. ವೀರ ಸೋಮೇಶ್ವರ ಶಿವಾಚಾರ್ಯ ಸ್ವಾಮೀಜಿ ಅಭಿಪ್ರಾಯಪಟ್ಟರು.

ತಾಲ್ಲೂಕಿನ ಲಿಂಗದಹಳ್ಳಿ ಹಿರೇಮಠದಲ್ಲಿ ನಿರ್ಮಿಸಿದ ಶ್ರೀ ಸ್ವಯಂಭು ಸೋಮೇಶ್ವರ ಮಾಂಗಲ್ಯ ಮಂದಿರ ಉದ್ಘಾಟಿಸಿ, ಇಷ್ಟಲಿಂಗ ಮಹಾಪೂಜೆ ನೆರವೇರಿಸಿ ಶ್ರೀಗಳು ಆಶೀರ್ವಚನ ನೀಡಿದರು.

ಭಗವಂತನಿತ್ತ ಕೊಡುಗೆಗೆ ಸರಿ ಸಾಟಿಯಾದುದು ಇನ್ನೊಂದಿಲ್ಲ. ಆ ಭಗವಂತ ಕೊಟ್ಟಿರುವುದನ್ನು ಸದುಪಯೋಗ ಪಡಿಸಿಕೊಳ್ಳಬೇಕಾದುದು ಮನುಷ್ಯನ ಧರ್ಮವಾಗಿದೆ ಎಂದರು.

ದುಡಿಮೆಯಿಲ್ಲದ ಮತ್ತು ಶ್ರಮ ಪಡದೇ ಸಂಪತ್ತು ಬಯಸುವವರು ಬಹಳ ಜನರಿದ್ದಾರೆ. ಶ್ರಮದಿಂದ ಸಂಪಾದಿಸಿದ ಸಂಪತ್ತು ಸುಖ, ಶಾಂತಿ ತಂದು ಕೊಡಬಲ್ಲದು. ಶ್ರಮ ಪಡದ ಸಂಪತ್ತು ಶಾಶ್ವತವಲ್ಲ ಎಂದು ಹೇಳಿದರು.

ಜೀವನೋತ್ಸಾಹಕ್ಕೆ ಯೋಗ್ಯ ಮಾರ್ಗದರ್ಶನ ಮತ್ತು ಸಂಸ್ಕಾರ ಕೊಟ್ಟರೆ ಬದುಕಿನಲ್ಲಿ ನೆಮ್ಮದಿ ಕಾಣಲು ಸಾಧ್ಯವಾಗುತ್ತದೆ. ಲಿಂಗದಹಳ್ಳಿ ಹಿರೇಮಠದ ವೀರಭದ್ರ ಶಿವಾಚಾರ್ಯ ಸ್ವಾಮೀಜಿ ಕಾಯಕ ಧರ್ಮ ಅನುಸರಿಸಿ ಭೌತಿಕ ಮಾರ್ಗದಲ್ಲಿ ನಡೆಯುವ ಜನ ಸಮುದಾಯಕ್ಕೆ ದಿಕ್ಸೂಚಿಯಾಗಿದ್ದಾರೆ. ಅವರ ಸರಳತೆ ಮತ್ತು ಮುಗ್ಧ ಮನೋಭಾವದಿಂದಾಗಿ ಭಕ್ತ ಸಂಕುಲದ ಸಂತೋಷಕ್ಕೆ ಕಾರಣರಾಗಿದ್ದಾರೆ ಎಂದು ಹೇಳಿ, ಶ್ರೀಗಳವರಿಗೆ ಶ್ರೀ ಪೀಠದಿಂದ ರೇಷ್ಮೆ ಮಡಿ ಫಲ-ಪುಷ್ಪ ಸ್ಮರಣಿಕೆ ನೀಡಿ ಶುಭ ಹಾರೈಸಿದರು.



ನೇತೃತ್ವ ವಹಿಸಿದ್ದ ಶ್ರೀ ವೀರಭದ್ರ ಶಿವಾಚಾರ್ಯ ಸ್ವಾಮೀಜಿ ಮಾತನಾಡಿ, ಹಿರೇಮಠದ ಇತಿಹಾಸದಲ್ಲಿ ಇವತ್ತಿನ ದಿನ ಅವಿಸ್ಮರಣೀಯವಾದ ಪವಿತ್ರ ದಿನವಾಗಿದೆ. ಶ್ರೀ ರಂಭಾಪುರಿ ಜಗದ್ಗುರುಗಳವರ ಮಾರ್ಗದರ್ಶನದಲ್ಲಿ ಲಿಂಗದಹಳ್ಳಿ ಹಿರೇಮಠದ ಅಭಿವೃದ್ಧಿ ಮಾಡಿರುವೆ. ಈ ಭಾಗದ ಭಕ್ತರಿಗೆ ಸಂಸ್ಕಾರ, ಸದ್ವಿಚಾರಗಳನ್ನು ಮನೆ ಮನಕ್ಕೆ ಮುಟ್ಟಿಸಿದ ಸಂತೃಪ್ತ ಮನೋಭಾವ ನಮ್ಮದಾಗಿದೆ ಎಂದು ತಿಳಿಸಿದರು.

ಕಣ್ವಕುಪ್ಪಿ ಗವಿಮಠದ ಡಾ. ನಾಲ್ವಡಿ ಶಾಂತಲಿಂಗ ಶಿವಾಚಾರ್ಯರು, ಮಳಲಿ ಸಂಸ್ಥಾನ ಮಠದ ಡಾ. ನಾಗಭೂಷಣ ಶಿವಾಚಾರ್ಯರು, ರಟ್ಟಿಹಳ್ಳಿ ಕಬ್ಬಿಣ ಕಂಥಿ ಮಠದ ಶ್ರೀ ಶಿವಲಿಂಗ ಶಿವಾಚಾರ್ಯರು, ಹಾರನಹಳ್ಳಿ ಶ್ರೀ ಶಿವಯೋಗಿ ಶಿವಾಚಾರ್ಯರು, ನೆಗಳೂರು ಹಿರೇಮಠದ ಶ್ರೀ ಗುರುಶಾಂತೇಶ್ವರ ಶಿವಾಚಾರ್ಯರು, ಕಡೇನಂದಿಹಳ್ಳಿ ರೇವಣಸಿದ್ಧ ಶಿವಾಚಾರ್ಯರು, ನಾಗವಂದ ಹೊರಗಿನಮಠದ ಶ್ರೀ ಶಿವಾನಂದ ಶಿವಾಚಾರ್ಯರು ಪಾಲ್ಗೊಂಡು ನುಡಿ ನಮನ ಸಲ್ಲಿಸಿದರು.

ರಂಭಾಪುರಿ ಜಗದ್ಗುರುಗಳ 33ನೇ ವರ್ಷದ ಪೀಠಾರೋಹಣದ ಹಿನ್ನೆಲೆಯಲ್ಲಿ ಗ್ರಾಮದಲ್ಲಿ ಅಡ್ಡಪಲ್ಲಕ್ಕಿ ಮಹೋತ್ಸವ, ಸ್ವಯಂಭು ಸೋಮೇಶ್ವರ ಮಾಂಗಲ್ಯ ಮಂದಿರ ಲೋಕಾರ್ಪಣೆ ಮತ್ತು ಶ್ರೀ ರಂಭಾಪುರಿ ಜಗದ್ಗುರುಗಳವರ ಇಷ್ಟಲಿಂಗ ಮಹಾಪೂಜೆ ನೆರವೇರಿದವು. ಸಹಸ್ರಾರು ಭಕ್ತರು ಪಾಲ್ಗೊಂಡು ಶ್ರೀ ರಂಭಾಪುರಿ ಜಗದ್ಗುರುಗಳವರ ಆಶೀರ್ವಾದ ಪಡೆದರು. ಹುಬ್ಬಳ್ಳಿಯ ಮಹಿಳಾ ಮಂಡಳದ ಸದಸ್ಯರಿಂದ ಭಕ್ತಿ ಗೀತೆ ಜರುಗಿತು. ಮಾಸೂರಿನ ಗುರುಪ್ರಸಾದ್ ಹಿರೇಮಠ ನಿರೂಪಿಸಿದರು.

## ಎಂಐ ವಿಂಗ್ಸ್ ಪ್ರಿ ಸ್ಕೂಲ್ ವಾರ್ಷಿಕೋತ್ಸವದಲ್ಲಿ ಚಿಣ್ಣರ ಸಂಭ್ರಮ



ದಾವಣಗೆರೆ, ಏ. 3 - ನಗರದ ವನಿತಾ ಸಮಾಜದ ಸಭಾಂಗಣದಲ್ಲಿ ನಿನ್ನೆ ನಡೆದ ಎಂ.ಐ. ವಿಂಗ್ಸ್ ಶಾಲಾ ವಾರ್ಷಿಕೋತ್ಸವದಲ್ಲಿ ಚಿಣ್ಣರು ಕುಣಿದು ಕುಪ್ಪಳಿಸಿದರು.

ಮಕ್ಕಳ ನೃತ್ಯ ಪ್ರದರ್ಶನಗಳು, ಹಾಡು, ಭಾಷಣ ಪ್ರೇಕ್ಷಕರಿಗೆ ಮುದವನ್ನು ತಂದಿತು. ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ದಾವಣಗೆರೆ ದಕ್ಷಿಣ ಬಿಇಓ ಪುಷ್ಪಲತಾ ಅವರು ಶಾಲೆಯ ವಿಭಿನ್ನವಾದ ಪರಿಕಲ್ಪನೆಯನ್ನು ಪ್ರಶಂಶಿಸಿದರಲ್ಲದೇ, ಪೋಷಕರಿಗೆ ಮಾರ್ಗದರ್ಶನ ನೀಡಿದರು.

ಮುಖ್ಯ ಅತಿಥಿಯಾಗಿ ಆಗಮಿಸಿದ್ದ ಡಾ. ಛಾಯಾ ಕೆ.ಎ. ಮಕ್ಕಳ ಆರೋಗ್ಯವನ್ನು ಕಾಪಾಡುವುದರ ಬಗ್ಗೆ ಪೋಷಕರಿಗೆ ಹಲವಾರು ವಿಷಯಗಳನ್ನು ತಿಳಿಸಿಕೊಟ್ಟರು. ಶಾಲೆಯ ಸಂಸ್ಥಾಪಕರಾದ ಶ್ರೀಮತಿ ದೀಪ ಎನ್.ರಾವ್ ಪ್ರತಿಯೊಂದು ಮಕ್ಕಳ ಮಲ್ಟಿಪಲ್ ಇಂಟಲಿಜೆನ್ಸ್‌ನಲ್ಲಿ ಉಂಟಾದ ಬೆಳವಣಿಗೆಗಳ ಬಗ್ಗೆ ತಿಳಿಸಿದರು. ಶಾಲೆಯ ನಿರ್ದೇಶಕ ವೆಂಕಟೇಶ ಬಿ.ಟಿ ವೇದಿಕೆಯಲ್ಲಿ ಉಪಸ್ಥಿತರಿದ್ದರು.

KA/SK/DVG-028/2024-2026. O/P @ B.V. Nagar P.O. **JANATHAVANI** - Published, Owned and Printed by M.S. Vikas, at Jayadhara Offset Printers, # 605, Hadadi Road, Davangere - 5, Published from # 605, Hadadi Road, Davangere - 5. Editor: M.S. Vikas